ಸಂಪುಟ: ೦೭/ ಸಂಚಿಕೆ: ೧೮೯/ ಮಂಗಳವಾರ ದಿನಾಂಕ : ೧೬-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 189/ TUESDAY Date : 16-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ಸುಂಕದ ವಿವಾದ: ಭಾರತ-ಅಮೆರಿಕ ವ್ಯಾಪಾರ ಮಾತುಕತೆ

**ಮುಂಬೈ:** ಸುಂಕದ ವಿವಾದ, ರಷ್ಯಾದ ತೈಲ ಖರೀದಿಯ ಮೇಲಿನ ಒತ್ತಡದ ನಡುವೆ ಮಂಗಳವಾರ ಭಾರತ ಮತ್ತು ಅಮೆರಿಕ ನವದೆಹಲಿಯಲ್ಲಿ ವ್ಯಾಪಾರ ಮಾತುಕತೆಗಳನ್ನು ನಡೆಸಲಿವೆ ಎಂದು ಅಧಿಕಾರಿಗಳು ತಿಳಿಸಿದ್ದು ಉಭಯ ದೇಶಗಳು ಸುಂಕದ ವಿವಾದವನ್ನು ಪರಿಹರಿಸಲು ಪ್ರಯತ್ನಿಸುತ್ತಿವೆ ಎಂದು ಹೇಳಿದ್ದಾರೆ. ವಿಶ್ವದ ಅತ್ಯಂತ ಜನಸಂಖ್ಯೆ ಹೊಂದಿರುವ ದೇಶವು ಪ್ರಸ್ತುತ ತನ್ನ ಹೆಚ್ಚಿನ ರಫ್ತುಗಳ ಮೇಲೆ ಅಮೆರಿಕದ ತೀವ್ರ ಸುಂಕಗಳನ್ನು ಎದುರಿಸುತ್ತಿದೆ. ಈ ಹೊರೆಯನ್ನು ಕಡಿಮೆ ಮಾಡುವ ವ್ಯಾಪಾರ ಒಪ್ಪಂದಕ್ಕೆ ಬರಲು ಇದುವರೆಗೆ ವಿಫಲವಾಗಿದೆ. ಉಕ್ರೇನ್ ಹಾಗೂ ರಷ್ಯಾ ನಡುವಿನ ಯುದ್ಧವನ್ನು ನಿಲ್ಲಿಸುವ ಸಲುವಾಗಿ ರಷ್ಯಾ ಮೇಲೆ ಒತ್ತಡ ಹೇರಲು ಪ್ರಯತ್ನಿಸುತ್ತಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಭಾರತದ ಮೇಲೆ ಸುಂಕ ಸಮರ ನಡೆಸಿದ್ದಾರೆ. ರಷ್ಯಾದ ತೈಲ ಖರೀದಿಯನ್ನು ಮುಂದುವರೆಸಿದ್ದಕ್ಕೆ ಪ್ರತೀಕಾರವಾಗಿ ಕಳೆದ ತಿಂಗಳು ಭಾರತದ ಮೇಲಿನ ಸುಂಕವನ್ನು ಶೇಕಡಾ 50ಕ್ಕೆ ಹೆಚ್ಚಿಸಿದ್ದು ಉಭಯ ರಾಷ್ಟ್ರಗಳ ನಡುವಿನ ಸಂಬಂಧವನ್ನು ಹದಗೆಡಿಸಿದೆ. ಇದರ ಮಧ್ಯೆಯೇ ಉಭಯ ದೇಶಗಳ ನಾಯಕರು ಇತ್ತೀಚೆಗೆ ನಿರಂತರ ಮಾತುಕತೆಗಳಿಗೆ ಬದ್ಧರಾಗಿದ್ದೇವೆ ಎಂದು ಹೇಳಿದ್ದರು.

## ಶಹಾಜಹಾನ್ ಪುರದಲ್ಲಿ ಕೋಮು ಉದ್ವಿಗ್ನತೆ

**ಲಕ್ನೋ:** ಪ್ರವಾದಿ ಮುಹಮ್ಮದ್ ಹಾಗೂ ಪವಿತ್ರ ಕುರ್‌ಆನ್ ಅನ್ನು ಗುರಿಯಾಗಿರಿಸಿ ಸಾಮಾಜಿಕ ಮಾಧ್ಯಮದಲ್ಲಿ ಆಕ್ಷೇಪಾರ್ಹ ಪೋಸ್ಟ್‌ಗಳನ್ನು ಹಾಕಿದ ಕುರಿತು ಭುಗಿಲೆದ್ದ ಪ್ರತಿಭಟನೆಗೆ ಸಂಬಂಧಿಸಿ ಶಹಾಜಹಾನ್ ಪುರ ಜಿಲ್ಲಾ ಪೊಲೀಸರು ಸೋಮವಾರ 200 ಮಂದಿ ಅನಾಮಿಕರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಪ್ರವಾದಿ ಮುಹಮ್ಮದ್ ಹಾಗೂ ಕುರ್‌ಆನ್ ವಿರುದ್ಧ ಸಾಮಾಜಿಕ ಮಾಧ್ಯಮದಲ್ಲಿ ಅವಹೇಳನಕಾರಿ ವಿಷಯವನ್ನು ಪೋಸ್ಟ್ ಮಾಡಿರುವುದಕ್ಕಾಗಿ ಕೇಂದ್ರ ಉತ್ತರಪ್ರದೇಶದಿಂದ 45 ವರ್ಷದ ವ್ಯಕ್ತಿಯೋರ್ವನನ್ನು ಬಂಧಿಸಿದ ಬಳಿಕ ಈ ಘಟನೆ ನಡೆದಿದೆ.ಈ ವ್ಯಕ್ತಿಯನ್ನು ಬಂಧಿಸಿದ ಬಳಿಕ ಸುಮಾರು ರಾತ್ರಿ 9 ಗಂಟೆಗೆ ಹಲವರು ಪೊಲೀಸ್ ಠಾಣೆಗೆ ನುಗ್ಗಲು ಪ್ರಯತ್ನಿಸಿದರು ಹಾಗೂ ಅವಹೇಳನಕಾರಿ ಪೋಸ್ಟ್‌ನ ವಿರುದ್ಧ ಘೋಷಣೆಗಳನ್ನು ಕೂಗಿದರು. ಪ್ರತಿಭಟನೆ ಕೂಡಲೇ ಹಿಂಸಾಚಾರಕ್ಕೆ ತಿರುಗಿತು, ಕೆಲವು ಪ್ರತಿಭಟನಕಾರರು ಎರಡು ದ್ವಿಚಕ್ರ ವಾಹನಗಳಿಗೆ ಬೆಂಕಿ ಹಚ್ಚಿದರು.ಆರೋಪಿಗಳನ್ನು ಈಗಾಗಲೇ ಬಂಧಿಸಲಾಗಿದೆ ಎಂದು ಪೊಲೀಸರು ಜನರಿಗೆ ತಿಳಿಸಿದರೂ ಅವರು ಹಿಂದೆ ಸರಿಯಲು ನಿರಾಕರಿಸಿದರು. ಪ್ರತಿಭಟನಕಾರರನ್ನು ಚದುರಿಸಲು ಪೊಲೀಸರು ಲಾಠಿ ಪ್ರಹಾರ ನಡೆಸಿದರು ಎಂದು ಶಹಾಜಹಾನಪುರದ ಪೊಲೀಸ್ ಅಧೀಕ್ಷಕ ರಾಜೇಶ್ ದ್ವಿವೇದಿ ಹೇಳಿದ್ದಾರೆ. ಅನಂತರ ಪ್ರತಿಭಟನಕಾರರು ಲಾಲ್ ಇಮ್ಲಿ ಕ್ರಾಸಿಂಗ್ ನಲ್ಲಿ ರಸ್ತೆ ತಡೆ ನಡೆಸಿದರು.

# ಕೃಷಿ ವಿವಿಗಳು ಹೆಚ್ಚಿನ ಅಧ್ಯಯನ ನಡೆಸಿ ಪರಿಹಾರ ಹುಡುಕಬೇಕು

**ಹುಬ್ಬಳ್ಳಿ:** ಕೃಷಿಕ್ರಾಂತಿ–ಹಸಿರು ಕ್ರಾಂತಿ ವೇಗದಲ್ಲಿ ಆಹಾರ ಉತ್ಪಾದನೆ ಆಗುತ್ತಿಲ್ಲ. ಈ ಬಗ್ಗೆ ಕೃಷಿ ವಿಶ್ವವಿದ್ಯಾಲಯಗಳು ಹೆಚ್ಚಿನ ಅಧ್ಯಯನ ನಡೆಸಿ, ಪರಿಹಾರ ಹುಡುಕಿ ರೈತಸ್ನೇಹಿ ಆಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಸೋಮವಾರ ಧಾರವಾಡ ಕೃಷಿ ವಿಶ್ವವಿದ್ಯಾಲಯ ಆಯೋಜಿಸಿದ್ದ ಕೃಷಿ ಮೇಳವನ್ನು ಉದ್ಘಾಟಿಸಿ, ಶ್ರೇಷ್ಠ ಕೃಷಿಕ ಮತ್ತು ಕೃಷಿ ಮಹಿಳೆ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು.

ಸ್ವಾತಂತ್ರ್ಯದ ಹೊಸ್ತಿಲಲ್ಲಿ ಆಹಾರ ಉತ್ಪಾದನೆಯಲ್ಲಿ ಹಿಂದೆ ಇದ್ದೆವು. ಬಳಿಕ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆ ಬೆಳೆಸಿಕೊಂಡು ರಫ್ತು ಮಾಡುವುದರಲ್ಲೂ ಮುಂದೆ ಬಂದೆವು. ಆದರೆ, ಇತ್ತೀಚಿಗೆ ಆಹಾರದ ಫಲವತ್ತತೆ ಕಡಿಮೆ ಆಗುತ್ತಾ ಆಹಾರ ಉತ್ಪಾದನಾ ಪ್ರಮಾಣ ಕಡಿಮೆ ಆಗಿದೆ ಎಂದು ಅವರು ಹೇಳಿದರು.

ಇದಕ್ಕೆ ಸ್ಪಷ್ಟ ಕಾರಣಗಳನ್ನು ಗುರುತಿಸಿ ಪರಿಹಾರ ಕಂಡುಕೊಳ್ಳುವ ದಿಕ್ಕಿನಲ್ಲಿ ಕೃಷಿ ವಿಶ್ವವಿದ್ಯಾಲಯಗಳು ಹೆಚ್ಚೆಚ್ಚು ಅಧ್ಯಯನ ನಡೆಸಿ. ಅಗತ್ಯವಾದ ಹಣಕಾಸಿನ ನೆರವನ್ನು ಸಂಪೂರ್ಣವಾಗಿ ಒದಗಿಸಲು ಸರಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ರಾಜ್ಯವು ಹಾಲು ಉತ್ಪಾದನೆಯಲ್ಲಿ ಇಡೀ ದೇಶದಲ್ಲಿ ಎರಡನೇ ಸ್ಥಾನದಲ್ಲಿದೆ. ಸದ್ಯದಲ್ಲೆ ಮಹಾರಾಷ್ಟ್ರ ರಾಜ್ಯವನ್ನು ಹಿಂದಿಕ್ಕಿ ನಾವೆ ನಂಬರ್



ಆದರೂ ಆಶ್ಚರ್ಯವಿಲ್ಲ. ಹೈನುಗಾರಿಕೆಯಲ್ಲಿ ನಾವು ಅಪಾರ ಪ್ರಗತಿ ಸಾಧಿಸಿದ್ದೇವೆ ಎಂದು ಸಿದ್ದರಾಮಯ್ಯ ಹೇಳಿದರು.

ಅಕ್ಕಿ, ರಾಗಿ, ಗೋಧಿಯಲ್ಲಿ ಸಕ್ಕರೆಯ ಪ್ರಮಾಣ ಹೆಚ್ಚಾಗಿದ್ದು ಡಯಾಬಿಟಿಕ್ ಸಮಸ್ಯೆ ಇರುವವರ ಪ್ರಮಾಣ ಹೆಚ್ಚುತ್ತಿದೆ. ಆದುದರಿಂದ, ಸಕ್ಕರೆ ಪ್ರಮಾಣ ಕಡಿಮೆ ಇರುವ ಸಿರಿಧಾನ್ಯ ಕೃಷಿಗೆ ಹೆಚ್ಚೆಚ್ಚು ಪ್ರೋತ್ಸಾಹ ನೀಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ತಿಳಿಸಿದರು. ಕೃಷಿ ವಿಶ್ವವಿದ್ಯಾಲಯಗಳು ಪ್ರಯೋಗಾಲಯದಿಂದ ಭೂಮಿ(ಲ್ಯಾಬ್ ಟು ಲ್ಯಾಂಡ್) ಜೊತೆಗೆ ಭೂಮಿಯಿಂದ ಪ್ರಯೋಗಾಲಯ(ಲ್ಯಾಂಡ್ ಟು ಲ್ಯಾಬ್) ಕಡೆಗೆ ಗಮನ ಹರಿಸುವ ಕೆಲಸ ಮಾಡಬೇಕು. ಕಡಿಮೆ ಮಳೆಯಲ್ಲೂ ಉತ್ತಮ ಬೆಳೆ ಬೆಳೆಯುವ ರೀತಿ ಸುಸ್ಥಿರ ಕೃಷಿಗೆ ಪೂರಕವಾಗಿ ಅಧ್ಯಯನಗಳು ನಡೆಯಬೇಕು ಎಂದು ಕೃಷಿ ವಿವಿಗಳಿಗೆ ಅವರು ಕರೆ ನೀಡಿದರು. ಮೊದಲೆಲ್ಲಾ ಕೃಷಿ ಚಟುವಟಿಕೆಗೆ ಪೂರಕವಾಗಿ ಗ್ರಾಮ ಸಹಾಯಕರು ಇದ್ದು ಅವರು ಗ್ರಾಮಗಳಲ್ಲೆ ನೆಲೆಸುತ್ತಿದ್ದರು. ಈಗ ಇವರ ಸಂಖ್ಯೆ ಕಡಿಮೆ ಆಗಿದ್ದು ಮತ್ತೆ ಇವರ ಪ್ರಮಾಣ ಹೆಚ್ಚಾಗುವ ದಿಕ್ಕಿನಲ್ಲಿ ಕ್ರಮ ತೆಗೆದುಕೊಳ್ಳುವಂತೆ ಕೃಷಿ ಸಚಿವ ಚಲುವರಾಯಸ್ವಾಮಿ ಅವರಿಗೆ ಮುಖ್ಯಮಂತ್ರಿ ಸೂಚಿಸಿದರು. ಕೃಷಿ ಭೂಮಿಗಳು ಹೆಚ್ಚಾಗದೆ, ಕೃಷಿಯ ಪ್ರಮಾಣ ಹೆಚ್ಚಾಗದೆ ಕೇವಲ ಕೃಷಿ ವಿವಿಗಳನ್ನು ಹೆಚ್ಚಿಸಿದರೆ ಹೆಚ್ಚಿನ ಅನುಕೂಲಗಳು ಆಗುವುದಿಲ್ಲ ಎಂದು ಸಿದ್ದರಾಮಯ್ಯ ತಿಳಿಸಿದರು.

ಬೆಣ್ಣೆಹಳ್ಳಕ್ಕೆ 200 ಕೋಟಿ ರೂ. ಕೊಟ್ಟಿದ್ದೇವೆ. ಟೆಂಡರ್ ಕರೆಯಲಾಗಿದೆ. ಸದ್ಯದಲ್ಲೇ ಕೆಲಸ ಕೂಡ ಆರಂಭವಾಗಲಿದೆ. ಮಳೆಹಾನಿಯಿಂದ ಆಗಿರುವ ಬೆಳೆ ಹಾನಿ ಮತ್ತು ಅನಾಹುತಗಳ ಬಗ್ಗೆ ಧಾರವಾಡ ಜಿಲ್ಲಾಡಳಿತ ಶೇ.90ರಷ್ಟು ಪ್ರಗತಿ ಪರಿಹಾರ ವರದಿ ನೀಡಿರುವುದಕ್ಕೆ ಜಿಲ್ಲಾಧಿಕಾರಿ ದಿವ್ಯಪ್ರಭು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರಿಗೆ ಮುಖ್ಯಮಂತ್ರಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ಯಾಸಿರ್ ಖಾನ್ ಪಠಾಣ್, ಕೋನರೆಡ್ಡಿ, ವಿಜಯಾನಂದ ಕಾಶಪ್ಪನವರ್, ಅಶೋಕ್ ಪಟ್ಟಣ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ

### ಭಾಗವಹಿಸದಿರಲು ಆಶಾ ಕಾರ್ಯಕರ್ತೆಯರ ನಿರ್ಧಾರ




**ಬೆಂಗಳೂರು:** ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸುತ್ತಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಆಶಾ ಕಾರ್ಯಕರ್ತೆಯರು ಭಾಗವಹಿಸದಿರಲು ತೀರ್ಮಾನಿಸಿದ್ದಾರೆ ಎಂದು ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ ತಿಳಿಸಿದೆ.

ಸೋಮವಾರ ಈ ಸಂಬಂಧ ಪ್ರಕಟಣೆ ನೀಡಿರುವ ಸಂಘದ ಕಾರ್ಯದರ್ಶಿ ಡಿ.ನಾಗಲಕ್ಷ್ಮೀ, "ಗ್ಯಾರಂಟಿ ಯೋಜನೆಯ ಸಮೀಕ್ಷೆಗೆ 1ಸಾವಿರ ರೂ.ನೀಡುವುದಾಗಿ ಹೇಳಿ, ಸಮೀಕ್ಷೆ ಬಳಿಕ ಒಂದು ಪೈಸೆಯನ್ನೂ ನೀಡಿಲ್ಲ. ಇತರ ಇಲಾಖೆಗಳಿಂದ ನಡೆಸಿದ ಹಲವಾರು ಸಮೀಕ್ಷೆಗಳಿಗೆ ಸೂಕ್ತ ಸಂಭಾವನೆ ದೊರತಿಲ್ಲ. ಆದುದರಿಂದ ಈ ಸಮೀಕ್ಷೆಯಲ್ಲಿ ನಾವು ಪಾಲ್ಗೊಳ್ಳುವುದಿಲ್ಲ" ಎಂದಿದ್ದಾರೆ. ಆಶಾಗಳು ಪ್ರತಿ ಮನೆಗೆ ನಮೂನೆ ನೀಡುವುದರ ಜೊತೆಗೆ, ಸಮೀಕ್ಷೆಯಲ್ಲಿರುವ 60 ಪ್ರಶ್ನೆಗಳಿಗೆ ಮಾಹಿತಿ ನೀಡಲು ಕುಟುಂಬದ ಸದಸ್ಯರು ಮುಂಚಿತವಾಗಿ ತಯಾರಿರುವಂತೆ ನೋಡಿಕೊಳ್ಳುವುದು ಸೇರಿದಂತೆ ಇತ್ಯಾದಿ ಕಾರ್ಯಗಳನ್ನು ಮಾಡಬೇಕೆಂದು ತಿಳಿಸಲಾಗಿದೆ. ಈ ಎಲ್ಲ ಕೆಲಸಗಳಿಗೆ 2ಸಾವಿರ ರೂ. ನೀಡಲಿದ್ದಾರೆಂಬ ಮಾಹಿತಿ ಇದೆ. ಆದರೆ ಇಲಾಖೆಯಿಂದ ಇದುವರೆಗೂ ಯಾವುದೇ ಆದೇಶ ಬಂದಿಲ್ಲ ಎಂದು ಅವರು ಹೇಳಿದ್ದಾರೆ. ಎಪ್ರಿಲ್ 1ರಿಂದ ಆಶಾ ಕಾರ್ಯಕರ್ತೆಯರಿಗೆ ಮಾಸಿಕ 10ಸಾವಿರ ರೂ. ಗ್ಯಾರಂಟಿ ಗೌರವಧನ ನೀಡಲಾಗುವುದೆಂದು ಭರವಸೆ ನೀಡಿದ ಸರಕಾರ ಇದುವರೆಗೂ ಈಡೇರಿಸಿಲ್ಲ. ಈ ವರ್ಷದ ಬಜೆಟ್‌ನಲ್ಲಿ ಅಂಗನವಾಡಿ, ಬಿಸಿಯೂಟ ಕಾರ್ಯಕರ್ತೆಯರಿಗೆ 1ಸಾವಿರ ರೂ.ಹೆಚ್ಚಳ ಮಾಡಿ, ಆಶಾಗಳಿಗೆ ಹೆಚ್ಚಳ ಮಾಡಲಿಲ್ಲ. ಇದೀಗ ನಡೆಯಲಿರುವ ಸಮೀಕ್ಷೆ ಕೆಲಸಕ್ಕೆ ಆಶಾಗಳಿಗೆ ಎಷ್ಟು ಗೌರವ ಧನ ನೀಡಲಿದೆ ಎಂದು ಸರಕಾರಿ ಆದೇಶವೇ ಇಲ್ಲ ಎಂದು ನಾಗಲಕ್ಷ್ಮೀ ಹೇಳಿದ್ದಾರೆ.

## ಮತಗಳ್ಳತನ ಮೂಲಕ ಸಂವಿಧಾನ ದುರ್ಬಲಗೊಳಿಸುವ ಕುತಂತ್ರ

**ಬೆಂಗಳೂರು:** ನಮ್ಮ ದೇಶದ ಪ್ರಜಾಪ್ರಭುತ್ವ ಬಲಿಷ್ಠಗೊಳಿಸಲು ಎಲ್ಲರಿಗೂ ಒಂದೇ ಮತದ ಅಧಿಕಾರ ನೀಡಲಾಗಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಮತಗಳ್ಳತನದಿಂದ ಸಂವಿಧಾನ ವ್ಯವಸ್ಥೆಯನ್ನೆ ದುರ್ಬಲಗೊಳಿಸುವ ಕುತಂತ್ರ ನಡೆಯುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಳವಳ ವ್ಯಕ್ತಪಡಿಸಿದ್ದಾರೆ.

ಸೋಮವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಮಾಜ ಕಲ್ಯಾಣ ಇಲಾಖೆ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ 'ಅಂತರ್‌ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಘೋಷವಾಕ್ಯ 'ನನ್ನ ಮತ ನನ್ನ ಹಕ್ಕು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಇಂದಿನ ಪ್ರಜಾಪ್ರಭುತ್ವ ದಿನಾಚರಣೆಯ ಘೋಷವಾಕ್ಯ 'ನನ್ನ ಮತ ನನ್ನ ಹಕ್ಕು' ಆಗಿದೆ. ಆದರೆ, ಈ ಶಕ್ತಿಯನ್ನು ದುರ್ಬಲಗೊಳಿಸುವ ಹುನ್ನಾರ ಪಟ್ಟಭದ್ರ ಹಿತಾಸಕ್ತಿಗಳಿಂದ ನಡೆದಿದೆ. ಡಾ.ಬಿ.ಆರ್. ಅಂಬೇಡ್ಕರ್ ಅವರು 'ಒಬ್ಬ ವ್ಯಕ್ತಿ, ಒಂದು ಮತ, ಒಂದು ಮೌಲ್ಯ' ಎಂದಿದ್ದರು. ಈಗ ಮತಗಳ್ಳತನ ಮೂಲಕ ಸಂವಿಧಾನವನ್ನು ದುರ್ಬಲಗೊಳಿಸುವ ಕುತಂತ್ರ ನಡೆಯುತ್ತಿದ್ದು, ಇದನ್ನು ನಡೆಯದಂತೆ ನೋಡಿಕೊಳ್ಳಬೇಕಿದೆ ಎಂದು ಸಿದ್ದರಾಮಯ್ಯ ಕರೆ ನೀಡಿದರು.

ಸಂವಿಧಾನದ ರಕ್ಷಣೆ ಎಲ್ಲ ನಾಗರಿಕರ ಜವಾಬ್ದಾರಿಯಾಗಿದ್ದು, ಈ ಕರ್ತವ್ಯವನ್ನು ಎಲ್ಲರೂ ತಪ್ಪದೇ ನಿರ್ವಹಿಸಲೇಬೇಕು.



ಪ್ರಜಾಪ್ರಭುತ್ವದ ರಕ್ಷಣೆಯಿಂದ ದೇಶದ ಜನರ ರಕ್ಷಣೆ ಸಾಧ್ಯವಾಗುತ್ತದೆ ಎಂದ ಅವರು, ದೇಶದಲ್ಲಿ ವಿವಿಧ ಜಾತಿ ಧರ್ಮಗಳ ವ್ಯವಸ್ಥೆಯಿದೆ. ಬಹುಸಂಸ್ಕೃತಿಯುಳ್ಳ ದೇಶದಲ್ಲಿ ವಿವಿಧತೆಯಲ್ಲಿ ಏಕತೆಯನ್ನು ಕಾಪಾಡಲು ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ತರಲಾಗಿದೆ ಎಂದು ಅವರು ನುಡಿದರು. ಜಾತಿ ವ್ಯವಸ್ಥೆಯಿಂದಾಗಿ ಅಸಮಾನತೆ ಉಂಟಾಗಿದೆ. ಆದ್ದರಿಂದ ಡಾ.ಅಂಬೇಡ್ಕರ್ ಅವರು ಸಂವಿಧಾನ ಜಾರಿಗೊಂಡ ಸಂದರ್ಭದಲ್ಲಿ ವೈರುಧ್ಯತೆಯಿರುವ ಸಮಾಜಕ್ಕೆ ನಾವು ಕಾಲಿಡುತ್ತಿದ್ದು, ಸಾಮಾಜಿಕ, ರಾಜಕೀಯ, ಆರ್ಥಿಕ, ಶೈಕ್ಷಣಿಕ ಅಸಮಾನತೆಗಳಿವೆ. ಆದರೆ, ಇದನ್ನು ಹೋಗಲಾಡಿಸಿ ದೇಶದಲ್ಲಿ ಜನರಿಗೆ ಸಾಮಾಜಿಕ, ಶೈಕ್ಷಣಿಕ ಆರ್ಥಿಕ ಸ್ವಾತಂತ್ರ್ಯ ಸಿಕ್ಕಾಗ ಮಾತ್ರ ಸ್ವಾತಂತ್ರ್ಯದ ಉದ್ದೇಶ ಯಶಸ್ವಿಯಾಗುತ್ತದೆ. ಇದಕ್ಕಾಗಿಯೇ 12ನೆ ಶತಮಾನದಲ್ಲಿ ಅನುಭವ ಮಂಟಪ ಸ್ಥಾಪಿಸಿ ಬಸವಣ್ಣನವರು ಪ್ರಜಾಪ್ರಭುತ್ವದ ಪರಿಕಲ್ಪನೆಗೆ ಜೀವತುಂಬಿದ್ದರು ಎಂದು ಸಿದ್ದರಾಮಯ್ಯ ಅವರು ಉಲ್ಲೇಖಿಸಿದರು.

## ಜಪಾನ್ ಕಂಪನಿಗಳಿಂದ 4ಸಾವಿರ ಕೋ ಬಂಡವಾಳ ಹೂಡಿಕೆ

**ಬೆಂಗಳೂರು:** ಕಳೆದ ವಾರ ತಾವು ಕೈಗೊಂಡ ಜಪಾನ್ ಭೇಟಿಯಿಂದಾಗಿ ಆ ದೇಶದ ವಿವಿಧ ಉದ್ಯಮಗಳು ರಾಜ್ಯದಲ್ಲಿ 4ಸಾವಿರ ಕೋಟಿ ರೂ.ಗಳಿಗೂ ಹೆಚ್ಚು ಬಂಡವಾಳ ಹೂಡಿಕೆ ಮಾಡುವುದು ಖಾತ್ರಿಯಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಸೋಮವಾರ ನಗರದಲ್ಲಿನ ತಮ್ಮ ನಿವಾಸದಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಬಂಡವಾಳ ಹೂಡಿಕೆ ಆಕರ್ಷಿಸುವ ದೃಷ್ಟಿಯಿಂದ ಜಪಾನ್‌ಗೆ ಇದು ತಮ್ಮ ಎರಡನೇ ಭೇಟಿಯಾಗಿದೆ. ಜಪಾನಿನ ಉದ್ಯಮಗಳ ಪ್ರಮುಖರು ಸಾಂಪ್ರದಾಯಿಕ ಆಲೋಚನೆ ಉಳ್ಳವರಾಗಿದ್ದು, ಸಾಕಷ್ಟು ದೀರ್ಘವಾಗಿ ಯೋಚಿಸಿ ನಿರ್ಧಾರಕ್ಕೆ ಬರುತ್ತಾರೆ ಎಂದರು.

'ಇವತ್ತು ದೇಶದಲ್ಲಿರುವ ಜಪಾನಿ ಉದ್ದಿಮೆಗಳಲ್ಲಿ ಶೇ.50ರಷ್ಟು ಕಂಪೆನಿಗಳು ಕರ್ನಾಟಕದಲ್ಲೇ ಇವೆ. ಹಿಂದೆ ತಾವು ಜಪಾನ್ ಮತ್ತು ದಕ್ಷಿಣ ಕೊರಿಯಾಗೆ ಭೇಟಿ ನೀಡಿದ್ದಾಗ 6,500ಕೋಟಿ ರೂ. ಬಂಡವಾಳ ಹೂಡಿಕೆಯನ್ನು ಸೆಳೆಯಲಾಗಿತ್ತು. ಈ ಸಲದ ಭೇಟಿಯಲ್ಲಿ ಹೋಂಡಾ ಮುಂತಾದ



ಕಂಪೆನಿಗಳು ರಾಜ್ಯದಲ್ಲಿ ವಿಸ್ತರಣೆ, ಮುಕುಂದ್ ಸುಮಿ ಸ್ಟೀಲ್ಸ್ ಕಂಪೆನಿ ಜತೆ ಸಹಭಾಗಿತ್ವ ಮುಂತಾದ ವಿಚಾರ ಕುರಿತು ಚರ್ಚಿಸಲಾಗಿದೆ.

ಏತನ್ಮಧ್ಯೆ, ಅಮೆರಿಕವು ಇಲೆಕ್ಟ್ರಾನಿಕ್ ಮತ್ತು ಫಾರ್ಮಾ ಉತ್ಪನ್ನಗಳನ್ನು ಬಿಟ್ಟು ಭಾರತದ ಉಳಿದ ಉತ್ಪನ್ನಗಳ ಮೇಲೆ ಶೇ.50ರಷ್ಟು ಆಮದು ಸುಂಕ ವಿಧಿಸಿದೆ. ಇದೊಂದು ಬಿಕ್ಕಟ್ಟನ್ನು ಸೃಷ್ಟಿಸಿದೆ. ಇಂತಹ ಸಂದರ್ಭದಲ್ಲಿ ಹೂಡಿಕೆದಾರರು ನಿರ್ಧಾರಕ್ಕೆ ಬರುವುದು ಕಷ್ಟವಾಗುತ್ತದೆ. ಆದರೂ ಈ ಬಾರಿಯ ಭೇಟಿಯಲ್ಲಿ 4ಸಾವಿರ ಕೋಟಿ ರೂ.ಬಂಡವಾಳ ಹರಿದು ಬರಲಿರುವುದು ಸಮಾಧಾನದ ಸಂಗತಿಯಾಗಿದೆ ಎಂದು ಅವರು ನುಡಿದರು. ಕೆಲವು ಕಂಪೆನಿಗಳು ರಾಜ್ಯದಲ್ಲಿ ಕಡಿಮೆ ಬಂಡವಾಳವನ್ನೇ ಹೂಡಬಹುದು. ಆದರೆ ಇವೆಲ್ಲವೂ ನಮ್ಮ ಕೈಗಾರಿಕಾ ಕಾರ್ಯ ಪರಿಸರದ ಮೌಲ್ಯವರ್ಧನೆ ಮಾಡುತ್ತವೆ. ಜೊತೆಗೆ, ಉದ್ದಿಮೆದಾರರು ಹೂಡಿಕೆಯ ವಿಚಾರಕ್ಕೆ ಬಂದಾಗ ಶಾಂತಿಯಿಂದ ಕೂಡಿರುವ ವಾತಾವರಣವನ್ನು ಇಷ್ಟಪಡುತ್ತಾರೆ. ಇದನ್ನು ಎಲ್ಲರೂ ಗಮನಕ್ಕೆ ತೆಗೆದುಕೊಳ್ಳಬೇಕು. ದೇಶದ ಯಾವ ಭಾಗದಲ್ಲೂ ಹೂಡಿಕೆಗೆ ಪ್ರತಿಕೂಲ ಎನಿಸುವಂತಹ ಸ್ಥಿತಿ ನಿರ್ಮಾಣವಾಗಬಾರದು ಎಂದು ಪಾಟೀಲ್ ಆಶಿಸಿದರು.

### ಜಿಎಸ್‌ಟಿ ಪರಿಷ್ಕರಣೆ ಕೇಂದ್ರಕ್ಕೆ ನೋಟಿಸ್

## ಹಿಂದಿನ ಬೆಲೆಗೆ ದಾಸ್ತಾನು ಮಾರಾಟಕ್ಕೆ ಅವಕಾಶಕ್ಕಾಗಿ ಅರ್ಜಿ

**ಬೆಂಗಳೂರು:** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ದರ ಪರಿಷ್ಕರಣೆ ಹಿನ್ನೆಲೆಯಲ್ಲಿ ಉತ್ಪನ್ನಗಳ ತಯಾರಕರು ಮತ್ತು ಆಮದುಗಾರರು ದಾಸ್ತಾನು ಉಳಿದಿರುವ ವಸ್ತು ಮತ್ತು ಉತ್ಪನ್ನಗಳ ಮೇಲೆ ಪರಿಷ್ಕೃತ ಚಿಲ್ಲರೆ ಮಾರಾಟ ದರ (ಎಂಆರ್‌ಪಿ) ಕಡ್ಡಾಯವಾಗಿ ಪ್ರಕಟಿಸಬೇಕು ಎಂಬ ಮಾರ್ಗಸೂಚಿಗಳಿಗೆ ಏಕ ಪಕ್ಷೀಯವಾಗಿ ತಡೆ ನೀಡಲು ಹೈಕೋರ್ಟ್ ನಿರಾಕರಿಸಿದೆ. ಆದರೆ, ಅರ್ಜಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸುವಂತೆ ಕೇಂದ್ರ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.

ಈ ಸಂಬಂಧ ಸೆ. 9ರಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಸಚಿವಾಲಯ, ಗ್ರಾಹಕ ವ್ಯವಹಾರಗಳು ತೂಕ ಮತ್ತು ಮಾಪನ ಇಲಾಖೆ ಹೊರಡಿಸಿರುವ ಮಾರ್ಗಸೂಚಿಗಳನ್ನು ರದ್ದುಪಡಿಸಬೇಕು ಎಂದು ಕೋರಿ ಅಡುಗೆ ಹಾಗೂ ಗೃಹ ಬಳಕೆ ಉತ್ಪನ್ನಗಳ ಟಿಟಿಕೆ ಪ್ರೆಸ್ಟೀಜ್ ಕಂಪನಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ.ಶ್ಯಾಮ್ ಪ್ರಸಾದ್ ಅವರಿದ್ದ ನ್ಯಾಯಪೀಠ, ಕೇಂದ್ರ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಾದ ಆಲಿಸಿದ ಪೀಠ, ಪ್ರತಿವಾದಿ ಕೇಂದ್ರ ಸರ್ಕಾರದ ವಾದ ಆಲಿಸದೆ ಏಕ ಪಕ್ಷೀಯವಾಗಿ ಮಾರ್ಗಸೂಚಿಗಳಿಗೆ ತಡೆ ನೀಡುವುದಕ್ಕೆ ಸಾಧ್ಯವಿಲ್ಲ. ಅಲ್ಲದೇ ಅರ್ಜಿ ಸಂಬಂಧ ಕೇಂದ್ರ ಸರ್ಕಾರದ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಸಚಿವಾಲಯ, ಗ್ರಾಹಕ ವ್ಯವಹಾರಗಳು ತೂಕ ಮತ್ತು ಮಾಪನ ಇಲಾಖೆ, ರಾಜ್ಯ ಸರ್ಕಾರದ ಆಹಾರ, ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ನಿಯಂತ್ರಕರಿಗೆ ನೋಟಿಸ್ ಜಾರಿಗೊಳಿಸಿ




ವಿಚಾರಣೆಯನ್ನು ಸೆ.19ಕ್ಕೆ ಮುಂದೂಡಿತು.

ತಯಾರಕರು, ಪ್ಯಾಕ್ ಮಾಡುವವರು ಮತ್ತು ಆಮದುದಾರರು ಮಾರಾಟವಾಗದ ಉತ್ಪನ್ನಗಳ ಮೇಲಿನ ಎಂಆರ್‌ಪಿ ದರವನ್ನು 2025ರ ಡಿ. 31ರವರೆಗೆ ಅಥವಾ ಹಾಲಿ ಇರುವ ದಾಸ್ತಾನು ಖಾಲಿಯಾಗುವವರೆಗೆ ಪರಿಷ್ಕರಿಸಬಹುದು. ಪರಿಷ್ಕೃತ ಎಂಆರ್‌ಪಿ ಜಿಎಸ್ಟಿಯಿಂದ ಆದ ಬದಲಾವಣೆ ಮಾತ್ರ ತೋರಿಸಬೇಕು. ತೆರಿಗೆಯಿಂದ ಆದ ಹೆಚ್ಚಳ ಮತ್ತು ಏರಿಕೆಯನ್ನು ಮಾತ್ರ ಅದರಲ್ಲಿ ತೋರಿಸಬೇಕು ಎಂದು ಕೇಂದ್ರ ಸರ್ಕಾರ ಸೆ.9ರಂದು ಮಾರ್ಗ ಸೂಚಿಗಳನ್ನು ಹೊರಡಿಸಿತ್ತು. ಈ ಮಾರ್ಗಸೂಚಿಗಳು ಸೆ.22ರಿಂದ ಅನ್ವಯವಾಗಲಿವೆ ಎಂದು ಹೇಳಲಾಗಿತ್ತು. ಇದನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ.

ಜಿಎಸ್‌ಟಿ ಪರಿಷ್ಕರಣೆ: ಜಿಎಸ್‌ಟಿ ಮಂಡಳಿಯು ಸೆ.4 ರಂದು ಸರಕು ಮತ್ತು ಸೇವಾ ತೆರಿಗೆಯ ಸಂಪೂರ್ಣ ಪರಿಷ್ಕರಣೆಗೆ ಅನುಮೋದನೆ ನೀಡಿ, ಸ್ಲ್ಯಾಬ್‌ಗಳನ್ನು ಶೇ. 5 ಮತ್ತು ಶೇ. 18 ಕ್ಕೆ ಸೀಮಿತಗೊಳಿಸಿತ್ತು. ಇದರಿಂದ ಹೇರ್ ಆಯಿಲ್, ಐಸ್ ಕ್ರೀಮ್ ಮತ್ತು ಟಿವಿಗಳವರೆಗಿನ ಸಾಮಾನ್ಯ ಬಳಕೆಯ ವಸ್ತುಗಳ ಬೆಲೆ ಕಡಿಮೆಯಾಗಲಿದೆ. ವೈಯಕ್ತಿಕ ಆರೋಗ್ಯ ಮತ್ತು ಜೀವ ವಿಮೆಯ ಮೇಲಿನ ತೆರಿಗೆಯನ್ನು ಶೂನ್ಯಕ್ಕೆ ಇಳಿಸಲಾಗಿತ್ತು.

## ಕುಕಿ ನಾಯಕನ ಮನೆಗೆ ಬೆಂಕಿ

**ಚುರಾಚಾಂದ್‌ಪುರ:** ಕುಕಿ ನಾಯಕನ ನಿವಾಸಕ್ಕೆ ಗುಂಪೊಂದು ಬೆಂಕಿ ಹಚ್ಚಿದ ಬಳಿಕ ಮಣಿಪುರದ ಚುರಾಚಾಂದ್‌ಪುರ ಜಿಲ್ಲೆಯಲ್ಲಿ ಹಿಂಸಾಚಾರ ಭುಗಿಲೆದ್ದಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ. ಕುಕಿ ನ್ಯಾಷನಲ್ ಆರ್ಗನೈಸೇಷನ್ (ಕೆಎನ್‌ಒ) ನಾಯಕ ಕೆಲ್ವಿನ್ ಐಕೆಂಥಾಂಗ್ ನಿವಾಸಕ್ಕೆ ರವಿವಾರ ತಡ ರಾತ್ರಿ ಬೆಂಕಿ ಹಚ್ಚಲಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ಆದರೆ, ಚುರಾಚಾಂದ್‌ಪುರದ ಸ್ಥಳೀಯರ ಒಂದು ಗುಂಪು ಈ ಬೆಂಕಿಗೆ ಶಾರ್ಟ್ ಸರ್ಕ್ಯೂಟ್ ಕಾರಣವಾಗಿದೆ ಎಂದು ಹೇಳಿದ್ದಾರೆ. ದಮನ ಕಾರ್ಯಾಚರಣೆ ನಡೆಸದಿರುವ ಒಪ್ಪಂದಕ್ಕೆ ಕೆಎನ್‌ಒ ಕೇಂದ್ರ ಸರಕಾರದೊಂದಿಗೆ ಸಹಿ ಹಾಕಿದೆ. ಹಿಂಸಾಚಾರ ಪೀಡಿತ ಪ್ರದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿದ ಕೇವಲ ಒಂದು ದಿನದ ಬಳಿಕ ಈ ದಾಳಿ ನಡೆದಿದೆ. ಕುಕಿ ರೆ ಕೌನ್ಸಿಲ್ (ಕೆಝಡ್‌ಸಿ) ಹಾಗೂ ಇಂಡೀಜಿನಿಯಸ್ ಟ್ರೈಬಲ್ ಲೀಡರ್ಸ್ ಫಾರಂ (ಐಟಿಎಲ್‌ಎಫ್)ನ ವಕ್ತಾರರಾಗಿರುವ ಇನ್ನೋರ್ವ ಕುಕಿ ನಾಯಕ ಗಿಂಝಾ ವುವಾಲ್‌ರೆಂಗ್ ಅವರ ನಿವಾಸಕ್ಕೆ ಕೂಡ ದುಷ್ಕರ್ಮಿಗಳು ಬೆಂಕಿ ಹಚ್ಚಲು ಪ್ರಯತ್ನಿಸಿದ್ದಾರೆ.

## ಆದೇಶದ ಹೊರತಾಗಿಯೂ ದರ್ಶನ್‌ಗೆ ಸೌಲಭ್ಯ

### ಜೈಲು ಅಧಿಕಾರಿಗಳಿಂದ ವಿವರಣೆ ಕೇಳಿದ ಸೆಷನ್ಸ್ ಕೋರ್ಟ್

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್‌ಗೆ ಕಾರಾಗೃಹಗಳ ಕೈಪಿಡಿ ಅನುಸಾರ ಕನಿಷ್ಠ ಸೌಲಭ್ಯ ಕಲ್ಪಿಸುತ್ತಿಲ್ಲ ಎಂಬ ಆರೋಪದ ಕುರಿತು ವಿವರಣೆ ನೀಡುವಂತೆ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಅಧಿಕಾರಿಗೆ ಬೆಂಗಳೂರಿನ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯ ನಿರ್ದೇಶಿಸಿದೆ.

ನ್ಯಾಯಾಲಯದ ಆದೇಶದ ಹೊರತಾಗಿಯೂ ಕನಿಷ್ಠ ಸೌಲಭ್ಯಗಳನ್ನು ಒದಗಿಸಲು ಜೈಲು ಅಧಿಕಾರಿಗಳು ನಿರಾಕರಿಸುತ್ತಿದ್ದಾರೆ ಎಂದು ಆರೋಪಿಸಿ ದರ್ಶನ್ ಸಲ್ಲಿಸಿರುವ ಮೆಮೋ ಕುರಿತು ವಿಚಾರಣೆ ನಡೆಸಿದ ನಗರದ 64ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ಕೋರ್ಟ್ ನ್ಯಾಯಾಧೀಶರಾದ ಐ.ಪಿ. ನಾಯ್ಕ್ ಅವರು, ಅರ್ಜಿದಾರರು ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಸೆಪ್ಟೆಂಬರ್ 17 ಅಥವಾ ಅದಕ್ಕಿಂತ ಮುಂಚಿತವಾಗಿ ಜೈಲಿನ ಸಂಬಂಧಪಟ್ಟ ಅಧಿಕಾರಿ ವಿವರಣೆ ನೀಡಬೇಕು ಎಂದು ಸೂಚಿಸಿ ವಿಚಾರಣೆಯನ್ನು ಸೆಪ್ಟೆಂಬರ್ 17ಕ್ಕೆ ಮುಂದೂಡಿದರು.

**ಪ್ರಕರಣವೇನು:** ಹಾಸಿಗೆ, ಹೊದಿಕೆ ಮತ್ತು ತಲೆದಿಂಬು ಒದಗಿಸುವಂತೆ ಕೋರಿ ಸಲ್ಲಿಸಿದ್ದ ಮನವಿಯನ್ನು ಪರಪ್ಪನ ಅಗ್ರಹಾರ ಜೈಲು ಅಧಿಕಾರಿಗಳು ಪರಿಗಣಿಸದ ಹಿನ್ನೆಲೆಯಲ್ಲಿ ದರ್ಶನ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಸೆಪ್ಟೆಂಬರ್ 9ರಂದು ಪುರಸ್ಕರಿಸಿದ್ದ ನ್ಯಾಯಾಲಯ, ಕರ್ನಾಟಕ ಕಾರಾಗೃಹಗಳ ಕೈಪಿಡಿಯ ಅನುಸಾರ ದರ್ಶನ್ ಗೆ ಕನಿಷ್ಠ ಸೌಲಭ್ಯ ಕಲ್ಪಿಸುವಂತೆ



ಜೈಲು ಅಧಿಕಾರಿಗಳಿಗೆ ಆದೇಶಿಸಿತ್ತು.

ಇದೀಗ ಮೆಮೊ ಸಲ್ಲಿಸಿರುವ ದರ್ಶನ್, ನ್ಯಾಯಾಲಯದ ಆದೇಶವನ್ನು ಜೈಲು ಅಧಿಕಾರಿಗಳು ಪಾಲಿಸುತ್ತಿಲ್ಲ. ಇದರಿಂದ, ನ್ಯಾಯಾಲಯದ ಆದೇಶದ ಪೂರ್ವ ಮತ್ತು ನಂತರ ಪರಿಸ್ಥಿತಿ ಏನೂ ಬದಲಾಗಿಲ್ಲ. ತಮ್ಮ ವಕೀಲರು ಜೈಲು ಅಧಿಕಾರಿಗಳನ್ನು ಭೇಟಿ ಮಾಡಿ ನ್ಯಾಯಾಲಯದ ಆದೇಶದ ಪ್ರತಿ ಸಲ್ಲಿಸಿದರು. ತೀರ್ಪಿನ ಅಂಶಗಳನ್ನು ಅರ್ಥಮಾಡಿಸಲು ಯತ್ನಿಸಿದರು. ಆದರೆ, ಜೈಲು ಅಧಿಕಾರಿಗಳು ಮಾತ್ರ, ತಮಗೆ ನ್ಯಾಯಾಲಯ ಆದೇಶ ತಲುಪಿದೆ. ಆದೇಶದ ಅನುಸಾರ ಏನು ಮಾಡಬೇಕೋ; ಅದನ್ನು ಮಾಡುತ್ತೇವೆ. ಅದನ್ನು ನೀವು ಹೇಳುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ ಎಂದು ಆರೋಪಿಸಿದ್ದಾರೆ. ಅಲ್ಲದೆ, ನ್ಯಾಯಾಲಯದ ಆದೇಶ ಪಾಲಿಸದ ಪರಪ್ಪನ ಅಗ್ರಹಾರ ಜೈಲಿನ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಕ್ರಮ ಜರುಗಿಸಬೇಕು. ನ್ಯಾಯಾಂಗ ನಿಂದನೆ ಪ್ರಕ್ರಿಯೆ ನಡೆಸಲು ಶಿಫಾರಸು ಮಾಡಬೇಕು ಎಂದು ದರ್ಶನ್ ಮೆಮೊನಲ್ಲಿ ಮನವಿ ಮಾಡಿದ್ದಾರೆ.

### ಗುಜರಾತ್ ಹೈಕೋರ್ಟ್‌ಗೆ

## ಬಾಂಬ್ ಬೆದರಿಕೆ

**ಅಹ್ಮದಾಬಾದ್:** ಸೋಮವಾರ ಗುಜರಾತ್ ಉಚ್ಚ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆಯ ಇಮೇಲ್ ಬಂದಿದ್ದು, ಸಮಗ್ರ ತಪಾಸಣೆಯ ಬಳಿಕ ಇದೊಂದು ಹುಸಿ ಬೆದರಿಕೆ ಎನ್ನುವುದು ಸ್ಪಷ್ಟವಾಗಿದೆ.ಕೆಲವೇ ದಿನಗಳ ಹಿಂದೆ ದಿಲ್ಲಿ ಮತ್ತು ಬಾಂಬೆ ಉಚ್ಚ ನ್ಯಾಯಾಲಯಗಳಿಗೂ ಇಂತಹುದೇ ಹುಸಿ ಬೆದರಿಕೆ ಇಮೇಲ್‌ಗಳು ಬಂದಿದ್ದವು. ಇಂದಿನದು ಈ ವರ್ಷದ ಜೂನ್‌ನಿಂದ ಗುಜರಾತ ಉಚ್ಚ ನ್ಯಾಯಾಲಯಕ್ಕೆ ಬಂದಿರುವ ಮೂರನೇ ಹುಸಿ ಬೆದರಿಕೆಯಾಗಿದೆ. ಸೋಮವಾರ ಬೆಳಿಗ್ಗೆ ಗುಜರಾತ್ ಹೈಕೋರ್ಟ್‌ನ ಅಧಿಕೃತ ಐಡಿಗೆ ಇಮೇಲ್ ಕಳುಹಿಸಿದ್ದ ಅಪರಿಚಿತ ವ್ಯಕ್ತಿ ನ್ಯಾಯಾಲಯದ ಆವರಣದಲ್ಲಿ ಆರ್‌ಡಿಎಕ್ಸ್ ಇರಿಸಲಾಗಿದೆ ಎಂದು ಹೇಳಿಕೊಂಡಿದ್ದ. ಮಾಹಿತಿ ತಿಳಿದ ತಕ್ಷಣ ಸ್ಥಳೀಯ ಪೋಲಿಸರು ಶ್ವಾನದಳ ಹಾಗೂ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳದೊಂದಿಗೆ ಸ್ಥಳಕ್ಕೆ ಧಾವಿಸಿ ಕೂಲಂಕಶ ತಪಾಸಣೆಯನ್ನು ನಡೆಸಿದ್ದು,ಯಾವುದೇ ಅನುಮಾನಾಸ್ಪದ ವಸ್ತು ಪತ್ತೆಯಾಗಲಿಲ್ಲ ಎಂದು ಹಿರಿಯ ಅಧಿಕಾರಿಗಳು ತಿಳಿಸಿದರು.

# ಉನ್ನತೀಕರಿಸಿದ ಪ್ರೌಢಶಾಲೆಯ ಉದ್ಘಾಟನೆ




**ಬೆಳಗಾವಿ:** ವಿದ್ಯಾರ್ಥಿಗಳಿಗೆ ಕಲಿಯುವ ಜಿದ್ದು ಇರಬೇಕು. ಸಮಾಜದಲ್ಲಿ ಉತ್ತಮ ಭವಿಷ್ಯ ರೂಪಿಸಲು ಶಿಕ್ಷಕರು ಶ್ರಮಿಸುತ್ತಾರೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಶಿಕ್ಷಕರ ಮಾರ್ಗದರ್ಶನ ಪಾಲಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದರು. ಕುಕಡೊಳ್ಳಿ ಗ್ರಾಮದಲ್ಲಿ ಉನ್ನತೀಕರಿಸಿದ ಸರ್ಕಾರಿ ಪ್ರೌಢಶಾಲೆಯ ಉದ್ಘಾಟನೆ ನೆರವೇರಿಸಿ ಮಾತನಾಡಿದ ಸಚಿವರು, ಶಾಲೆಯ ಉನ್ನತೀಕರಣ ಬಹುದಿನದ ಬೇಡಿಕೆಯಾಗಿತ್ತು. ಶತಮಾನೋತ್ಸವ ಆಚರಿಸುವ ಸಂದರ್ಭದಲ್ಲಿ ಪ್ರೌಢಶಾಲೆಯನ್ನು ಉದ್ಘಾಟನೆ ಮಾಡಲಾಗಿದೆ ಎಂದು ಸಚಿವರು ಹೇಳಿದರು.

ಪ್ರೌಢ ಶಾಲೆಗಳಿಗೆ ಬಹಳ ಕಡೆ ಬೇಡಿಕೆ ಇದ್ದು, ಮುಂದಿನ ದಿನಗಳಲ್ಲಿ ಇತರ ಕಡೆಗೂ ಪ್ರೌಢಶಾಲೆಗಳನ್ನು ನೀಡಲಾಗುವುದು. ಪಾಲಕರು ತಮ್ಮ ಮಕ್ಕಳ ಬಗ್ಗೆ ತುಂಬಾ ಕನಸು ಕಾಣುತ್ತಾರೆ. ಹಾಗಾಗಿ ಗುರಿ ಇಟ್ಟುಕೊಂಡು ಓದಿ. ಭವ್ಯ ಭವಿಷ್ಯವನ್ನು ವಿದ್ಯಾರ್ಥಿಗಳು ಕಟ್ಟಿಕೊಳ್ಳಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದರು.

ನನಗೆ ಮತ ನೀಡಿದ್ದು ಸಾರ್ಥಕ ಎಂದು ನಿಮಗೆ ಅನಿಸುವ ರೀತಿಯಲ್ಲಿ ನಾನು ಕೆಲಸ ಮಾಡುತ್ತಿದ್ದೇನೆ. ಚುನಾವಣೆ ಮುಗಿದ ನಂತರ ನನಗೆ ಕಾಣುವುದು ಅಭಿವೃದ್ಧಿ ಮಾತ್ರ. ಹಾಗಾಗಿ ಗ್ರಾಮೀಣ ಕ್ಷೇತ್ರ ಪ್ರಗತಿ ಕಾಣುತ್ತಿದೆ. ಇನ್ನು 5 ರಿಂದ 10 ವರ್ಷದಲ್ಲಿ ರಾಜ್ಯದ ಜನರು ಬಂದು ನೋಡುವಂತೆ ಅಭಿವೃದ್ಧಿ ಮಾಡುತ್ತೇನೆ ಎಂದು ಸಚಿವರು ಭರವಸೆ ನೀಡಿದರು. 1.25 ಕೋಟಿ ರೂಪಾಯಿ ವೆಚ್ಚದಲ್ಲಿ ಗ್ರಾಮ ದೇವತೆ ದೇವಸ್ಥಾನ ನಿರ್ಮಾಣ ಮಾಡಲಾಗುವುದು. ಶೀಘ್ರವೇ ಶಂಕುಸ್ಥಾಪನೆ ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ರೀಮತಿ ಸಿದ್ದವ್ವ ಹೊಸೂರ್, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್. ಕೆ.ಆಂಜನೇಯ ಕ್ಷೇತ್ರ ಸಮನ್ವಯಾಧಿಕಾರಿಗಳಾದ ಎಮ್.ಎಸ್.ಮೇದಾರ್, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಮಂಜುನಾಥ ಹುಬ್ಬಳ್ಳಿ, ಪ್ರವೀಣ ರೊಟ್ಟಿ, ನಾಗಪ್ಪ ಕರವಿನಕೊಪ್ಪ, ಹಾಗೂ ಗ್ರಾಮದ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

### ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ । ಅಂಬೇಡ್ಕರ ಪುತ್ಥಳಿಗೆ ಹೂ ಮಾಲಾರ್ಪಣೆ

# ಪ್ರಜಾಪ್ರಭುತ್ವ ಗಟ್ಟಿಗೊಳಿಸುವ ಕಾರ್ಯವಾಗಲಿ

**ಬಾಗಲಕೋಟೆ:** ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿರುವ ಮೌಲ್ಯ ಹಾಗೂ ವಿಚಾರಗಳನ್ನು ಮುಂದಿನ ಪೀಳಿಗೆಗೆ ಗೊತ್ತುಪಡಿಸುವ ಮೂಲಕ ವ್ಯವಸ್ಥೆಯನ್ನು ಮತ್ತಷ್ಟು ಗಟ್ಟಿಗೊಳಿಸುವ ಕಾರ್ಯವಾಗಬೇಕಿದೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ನಾವೆಲ್ಲರೂ ಸಂವಿಧಾನದಲ್ಲಿರುವ ಮೌಲ್ಯಗಳಿಗೆ ಒತ್ತುಕೊಟ್ಟು ಜೀವನ ಸಾಗಿಸುವಂತಾಗುವ ಉದ್ದೇಶದಿಂದ ಪ್ರತಿ ವರ್ಷ ಸೆಪ್ಟೆಂಬರ 15 ರಂದು ಪ್ರಜಾಪ್ರಭುತ್ವ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದರು. ವಿವಿಧತೆಯಲ್ಲಿ ಏಕತೆ ಹೊಂದಿದ ದೇಶ ನಮ್ಮದಾಗಿದೆ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ ನಮ್ಮ ದೇಶಕ್ಕೆ ಡಾ.ಬಿ.ಆರ್.ಅಂಬೇಡ್ಕರ ನೀಡುವ ಮಹಾನ್ ಕೊಡುಗೆ ಸಂವಿಧಾನ. ಇದರ ಆಧಾರದ ಮೇಲೆ ಆಡಳಿತ ಯಂತ್ರ ನಡೆಸಲಾಗುತ್ತಿದೆ. ಎಲ್ಲರಿಗೂ ಸಮಾನತೆಯ ಹಕ್ಕುಗಳನ್ನು ಕೊಟ್ಟಿರುವುದು ನಮ್ಮ ಸಂವಿಧಾನ. ನಾವು ಹಕ್ಕುಗಳ ಬಗ್ಗೆ ಮಾತನಾಡುತ್ತಿದ್ದೇವೆ ಹೊರತು ಕರ್ತವ್ಯದ ಬಗ್ಗೆ ಮಾತನಾಡುತ್ತಿಲ್ಲ. ಹಕ್ಕುಗಳು ಯಾವಾಗ ಸೀಗುತ್ತವೆ ಎಂದರೆ ಕರ್ತವ್ಯ ಮಾಡಿದಾಗ ಮಾತ್ರ. ಸಮಾನತೆ ಎಂಬುದು ನಮ್ಮ ರಕ್ತದಲ್ಲಿಯೇ ಇದ್ದು, ಅದನ್ನು ಕಲಿಸಿಕೊಡುವ ಅಗತ್ಯವಿಲ್ಲ. ನಾವು ಮಾಡುವ ಕೆಲವೊಂದು ತಪ್ಪುಗಳಿಂದ ಸಮಾಜದಲ್ಲಿ ಗೊಂದಲ ಉಂಟಾಗುತ್ತಿದೆ. ಅದನ್ನು ಯಾರು ಮಾಡಬಾರದು ಎಂದರು.



ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಪ್ರಜಾಪ್ರಭುತ್ವ ವ್ಯವಸ್ಥೆ ಅಂದರೆ ಕೇವಲ ಆಡಳಿತ ವ್ಯವಸ್ಥೆ ಅಲ್ಲ, ಅದು ನಮ್ಮ ಸ್ವಾತಂತ್ರ್ಯದ ಜೀವಾಳ, ಸಮಾನತೆಯ ನಂಬಿಕೆ ಮತ್ತು ನ್ಯಾಯದ ದಾರಿಯಾಗಿದೆ. ಮತದಾನ ಕೇವಲ ಹಕ್ಕು ಮಾತ್ರವಲ್ಲ ಅದು ಕರ್ತವ್ಯ, ಹೊಣೆಗಾರಿಕೆ ಮತ್ತು ಪ್ರಜಾಸತ್ತಾತ್ಮಕ ಶಕ್ತಿಯಾಗಿದೆ. ನಮ್ಮ ಮತದಾನದ ಹಕ್ಕು ನಮ್ಮ ಸಮಾನತೆಯ ಚಿಹ್ನೆ, ಸ್ವಾತಂತ್ರ್ಯದ ಪ್ರತೀಕ, ಜೀವಾಳವಾಗಿದೆ. ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಸಹೋದರತೆಯ ಭಾರತವನ್ನು ಕಟ್ಟುವ ಕನಸು ಅಂಬೇಡ್ಕರ ಹೊಂದಿದ್ದರು. ಪ್ರಜಾಪ್ರಭುತ್ವದ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ ಎಂದರು.

ಶಾಸಕರು ಹಾಗೂ ಬಿಟಿಡಿಎ ಅಧ್ಯಕ್ಷ ಎಚ್. ವಾಯ್.ಮೇಟಿ ಮಾತನಾಡಿ ದೇಶಕ್ಕೆ ಅರ್ಥಪೂರ್ಣವಾದ ಸಂವಿಧಾನವನ್ನು ಡಾ.ಬಿ.ಆರ್.ಅಂಬೇಡ್ಕರ ನೀಡಿದ್ದು, ಅದರಲ್ಲಿ ಅಡಕವಾಗಿರುವ ಆಶಯ, ಅದರ ಹಿಂದೆ ಇರುವ ಸಮಾಜಿಕ ಕಳಕಳಿ, ಸಮಾನತೆ, ಭಾತೃತ್ವ ಸೇರಿದಂತೆ ಹತ್ತು ಹಲವಾರು ಮೌಲ್ಯಗಳನ್ನು ನಾವೆಲ್ಲರೂ ಅನುಸರಿಬೇಕು ಎಂದರು. ಉಪನ್ಯಾಸಕರಾಗಿ ಆಗಮಿಸಿದ್ದ ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಸಂಪತ್ ಲಮಾಣಿ ಮಾತನಾಡಿ ಪ್ರಜಾಪ್ರಭುತ್ವ ಒಂದು ಜೀವನದ ಶೈಲಿಯಾಗಿದೆ ಎಂದರು.

ಪ್ರಾರಂಭದಲ್ಲಿ ಸಂವಿಧಾನ ಪೀಠಿಕೆಯನ್ನು ಬೋಧಿಸಲಾಯಿತು. ಅನುಪಸ್ಥಿತಿಯಲ್ಲಿದ್ದ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರ ಸಂದೇಶವನ್ನು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಓದಿದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷ ಸವಿತಾ ಲೆಂಕನ್ನವರ, ಬುಡಾದ ಅಧ್ಯಕ್ಷ ರಜಾಕ್ ಬೇನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ ಉಪಸ್ಥಿತರಿದ್ದರು.

# ೨೦ರಂದು ಇಲಾಖಾ ಕ್ರೀಡಾಕೂಟ

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪ ನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಉತ್ತರ ಕನ್ನಡ ಕ್ಷೇತ್ರ ಶಿಕ್ಷಣಾಧೀಕಾರಿಗಳ ಕಾರ್ಯಾಲಯ, ಹೊನ್ನಾವರ ಇವರ ಸಂಯುಕ್ತ ಆಶ್ರಯದಲ್ಲಿ ಉತ್ತರ ಕನ್ನಡ ಶೈಕ್ಷಣಿಕ ಜಿಲ್ಲೆಯ ಜಿಲ್ಲಾ ಮಟ್ಟದ 14 ವರ್ಷ ವಯೋಮಿತಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳ ಇಲಾಖಾ ಕ್ರೀಡಾಕೂಟವನ್ನು ಸೆ.20 ರಂದು ಬೆಳಗ್ಗೆ 9.30 ಗಂಟೆಗೆ ಎಸ್.ಡಿ.ಎಂ ಪದವಿ ಕಾಲೇಜು ಕ್ರೀಡಾಂಗಣ ಪ್ರಭಾತನಗರ, ಹೊನ್ನಾವರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕುಮಟಾ ವಿಧಾನಸಭಾ ಕ್ಷೇತ್ರ ಶಾಸಕ ದಿನಕರ ಕೆ. ಶೆಟ್ಟಿ, ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಕರ್ನಾಟಕ ಮಾರ್ಕೇಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ಹೊನ್ನಾವರ ಪಟ್ಟಣ ಪಂಚಾಯತ ಉಪಾಧ್ಯಕ್ಷ ಸುರೇಶ ಹೊನ್ನಾವರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

# ವಿದ್ಯಾರ್ಥಿಗಳ ಸಾಧನೆ ಶಿಕ್ಷಕರಿಗೆ ಸಂತೋಷ: ಓಲೇಮಠ ಶ್ರೀ

**ಜಮಖಂಡಿ:** ವಿದ್ಯಾರ್ಥಿಗಳ ಸಾಧನೆ ಶಿಕ್ಷಕರಿಗೆ ಸಂತೋಷದ ಸಂಗತಿಯಾಗಿದೆ ವಿದ್ಯಾರ್ಥಿಗಳ ಬದುಕು ಕಟ್ಟಿ ಕೊಡುವ ಶಿಕ್ಷಕರು, ಶಿಷ್ಯರ ಸಾಧನೆಯಿಂದ ಸಂತೋಷ ಪಡುತ್ತಾರೆ. ಕಠಿಣವಾದ ಕಲ್ಲನ್ನು ಮೂರ್ತಿಕಾರರು ಕೆತ್ತಿ ಸುಂದರವಾದ ವಿಗ್ರಹ ತಯಾರಿಸುವಂತೆ ಶಿಕ್ಷಕರು ವಿದ್ಯಾರ್ಥಿಗಳ ಜೀವನ ರೂಪಿಸುತ್ತಾರೆ ಎಂದು ಓಲೇಮಠದ ಪ.ಪೂ. ಆನಂದ ದೇವರು ಅಭಿಪ್ರಾಯ ಪಟ್ಟರು.

ನಗರದ ಮುರುಗೋಡು ಕಲ್ಯಾಣ ಮಂಟಪದಲ್ಲಿ ರವಿವಾರ ಹುನ್ನೂರಿನ ಸರಕಾರಿ ಪ್ರೌಢಶಾಲೆ 2003–2004ನೇ ಸಾಲಿನ 10ನೇ ತರಗತಿ ಹಳೇ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರುನಮನ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹಿಂದೆ ಗುರು ಮುಂದೆ ಗುರಿ ಇದ್ದಲ್ಲಿ ಜೀವನ ಸುಂದರವಾಗಲಿದ್ದು, ಗುರುವನ್ನು ದೇವರಿಗೆ ಹೋಲಿಸಿದ್ದಾರೆ. ಶಿಕ್ಷಕರನ್ನು ಸ್ಮರಿಸುವದು, ಆದರಿಸುವದು, ಗೌರವಿಸುವದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯವಾಗಿದೆ. ಗಾಳಿಪಟ ಎತ್ತರಕ್ಕೆ ಹಾರಲು ಬೇಕಾದ ಸೂತ್ರ, ಬಾಲಂಗೋಚಿ, ದಾರದಂತೆ ಗುರುಗಳು ಕಾರ್ಯನಿರ್ವಹಿಸಿ ವಿದ್ಯಾರ್ಥಿಗಳನ್ನು ಎತ್ತರಕ್ಕೆ ಏರಿಸಿರುತ್ತಾರೆ ಎಂಬುದನ್ನು ಮರೆಯಬಾರದು ಎಂದರು.



ಶಿಕ್ಷಣ ಇಲಾಖೆ ವಿಶ್ರಾಂತ ನಿರ್ದೇಶಕ ಸಿದ್ದರಾಮ ಮನಹಳ್ಳಿ ಮಾತನಾಡಿ, ಬೀಜ ಮೊಳಯೊಡೆದು ಹೇಗೆ ದೊಡ್ಡ ಮರ ಆಗುವ ಹಾಗೆ ಬಾಲ್ಯದಿಂದ ಉತ್ತಮ ಸಂಸ್ಕಾರ, ಸಂಪ್ರದಾಯ, ಸಂಸ್ಕೃತಿ, ಆಚಾರ, ವಿಚಾರ, ತಿಳಿಸಿ ಸಮಾಜದಲ್ಲಿ ಪ್ರಜ್ಞಾವಂತ ಪ್ರಜೆಯನ್ನಾಗಿ ರೂಪಿಸುವರು ಶಿಕ್ಷಕರು. ಬಡವನಾಗಿ ಹುಟ್ಟುವುದು ತಪ್ಪಲ್ಲ ಬಡವನಾಗಿ ಸಾಯುವುದು ತಪ್ಪು. ಇರುವುದರೊಳಗೆ ಏನಾದರೂ ಸಾಧಿಸಬೇಕು. ಕಂಡಿದ್ದಕ್ಕೆ ಕಣ್ಣೆ ಸಾಕ್ಷಿ ಮಾಡಿದ್ದಕ್ಕೆ ಮಾತೆ ಸಾಕ್ಷಿ ಎಂಬಂತೆ. ಗುರುವಿನ ಮಾರ್ಗದರ್ಶನದೊಂದಿಗೆ ವಿದ್ಯಾರ್ಥಿಗಳು ಸಮಾಜದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು ಎಂದರು.

ಸನ್ 2003–04ನೇ ಸಾಲಿನ ಪ್ರೌಢಶಾಲಾ ಶಿಕ್ಷಕರಾದ ಐ.ಪಿ.ರಾಠೋಡ, ಮಂಜುನಾಥ ಮಾನೆ, ಕೆ.ಎಂ.. ಪೂಜಾರಿ, ಎಲ್.ಕೆ.ವಿಮಠ, ಕೆ.ಕೆ.ಮಠ, ಎ.ಎಂ. ಅವಟಿ, ಬಿ.ಎಸ್.ಕುಂಬಾರ,, ಎಸ್. ಕೆ.ಕಳ್ಳಿಮಠ, ಎಸ್.ಎಂ. ದಯಾಗೊಂಡ, ಎಂ.ಪಿ.ಮಾಗಿ, ಎಂ.ಎ.ದೇಶಪಾಂಡೆ, ವಿ.ಟಿ.ಪಡತಾರೆ, ಎಂ.ಪಿ.ಜೀರಗಾಳ, ಬಾಣದ ಮೇಡಂ, ವೀಣಾ ಹಾವನೂರ, ಎಂ.ಸಿ.ಹೊಸಮಠ, ಬಸವರಾಜ ಮಲಕನ್ನವರ, ಎಸ್.ಎಂ.ಬಿರಾದಾರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಬಸವರಾಜ ಬಿರಾದಾರ, ಡಾ.ಲಿಂಗಾನಂದ ಗವಿಮಠ ಮಾತನಾಡಿದರು, ಹಳೆಯ ವಿದ್ಯಾರ್ಥಿ ಸತೀಶ ಕಡಪಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರಸ್ವತಿ ಸಬರದ ಪ್ರಾರ್ಥಿಸಿದರು. ರಾಹುಲ ಬಳೋಲಗಿಡದ ಸ್ವಾಗತಿಸಿದರು. ಸಂಗಮೇಶ ಗಾಣಿಗೇರ, ಸರಿತಾ ಸಿರಗುಪ್ಪಿ, ನಿರೂಪಿಸಿದರು. ಶಿವಾನಂದ ಹಿರೇಮಠ ವಂದಿಸಿದರು.

# ವಿದ್ಯುತ್ ವ್ಯತ್ಯಯ

**ಕಾರವಾರ:** ಕಾರವಾರ ತಾಲೂಕು ವ್ಯಾಪ್ತಿಯಲ್ಲಿ ಬರುವ 33ಕೆವಿ ವಿದ್ಯುತ್ ಉಪಕೇಂದ್ರ ಕೋಣೆದಲ್ಲಿ ತುರ್ತು ನಿರ್ವಹಣಾ ಕೆಲಸ ಕೈಗೊಳ್ಳುತ್ತಿರುವ ಪ್ರಯುಕ್ತ ಸೆ17 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ 33 ಕೆವಿ ಕೋಣೆ ವಿದ್ಯುತ್ ಉಪಕೇಂದ್ರದಿಂದ ಪೂರೈಸಲ್ಪಡುವ ಕಾರವಾರ ನಗರ, ಕೋಡಿಬಾಗ, ಹಬ್ಬುವಾಡಾ, ಎನ್.ಎಚ್–17, ಬೈತಕೋಲ್, ಬಿಣಗಾ, ತೋಡುರ ಮತ್ತು ಅಮದಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿ ಗ್ರಾಹಕರು ಸಹಕರಿಸುವಂತೆ ಹೆಸ್ಕಾಂ, ಕಾರ್ಯನಿರ್ವಾಹಕ ಇಂಜಿನೀಯರು(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಡಸ್ ಕೆ.ಎಚ್ ಗ್ರಾಮದಲ್ಲಿ ನೂತನ ಗ್ರಾಮ ಪಂಚಾಯತ್ ಕಟ್ಟಡ ಉದ್ಘಾಟನೆ

# ಗಾಂಧೀಜಿ ಕನಸನ್ನು ನನಸು ಮಾಡುವುದೇ ನನ್ನ ಗುರಿ

**ಬೆಳಗಾವಿ:** ಸುಳ್ಳು ಹೇಳುವ ಮತ್ತು ಕೆಟ್ಟದ್ದನ್ನು ಮಾಡುವ ಸ್ವಭಾವ ನನ್ನದಲ್ಲ, ಅಧಿಕಾರ ಸಿಕ್ಕಿದಾಗ ಒಳ್ಳೆಯ ಕೆಲಸ ಮಾಡಬೇಕು ಎನ್ನುವುದು ನನ್ನ ಧ್ಯೇಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬಡಸ್ ಕೆ.ಎಚ್ ಗ್ರಾಮದಲ್ಲಿ ನೂತನ ಗ್ರಾಮ ಪಂಚಾಯತ್ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಗಾಂಧೀಜಿ ಅವರು ಹೇಳಿದಂತೆ ಹಳ್ಳಿ ಸುಧಾರಣೆಯಾದಾಗ ಮಾತ್ರ ದೇಶ ಸುಧಾರಣೆಯಾಗುತ್ತದೆ. 50% ರಷ್ಟು ಮಹಿಳೆಯರಿಗೆ ಸ್ಥಾನ ನೀಡಬೇಕೆನ್ನುವುದು ರಾಜೀವ್ ಗಾಂಧಿ ಕನಸಾಗಿತ್ತು. ಮನಮೋಹನ್ ಸಿಂಗ್ ಅವರು ನರೇಗಾ ತಂದ ನಂತರ ಗ್ರಾಮ ಪಂಚಾಯತಿಗಳಿಗೆ ಹೆಚ್ಚು ಶಕ್ತಿ ಬಂದಿದೆ ಎಂದು ಅವರು ಹೇಳಿದರು. ಈಗ ಎಲ್ಲದಕ್ಕೂ ಗ್ರಾಮ ಪಂಚಾಯತಿಗಳನ್ನು ಅವಲಂಭಿಸಲಾಗುತ್ತಿದೆ. ಗ್ರಾಮ ಪಂಚಾಯಿತಿಗಳಿಗೆ ಹೆಚ್ಚಿನ ಬಲ ಬಂದಿದ್ದು, ಜನ ಸಾಮಾನ್ಯರ ಪಾಲಿಗೆ ಗ್ರಾಮ ಪಂಚಾಯಿತಿಗಳು ದೇವಾಲಯಗಳಾಗಬೇಕು ಎಂದರು.



ಬೆಳಗಾವಿ ಗ್ರಾಮೀಣ ಕ್ಷೇತ್ರವನ್ನು ಅಭಿವೃದ್ಧಿ ಮಾದರಿ ಗ್ರಾಮವನ್ನಾಗಿ ಮಾಡುವುದೇ ನನ್ನ ಕನಸು. ಕ್ಷೇತ್ರದಲ್ಲಿ 65 ಸ್ಮಾರ್ಟ್ ಕ್ಲಾಸ್‌ಗಳನ್ನು ತೆರೆಯಲಾಗಿದ್ದು, ಅತೀ ಹೆಚ್ಚು ಅಂಗನವಾಡಿಗಳನ್ನು ಕಟ್ಟಿದ್ದೇನೆ, ಮುಂದೆ ಸರ್ಕಾರಿ ಮಾಂಟೆಸ್ಸರಿ ಆರಂಭಿಸಲಾಗುತ್ತಿದ್ದು, ಇದರಿಂದ ಬಡ ಮಕ್ಕಳಿಗೆ ಹೆಚ್ಚು ಅನುಕೂಲ ಆಗಲಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ನನಗೆ ಮತ ಹಾಕಿದ ಜನರಿಗೆ ಸಾರ್ಥಕ ಭಾವನೆ ಮೂಡಬೇಕು. ಇಲಾಖೆಯಲ್ಲೂ ಒಳ್ಳೆಯ ಕೆಲಸ ಮಾಡುತ್ತಿದ್ದೇನೆ. ಊರನ್ನು ಎತ್ತರಕ್ಕೆ ಕೊಂಡೊಯ್ಯುವ ಕೆಲಸ ಮಾಡೋಣ ಎಂದು ಸಚಿವರು ಕರೆ ನೀಡಿದರು.

ಇದೇ ವೇಳೆ ಮಾತನಾಡಿದ ವಿಧಾನಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಗ್ರಾಮ ಪಂಚಾಯತ್ ನೂತನ ಕಟ್ಟಡ ಈ ಗ್ರಾಮದ ಬಹು ದಿನಗಳ ಬೇಡಿಕೆಯಾಗಿತ್ತು. ಸಚಿವರ ಮಾರ್ಗದರ್ಶನದಲ್ಲಿ ನೂತನ ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆ. ಸರ್ಕಾರದಿಂದ ಹೆಚ್ಚಿನ ಅನುದಾನ ತಂದು ಸಚಿವರು ದೂರದೃಷ್ಟಿಯಿಂದ ಕೆಲಸ ಮಾಡುತ್ತಿದ್ದಾರೆ ಎಂದರು. 25 ವರ್ಷ ಮುಂದೆ ಕ್ಷೇತ್ರ ಹೇಗಿರಬೇಕು ಎಂದು ಯೋಚಿಸಿ ಸಚಿವರು ಕೆಲಸ ಮಾಡುತ್ತಿದ್ದಾರೆ. ಹಿಂದೆಲ್ಲ ಅನುದಾನಕ್ಕಾಗಿ ಗ್ರಾಮಸ್ಥರು ಓಡಾಡುವುದೇ ಕೆಲಸ ಆಗುತ್ತಿತ್ತು. ಈಗ ನೀವು ಹೇಳಿದಂತೆ ನಾವು ಕೆಲಸ ಮಾಡುತ್ತಿದ್ದೇವೆ. ಕೆಲಸ ಮಾಡುವವರಿಗೆ ಬೆಂಬಲ ಕೊಡಬೇಕು. ಆಗ ಹೆಚ್ಚಿನ ಕೆಲಸ ಮಾಡಲು ಉತ್ಸಾಹ ಬರುತ್ತದೆ ಎಂದು ಚನ್ನರಾಜ್ ಹಟ್ಟಿಹೊಳಿ ಹೇಳಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮಡಿವಾಳೇಶ್ವರ ಮಠದ ಪ್ರಶಾಂತ ದೇವರು ವಹಿಸಿದ್ದರು.

ಕಾರ್ಯಕ್ರಮದಲ್ಲಿ ತಾಲೂಕಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಪ್ರದೀಪ್ ಸಾವಂತ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ನಾಗಪ್ಪ ಕುರುಬರ್, ಉಪಾಧ್ಯಕ್ಷರಾದ ಸುನಿಲ್ ದಳವಾಯಿ, ಸದಸ್ಯರಾದ ಗಂಗಪ್ಪ ಮುನವಳ್ಳಿ, ಶಿವಾಜಿ ಖೇಮಜಿ, ಬಂಗಾರೆವ್ವ ಅಲಾಬದಿ, ಮೌಲಾಲಿ ಯಕ್ಕುಂಡಿ, ಅಶ್ವಿನಿ ಖೇಮಜಿ, ಸುನಿತಾ ಕಲಾರಕೊಪ್ಪ ಇನಾಯತಲಿ ಅತ್ತಾರ, ಮಹಾದೇವಿ ಶೀಗಿಹಳ್ಳಿ, ಭೀಮಪ್ಪ ಹಣಮಂತ ಪೂಜೇರ, ಸಂತೋಷ ಬಂದವ್ವಗೋಳ, ಮಲ್ಲವ್ವ ಕೋಲಕಾರ, ಮಹಾದೇವಿ ಕೋಲಕಾರ ಮುಂತಾದವರು ಉಪಸ್ಥಿತರಿದ್ದರು.

# ಧರ್ಮಸ್ಥಳದಲ್ಲಿ ಧರ್ಮವಿದ್ದ ಕಾರಣ ಸತ್ಯಕ್ಕೆ ಜಯವಾಗಿದೆ



**ಮೂಡಲಗಿ :** ಧರ್ಮಸ್ಥಳದ ಹೆಸರು ಕೆಡಿಸಲು ಸಾಕಷ್ಟು ಷಡ್ಯಂತ್ರ ನಡೆಸಿದ್ದರು ಸತ್ಯಕ್ಕೆ ಜಯ ಸಿಕ್ಕಿದೆ ಎಲ್ಲರ ಜೀವನವು ಸುಖಮಯಾಗಿರಲಿ ಎಂದು ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕಿ ನಾಗರತ್ನ ಹೆಗಡೆ ಹೇಳಿದರು

ಮಸಗುಪ್ಪಿ ಶ್ರೀ ಮಹಾಲಕ್ಷ್ಮಿ ದೇವಾಲಯ ಕಲ್ಯಾಣ ಮಂಟಪದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಪ್ರಾಯೋಜಿತ ನವಜೀವನ ಸಮಿತಿ ಸದಸ್ಯರ ಸಮಾವೇಶ ಹಾಗೂ ಸುಜ್ಞಾನ ನಿಧಿ ಶಿಷ್ಯ ವೇತನ ಮಂಜೂರಾತಿ ಪತ್ರ ವಿತರಣಾ ಸಮಾರಂಭದಲ್ಲಿ ಅತಿಥಿಯಾಗಿ ಆಗಮಿಸಿ ಮಾತನಾಡಿದರು,

ದಿವ್ಯ ಸಾನಿಧ್ಯ ವಹಿಸಿ ನಾಗನೂರಿನ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಡಾ. ಮಾತೋಶ್ರೀ ಕಾವ್ಯಶ್ರೀ ಮಾತಾಜೀ ಮಾತನಾಡಿ ತಂದೆ ತಾಯಿ ಋಣ ತೀರಿಸಲು ಸಾಧ್ಯವಿಲ್ಲ, ಜೀವನದಲ್ಲಿ ಸಹಾಯ ಸಹಕಾರ ನೀಡಿದವರನ್ನು ಮರೆಯದೆ ಸ್ಮರಿಸಬೇಕು. ಕ್ಷೇತ್ರದಿಂದ ಮಂಜೂರಾದ ಶಿಷ್ಯವೇತನವನ್ನು ಪ್ರತಿಭಾವಂತ ವಿದ್ಯಾರ್ಥಿಗಳಿಗಾಗಿ ಅನುಕೂಲವಾಗಲೆಂದು ನೀಡಿದ್ದು ಇದರ ಸದುಪಯೋಗಪಡಿಸಿಕೊಳ್ಳಿ ಹೇಳಿದರು.

ಮದ್ಯವರ್ಜನ ಶಿಬಿರದಲ್ಲಿ ಭಾಗವಹಿಸಿದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು ನಂತರದಲ್ಲಿ ನವ ಜೀವನ ಸಮಿತಿಯ ಸದಸ್ಯ ಶಿವಾನಂದ ಗೋಟು ಅನಿಸಿಕೆ ಹಂಚಿಕೊಂಡರು ಕಾರ್ಯಕ್ರಮದಲ್ಲಿ ಮಸುಗುಪ್ಪಿ ಗ್ರಾಮದ ಸಂಜು ಹೊಸಕೋಟೆ, ಬರಮಣ್ಣ ಗಂಗನ್ನವರ್, ಬರ್ಮಣ್ಣ ಆಶಿರೊಟ್ಟಿ,ಬಾಳಪ್ಪ ಗಂಗಣ್ಣವರ, ತಾಲೂಕಾ ಯೋಜನಾಧಿಕಾರಿ ರಾಜು ನಾಯ್ಕ ಉಮೇಶ್ ಹಡಗಲಿ, ಮಂಜುಳ ಹಿರೇಮಠ, ಕಾಮಾಕ್ಷಿ ನಾಯಕ್, ಸೇವಾ ಪ್ರತಿನಿಧಿಗಳು, ನವ ಜೀವನ ಸಮಿತಿಯ ಸದಸ್ಯರು, ಉಪಸ್ಥಿತರಿದ್ದರು.

# ಪ್ರತಿಯೊಬ್ಬರಿಗೂ ಪ್ರಜಾಪ್ರಭುತ್ವದಡಿ ಜೀವಿಸುವ ಹಕ್ಕಿದೆ

**ಹಾವೇರಿ:** ದೇಶದ ಪ್ರಜೆಗಳಾದ ನಾವುಗಳು ಪ್ರಜಾಪ್ರಭುತ್ವದ ಅಡಿಯಲ್ಲಿ ಜೀವಿಸುತ್ತಿದ್ದೇವೆ, ಪ್ರತಿಯೊಬ್ಬರಿಗೂ ಇಲ್ಲಿ ಸಮಾನ ಅವಕಾಶಗಳಿವೆ ಎಂದು ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಹೇಳಿದರು.

ನಗರದ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನವು ನಮ್ಮ ಉಸಿರು ಇದ್ದಹಾಗೆ, ಸಂವಿಧಾನವನ್ನು ನಾವು ಗೌರವಿಸಬೇಕು ಸಂವಿಧಾನದಿಂದ ಪ್ರಜಾಪ್ರಭುತ್ವದಲ್ಲಿ ಹೇಗೆ ಜೀವಿಸಬೇಕು ಎಂಬುವುದನ್ನು ತಿಳಿದುಕೊಂಡಿದ್ದೇವೆ ಪ್ರಜಾಪ್ರಭುತ್ವದ ಅಡಿಯಲ್ಲಿ ಪ್ರತಿಯೊಬ್ಬರಿಗೂ ವಾಕ್ ಸ್ವಾತಂತ್ರ್ಯ, ಬದುಕುವ ಹಕ್ಕು ಜೊತೆಗೆ ಕರ್ತವ್ಯಗಳನ್ನು ಪಡೆದುಕೊಂಡಿದ್ದೇವೆ. ಇಲ್ಲಿ ಯಾರು ಹೆಚ್ಚು ಮತ್ತು ಕಡಿಮೆ ಎನ್ನುವ ಮನೋಭಾವನೇ ಇಲ್ಲ, ಎಲ್ಲರಿಗೂ ಸಮಾನ ಅವಕಾಶಗಳಿವೆ ಎಂದರು.

ಸರ್ಕಾರವು ಪ್ರಜಾಪ್ರಭುತ್ವ ದಿನಾಚರಣೆಗೆ ಹೆಚ್ಚು ಮಹತ್ವ ನೀಡುತ್ತಾ ಬಂದಿದೆ ಕಳೆದ ವರ್ಷ ಮಾನವ ಸರಪಳಿ ನಿರ್ಮಿಸುವುದರ ಮೂಲಕ ವಿಶ್ವದಾಖಲೆ ಮಾಡಲಾಗಿದೆ ಈ ವರ್ಷ ನನ್ನ ಮತ ನನ್ನ ಹಕ್ಕು ಎಂಬ ಧ್ಯೇಯ ವಾಕ್ಯದೊಂದಿಗೆ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ ಎಂದರು. ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ಅವರು ಮಾತನಾಡಿ, ಪ್ರಜಾಪ್ರಭುತ್ವದ ಮೌಲ್ಯಗಳಾದ ಸ್ವಾತಂತ್ರ್ಯ, ಸಮಾನತೆ, ಭಾಗವಹಿಸುವಿಕೆ, ಉತ್ತರದಾಯಿತ್ವ, ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲವರ್ಧನೆ ಮಾಡಿ ಜನರಲ್ಲಿ ಅರಿವು ಮೂಡಿಸುವ ಕೆಲಸಮಾಡಬೇಕು. ವಿವಿಧ ಆಡಳಿತ ವ್ಯವಸ್ಥೆಗಳಾದ ಚಕ್ರಾಧಿಪತ್ಯ, ರಾಜಪ್ರಭುತ್ವ, ನಿರಂಕುಶ ಪ್ರಭುತ್ವ ಈ ಎಲ್ಲ ವ್ಯವಸ್ಥೆಗಳಲ್ಲಿ ಒಳ್ಳೆಯ ಆಡಳಿತ ನೀಡುವ ವ್ಯವಸ್ಥೆ ಇದ್ದರೆ ಅದು ಪ್ರಜಾಪ್ರಭುತ್ವ ವ್ಯವಸ್ಥೆ ಎಂದರು.



ಕೆನಡಾ ಲೇಖಕರಾದ ನವಮಿ ರವರ ಪ್ರಕಾರ ಒಬ್ಬ ಮನುಷ್ಯ ಕೇವಲ ಮತದಾನ ಮಾಡುವುದರಿಂದ ಪ್ರಜಾಪ್ರಭುತ್ವ ವ್ಯವಸ್ಥೆ ಆಗುವುದಿಲ್ಲ. ಒಬ್ಬ ಮನುಷ್ಯ ಹೇಗೆ ಗೌರವಯುತವಾಗಿ ಸ್ವಾಭಿಮಾನದಿಂದ ಬದುಕು ಸಾಗಿಸುತ್ತಾನೆ ಎಂಬುದು ನಿಜವಾದ ಪ್ರಜಾಪ್ರಭುತ್ವದ ವ್ಯವಸ್ಥೆಯಾಗಿದೆ ಎಂಬುವುದನ್ನು ತಿಳಿಸದ್ದಾರೆ.

ಪ್ರಬಲ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾರ್ಯಾಂಗ, ನ್ಯಾಯಾಂಗ ಮತ್ತು ಶಾಸಕಾಂಗಗಳು ಯಾರ ಹಸ್ತಕ್ಷೇಪ ವಿಲ್ಲದೆ ಸ್ವತಂತ್ರವಾಗಿರಬೇಕು, ಸ್ವಾತಂತ್ರ್ಯ ಹಕ್ಕುಗಳು, ಸಮಾನ ಕಾನೂನುಗಳು ಇರಬೇಕು, ವ್ಯವಸ್ಥಿತ ವಿರೋಧ ಪಕ್ಷವಿರಬೇಕು ಆಗ ಆಡಳಿತ ಪಕ್ಷವನ್ನು ಹತೋಟಿಗೆ ತರಲು ಸಹಕಾರಿಯಾಗಲಿದೆ ಎಂದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಬೈಕ್ ರ್‍ಯಾಲಿಗೆ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಆಂಜನೇಯ ಹುಲ್ಲಾಳ ಸ್ವಾಗತಿಸಿದರು.ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಧಿಕಾರದ ಅಧ್ಯಕ್ಷರಾದ ಎಸ್ ಎಫ್ ಎನ್ ಗಾಜಿಗೌಡ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ನಗರ ಸಭೆ ಸದಸ್ಯರಾದ ಸಂಜೀವಕುಮಾರ ನೀರಲಗಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಶಾಂತ ಎಂ ವರಗಪ್ಪನವರ, ಸಮುದಾಯದ ಮುಖಂಡರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸೈಕಲ್ ಜಾಥಾಗೆ ಚಾಲನೆ

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಸೋಮವಾರ ಬೆಳಿಗ್ಗೆ 8.00 ಗಂಟೆಗೆ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ಸೈಕಲ್ ಜಾಥಾ ಚಾಲನೆ ನೀಡಿದರು. ಸೈಕಲ್ ರ್‍ಯಾಲಿಯು ನಗರದ ಜೆ.ಪಿ. ಸರ್ಕಲ್, ಎಂ.ಜಿ. ರಸ್ತೆ, ಹುಕ್ಕೇರಿಮಠ, ಗುತ್ತಲ ರಸ್ತೆ ಮಾರ್ಗವಾಗಿ ಹೊಸಮನಿ ಸಿದ್ದಪ ಸರ್ಕಲ್, ಹಾನಗಲ್ ರಸ್ತೆ ಮೂಲಕ ಬೈಪಾಸ್ ತಲುಪಿ, ಹೊಸಮನಿ ಸಿದ್ದಪ್ಪ ಸರ್ಕಲ್‌ಗೆ ಹಿಂದುರುಗಿ, ಪಿ.ಬಿ. ರಸ್ತೆ ಮಾರ್ಗವಾಗಿ ಸಂಚರಿಸುತ್ತಾ ಜಿ.ಹೆಚ್. ಕಾಲೇಜ್ ಹಿಂಭಾಗದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನಕ್ಕೆ ತಲುಪಿದರು ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಸಾರ್ವಜನಿಕರು ಅಧಿಕಾರಿಗಳು ಇದರಲ್ಲಿ ಭಾಗಿಯಾಗಿದ್ದರು.

# ನಾಳೆ ಶ್ರೀ ವಿಶ್ವಕರ್ಮ ಜಯಂತಿ

**ಗದಗ:** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರುಗಳ ಸಹಯೋಗದಲ್ಲಿ ಶ್ರೀ ವಿಶ್ವಕರ್ಮ ಜಯಂತಿ –2025 ನ್ನು ಸೆಪ್ಟೆಂಬರ್ 17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವ ಶಿವರಾಜ ಎಸ್ ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ –ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ.ವೆಂಕಟೇಶ್ಎಂ.ವಿ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಶ್ರೀಮತಿ ಕೆ.ಎಂ.ಗಾಯತ್ರಿ ಆಗಮಿಸುವರು.

# ಸಮಸ್ಯೆಗಳಿಗೆ ಸ್ಪಂದಿಸದ ಆರೋಪ ಗ್ರಾಪಂಗೆ ಬೀಗ



**ತೇರದಾಳ:** ತಮ್ಮ ಯಾವುದೇ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ಗೋಲಭಾವಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾಲತಿಪ್ಪಿ ಗ್ರಾಮದ ಗ್ರಾಪಂ ಸದಸ್ಯರು ಹಾಗೂ ಮುಖಂಡರು ಗ್ರಾಪಂ ಕಚೇರಿಗೆ ಬೀಗ ಜಡಿದು ಅಧಿಕಾರಿಗಳ ಜತೆಗೆ ವಾಗ್ವಾದ ನಡೆಸಿದ ಘಟನೆ ಸೋಮವಾರ ನಡೆದಿದೆ.

ಕಾಮಗಾರಿ ಮಾಡಿದ ಕಾರ್ಮಿಕರ ವೇತನವನ್ನು ಅವರ ಖಾತೆಗೆ ಜಮೆ ಮಾಡುತ್ತಿಲ್ಲ. ಆಶ್ರಯ ಮನೆಗಳ ಬಿಲ್‌ಗಾಗಿ ಜಿಪಿಎಸ್ ಮಾಡಲು ಹೋಗುತ್ತಿಲ್ಲ. ಇದರಿಂದ ಅರ್ಧಕ್ಕೆ ಮನೆಗಳು ನಿಂತು ಫಲಾನುಭವಿಗಳು ಅತಂತ್ರರಾಗಿದ್ದಾರೆ. ದನಗಳ ಶೆಡ್ ನಿರ್ಮಾಣಕ್ಕೆ ಅನುದಾನ ಮೀಸಲಿಟ್ಟಿದ್ದರು ಮಂಜೂರು ನೀಡುತ್ತಿಲ್ಲ ಎಂದು ಸದಸ್ಯರಾದ ಶಂಕರ ಉಗಾರ, ಚಂದ್ರಶೇಖರ ಸನದಿ, ಮಲ್ಲಪ್ಪ ಉಗಾರ, ಮುಖಂಡರಾದ ಗಜಾನನ ಕರಿಗಾರ, ಅಶೋಕ ರೆಡ್ಡಿ, ಸುರೇಶ ವಡರಟ್ಟಿ ಪಿಡಿಒ ಅವರನ್ನು ತರಾಟೆಗೆ ತಗೆದುಕೊಂಡರು. ಕೊಳವೆ ಬಾವಿ ಕೊರೆಸಲು ಅನುದಾನ ಇದೆ. ಅದನ್ನು ಕೊರೆಸುತ್ತಿಲ್ಲ. ನೀರಿನ ಟ್ಯಾಂಕ್ ಪೈಪ್ ಒಡೆದ ಕಾರಣ ನೀರು ಸರಬರಾಜು ಆಗುತ್ತಿಲ್ಲ. ಯಾವುದೇ ಸಮಸ್ಯೆ ಕೇಳಿದರು ಬರಿ ಸಬೂಬು ಹೇಳುತ್ತೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು. ತಾಪಂ ಇಒ ಬರುವವರೆಗೆ ಬೀಗ ತಗೆಯುವುದಿಲ್ಲ ಎಂದು ಹಠ ಹಿಡಿದರು. ಕೊನೆಗೆ ಇಒ ಮಂಗಳವಾರ ಬರುವುದಾಗಿ ಭರವಸೆ ನೀಡಿದ ಬಳಿಕೆ ಪ್ರತಿಭಟನೆ ಕೈ ಬಿಟ್ಟರು. ಶಂಕರ ರೆಡ್ಡಿ, ಮುತ್ತಪ್ಪ ಸವಸುದ್ದಿ, ಪರಪ್ಪ ಜಗದಾಳ ಇನ್ನಿತರರಿದ್ದರು.

# ಹಳೆಯ ವಿದ್ಯಾರ್ಥಿ ಭವನ ಉದ್ಘಾಟನೆ

**ಕಾರವಾರ:** ಸರ್. ಎಂ. ವಿಶ್ವೇಶ್ವರಯ್ಯ ರವರ ಜನ್ಮದಿನೋತ್ಸವದ ಅಂಗವಾಗಿ ಆಚರಿಸಲ್ಪಡುವ ರಾಷ್ಟ್ರೀಯ ಇಂಜಿನೀಯರಗಳ ದಿನಾಚರಣೆಯ ನಿಮಿತ್ತ ಎಲ್ಲಾ ಇಂಜಿನೀಯರಗಳಿಗೆ ಶುಭಾಶಯಗಳನ್ನು ತಿಳಿಸುತ್ತಾ ಇಂದು ಕಾರವಾರದಲ್ಲಿ ಪಾಲಿಟೆಕ್ನಿಕ್ ಕಾಲೇಜಿನ ಆವರಣದಲ್ಲಿ ಹಳೆಯ ವಿದ್ಯಾರ್ಥಿಗಳಿಂದ ನಿರ್ಮಿಸಲ್ಪಟ್ಟ "ಹಳೆಯ ವಿದ್ಯಾರ್ಥಿಗಳ ಭವನ" ಉದ್ಘಾಟನಾ ಸಮಾರಂಭಕ್ಕೆ ನಾನು ಖುದ್ದು ಹಾಜರಿರಬೇಕಿತ್ತು. ಆದರೆ ಸ್ವಲ್ಪ ಅನಾರೋಗ್ಯದ ನಿಮಿತ್ತ ಈ ಅಭೂತ ಪೂರ್ವ ಸಮಾರಂಭಕ್ಕೆ ಬರಲು ಆಗುತ್ತಿಲ್ಲವೆಂದು ಶಾಸಕ ಸತೀಶ್ ಸೈಲ್ ವಿಷಾದ ವ್ಯಕ್ತಪಡಿಸಿದ್ದಾರೆ.

ನಾನು ಕೂಡ ಈ ಕಾಲೇಜಿನ 1989-90 ರ ವಿದ್ಯಾರ್ಥಿಯಾಗಿದ್ದು, ಅಲ್ಲಿಯ ಪರಿಸರದಲ್ಲಿ ಓಡಾಡಿದ ನೆನಪುಗಳು ಇನ್ನೂ ಹಚ್ಚ ಹಸಿರಾಗಿದೆ. ಪ್ರಸ್ತುತ ಕಾಲಘಟ್ಟದಲ್ಲಿ ಎಲ್ಲರೂ ಸರಕಾರದ ಅನುದಾನಕ್ಕೆ ಕಾಯ್ದುಕುಳಿತಿರುವಾಗ ಇಲ್ಲಿ ಕಲಿತ ವಿದ್ಯಾರ್ಥಿಗಳು ಮುಂದೆ ಬಂದು "ಹಳೆಯ ವಿದ್ಯಾರ್ಥಿಗಳ ಭವನ"ವನ್ನು ಸುಮಾರು 1 ಕೋಟಿ 25 ಲಕ್ಷ ರೂಪಾಯಿಗಳಿಂದ ಕಟ್ಟಿಸಿಕೊಟ್ಟಿರುವುದು ಈ ಸುಸ್ವಂತ ಸಮಾಜಕ್ಕೆ ಮಾದರಿಯಾಗಿದೆ ಅಂದರೆ ತಪ್ಪಾಗಲಾರದು.

ನನ್ನ ಕಾರವಾರ-ಅಂಕೋಲಾ ವಿಧಾನಸಭಾ ಕ್ಷೇತ್ರದಲ್ಲಿ ಇಂತಹ ಮಹತ್ಕಾರ್ಯಗಳು ಇನ್ನೂ ಹೆಚ್ಚು ಹೆಚ್ಚು ಅಗಲು ತಾವುಗಳು ಪ್ರೇರಣೆ ಅಂದರೆ ಅತಿಶೀಯೋಕ್ತಿ ಆಗಲಾರದು. ನಿಮ್ಮ ಈ ಸಾಧನೆಯಿಂದ ಇಂದು ಉದ್ಘಾಟನೆಗೊಳ್ಳುತ್ತಿರುವ ಭವನ ಕಾಲೇಜಿಗಷ್ಟೇ ಸೀಮಿತವಾಗಿರದೇ ಸಾರ್ವಜನಿಕರಿಗೂ ಲಭ್ಯವಾಗಲಿ ಎಂದು ಕೇಳಿಕೊಳ್ಳುತ್ತೇನೆ. ಮತ್ತು ತಮ್ಮೊಡನೆ ನಾನು ಸದಾ ಇದ್ದು ಇಂತಹ ಮಹಾನ್ ಕೆಲಸಗಳನ್ನು ಮಾಡಲು ತಮ್ಮ ಮಾರ್ಗದರ್ಶನವನ್ನು ಪಡೆಯುತ್ತೇನೆಂದು ವಿನಯ ಪೂರ್ವಕವಾಗಿ ಕೇಳಿಕೊಳ್ಳುತ್ತಾ ಸಮಾರಂಭ ಯಶಸ್ವಿಯಾಗಲಿ ಎಂದು ಆ ಭಗವಂತನಲ್ಲಿ ಪ್ರಾರ್ಥಿಸಿಕೊಳ್ಳುತ್ತೇನೆ ಎಂದು ತಿಳಿಸಿದ್ದಾರೆ.

## ಕಡಲತೀರ ಸ್ವಚ್ಛತಾ ಅಭಿಯಾನ

**ಕಾರವಾರ:** ಸ್ವಚ್ಛ ಬೀಚಗಳು ಮತ್ತು ಮಾಲಿನ್ಯ ಮುಕ್ತ ಸಾಗರಗಳ ಪ್ರಾಮುಖ್ಯತೆಯ ಬಗ್ಗೆ ಸ್ಥಳೀಯ ಸಮುದಾಯಗಳನ್ನು ಸಂವೇದನಾಶೀಲಗೊಳಿಸಲು ಸೆ.20 ರಂದು ಬೆಳಗ್ಗೆ 8 ಗಂಟೆಗೆ ಕಡಲತೀರ ಸ್ವಚ್ಛತಾ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅರಣ್ಯ ಪರಿಒಸರ ಮತ್ತು ಜೀವಶಾಸ್ತ್ರ ಇಲಾಖೆಯ ಪ್ರಾದೇಶಿಕ ನಿರ್ದೇಶಕರು(ಪರಿಸರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಮಟಾ: ವಿದ್ಯುತ್ ವ್ಯತ್ಯಯ

**ಕಾರವಾರ:** ಹೆಸ್ಕಾಂ, ಕುಮಟಾ ಉಪವಿಭಾಗದ ಗ್ರಾಮೀಣ ಶಾಖೆಯ ವ್ಯಾಪ್ತಿಯ 11ಕೆ.ವಿ ಮಿರ್ಜಾನ್ ಫೀಡರಿನ ಮಾರ್ಗದಲ್ಲಿ ಹೊಸ 11ಕೆ.ವಿ ಮಾರ್ಗವನ್ನು ನಿರ್ಮಿಸುವ ಕಾರ್ಯವಿರುವುದರಿಂದ ಮಿರ್ಜಾನ್, ದುಂಡಕುಳಿ,ಯಲವಳ್ಳಿ, ಕೋಡ್ಕಣಿ, ಖಂಡಗಾರ, ನಾಗೂರ ಭಾಗಗಳಲ್ಲಿ ಸೆ.17 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಹಾಗೂ 33ಕೆ.ವಿ ಗೋಕರ್ಣ ಉಪಕೇಂದ್ರದಲ್ಲಿ ತುರ್ತುನಿರ್ವಹಣಾ ಕಾಮಗಾರಿ ಇರುವುದರಿಂದ ಮಾದನಗೇರಿ, ಗೋಕರ್ಣ, ತದಡಿ, ಬಂಕಿಕೊಡ್ಲ, ಬಿಜ್ಜೂರು, ಗಂಗಾವಳಿ, ಓಂ ಬಿಚ್‌ಫೀಡರಿನ ಎಲ್ಲಾ ಭಾಗದಲ್ಲಿ ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕಸುವಂತೆ ಹೆಸ್ಕಾಂ, ಕುಮಟಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ)ಇವರು ಪ್ರಕಟಣೆ ತಿಳಿಸಿದ್ದಾರೆ.

# ಮಗ್ಗಗಳ ಮಧ್ಯ ರೊಟ್ಟಿ ಸಪ್ಪಳ

## ರೊಟ್ಟಿ ತಟ್ಟಿ ಬದುಕು ಬಂಗಾರಗೊಳಿಸಿಕೊಂಡ ತಾಯಂದಿರು

ವರದಿ ಮಲ್ಲಿಕಾರ್ಜುನ ತುಂಗಳ

**ರಬಕವಿ-ಬನಹಟ್ಟಿ:** ದಿನಂಪ್ರತಿ ಮಗ್ಗಗಳ ಸಪ್ಪಳದಲ್ಲಿಯೇ ಕಾಲ ನಿರ್ವಹಿಸುತ್ತಿದ್ದ ರಬಕವಿ-ಬನಹಟ್ಟಿ ಅವಳಿ ನಗರ ಇದೀಗ ಬನಹಟ್ಟಿ ಆರಾಧ್ಯದೈವ ಶ್ರೀ ಕಾಡಸಿದ್ಧೇಶ್ವರ ಜಾತ್ರೆ ನಿಮಿತ್ತ ಪ್ರಥಮ ಬಾರಿಗೆ ರೊಟ್ಟಿ ನೀಡುವ ಭರಾಟೆಯಲ್ಲಿ ಎಲ್ಲೆಂದರಲ್ಲಿ ರೊಟ್ಟಿಗಳ ಗುಡಿ ಕೈಗಾರಿಕೆ ಬಲು ಜೋರಾಗಿದ್ದು, ಮಗ್ಗಗಳಷ್ಟೇ ಸಪ್ಪಳ ರೊಟ್ಟಿ ಬಡಿಯುವ ಶಬ್ದ ಕಂಡು ಬರುತ್ತಿರುವದು ಸಾಮಾನ್ಯವಾಗಿದೆ.

**ಮಾರುಕಟ್ಟೆಯಲ್ಲಿ ಹೊಸ ಹವಾ:** ಅವಳಿ ನಗರಾದ್ಯಂತ ಮಾರುಕಟ್ಟೆಯಲ್ಲಿ ರೊಟ್ಟಿ ವ್ಯಾಪಾರ ಬಲು ಜೋರಾಗಿದೆ. ಅಷ್ಟಕಷ್ಟೇ ರೊಟ್ಟಿ ಮಾರಾಟವಾಗುತ್ತಿದ್ದ ವ್ಯಾಪಾರಿಗಳಿಗೆ ಇದೀಗ ಮೂಲ ವ್ಯಾಪಾರವನ್ನಾಗಿಸಿಕೊಂಡು 5 ರೂ. ದಿಂದ 12 ರೂ.ಗಳವರೆಗೆ ಮಾರಾಟ ಮಾಡುತ್ತಿದ್ದಾರೆ.

ಇತ್ತ ಹಲವಾರು ಭಕ್ತರು ರೊಟ್ಟಿ ಖರೀದಿ ಮುಗಿ ಬಿದ್ದಿದ್ದು, ಜಾತ್ರೆಗೆ ವಿಶೇಷವಾಗಿ ದೇವರಿಗೆ ಅರ್ಪಿಸುತ್ತಿರುವದರಿಂದ ಒಂದು ವಾರ ಮೊದಲೇ ಜಾತ್ರೆಗೆ ಮೆರಗು ನೀಡುವಲ್ಲಿ



ಕಾರಣವಾಗಿದೆ.

ಪಟಾಕಿಯಷ್ಟೇ ಮಹತ್ವ ಪಡೆದ ರೊಟ್ಟಿ: ಜಾತ್ರೆಯಲ್ಲಿ ಸುಮಾರು 70 ರಿಂದ 80 ಲಕ್ಷದವರೆಗೆ ಪಟಾಕಿ ಮದ್ದು ಸುಡುವ ಕಾರ್ಯಕ್ರಮದಿಂದ ಉತ್ತರ ಕರ್ನಾಟಕದಲ್ಲಿಯೇ ವಿಶೇಷತೆ ಪಡೆದಿದ್ದು, ಪ್ರಸಕ್ತ ವರ್ಷ ಒಂದುವರೆ ಲಕ್ಷದಷ್ಟು ರೊಟ್ಟಿ ಸಂಗ್ರಹವಾಗಿರುವದು ವಿಶೇಷವಾಗಿದೆ.

ಮಹಿಳೆರಿಂದ ರೊಟ್ಟಿ ಬುತ್ತಿ: ಕಳೆದೊಂದು ವಾರದಿಂದ ಸರದಿಯಲ್ಲಿ ಗುಂಪು-ಗುಂಪಾಗಿ ಸಾವಿರಾರು ಮಹಿಳೆಯರು ತಲೆ ಮೇಲೆ ರೊಟ್ಟಿ ಬುತ್ತಿಗಳನ್ನು ಹೊತ್ತು ದೇವಾಲಯ ಆವರಣದೊಳಗೆ ತಂದು ಕೊಡುತ್ತಿದ್ದಾರೆ. ಈ ಬಾರಿ ಪ್ರಥಮ ಬಾರಿಗೆ ವಿಶೇಷ ರಹಕೆ ಹೊತ್ತುಕೊಂಡವರು ಸಾವಿರಾರು ರೊಟ್ಟಿಗಳನ್ನು ತರುತ್ತಿರುವದು ಗಮನೀಯ ಅಂಶ.



**ಇಂದಿನಿಂದ ರೊಟ್ಟಿ ಊಟ:** ಸೆ.15 ಸೋಮವಾರ ಬೆಳಿಗ್ಗೆ 9 ಗಂಟೆಗೆ ಊರಿನ ಕಾಡಸಿದ್ಧೇಶ್ವರ ದೇವಾಲಯದಿಂದ ಸಾವಿರಾರು ಮಹಿಳೆಯರೊಂದಿಗೆ ಮತ್ತೇ ರೊಟ್ಟಿ ಬುತ್ತಿ ಹೊತ್ತು ಆರಾಧ್ಯದೈವ ಕಾಡಸಿದ್ಧೇಶ್ವರ ದೇವಾಲಯದವರೆಗೆ ಮೆರವಣಿಗೆ ಜರುಗಲಿದ್ದು, ಮಧ್ಯಾಹ್ನದಿಂದಲೇ ರೊಟ್ಟಿ ಊಟ ಶುರುವಾಗಲಿದೆ ಎಂದು ಜಾತ್ರಾ ಕಮಿಟಿಯ ಶ್ರೀಶೈಲ ದಭಾಡಿ ತಿಳಿಸಿದರು.

# ವ್ಯವಸ್ಥಾಪನಾ ಸಮಿತಿ ರಚನೆ: ಅರ್ಜಿ ಆಹ್ವಾನ

**ಕಾರವಾರ:** ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯಮ 1997 ಮತ್ತು ತಿದ್ದುಪಡಿ ಅಧಿನಿಯಮ 2011 ರ ಕಲಂ 25 ರನ್ವಯ ಉತ್ತರ ಕನ್ನಡ ಜಿಲ್ಲೆಯಲ್ಲಿರುವ "ಸಿ" ಪ್ರವರ್ಗದ 6 ಅಧಿಸೂಚಿತ ಸಂಸ್ಥೆ/ದೇವಾಲಯಕ್ಕೆ 9 ಸದಸ್ಯರಿರುವ ವ್ಯವಸ್ಥಾಪನಾ ಸಮಿತಿಯನ್ನು 3 ವರ್ಷಗಳ ಅವಧಿಗೆ ರಚಿಸಲು, ಅಂಕೋಲಾ ತಾಲೂಕಿನ ತೆಂಕಣಕೇರಿ ಶ್ರೀ ಬೊಮ್ಮಯ್ಯ ದೇವಸ್ಥಾನ, ಬೆಲೆಕೇರಿ ಶ್ರೀ ಕಳಸ, ಮಹಾದೇವ ಹಾಗೂ ಪರಿವಾರ ದೇವ ದೇವಸ್ಥಾನ, ಕಾರವಾರ ತಾಲೂಕಿನ ಶೇಜವಾಡದ ಶೆಜ್ಜೇಶ್ವರ ದೇವಸ್ಥಾನ, ಹಳಗಾ ಘಡಸಾಯಿ ಶ್ರೀ ಲಕ್ಷ್ಮೀ ನಾರಾಯಣ ದೇವಸ್ಥಾನ, ಹಳಿಯಾಳ ತಾಲೂಕಿನ ಸಾಂಬ್ರಾಣಿಯ ಶ್ರೀ ಗ್ರಾಮದೇವಿ ದ್ಯಾಮವ್ವ, ದುರ್ಗವ್ವ ದೇವಸ್ಥಾನ ಟ್ರಸ್ಟ್, ಯಲ್ಲಾಪುರ ತಾಲೂಕಿನ ತುಡಗುಣಿಯ ಶ್ರೀ ಮಾರಿಕಾಂಬಾ ಶ್ರೀ ಈಶ್ವರ ದೇವಾಲಯ ಟ್ರಸ್ಟ್, ಈ ದೇವಾಲಯಗಳಿಗೆ ದೇವಸ್ಥಾನದ ಪ್ರಧಾನ ಅರ್ಚಕ-1, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ-1, ಮಹಿಳೆಯರು-2, ದೇವಸ್ಥಾನ/ಸಂಸ್ಥೆಯು ಇರುವ ಪ್ರದೇಶದ ಸ್ಥಳೀಯರು-2, ಇತರೆ-4 ಜನಗಳನ್ನು ಒಳಗೊಂಡು ಸಮಿತಿ ರಚಿಸಲು ಆಸಕ್ತ ಭಕ್ತಾಧಿಗಳು/ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕನಿಷ್ಠ 25 ವರ್ಷ ವಯಸ್ಸಾಗಿರುವ ಆಸಕ್ತ ಭಕ್ತಾಧಿಕಗಳು/ಸಾರ್ವಜಿಕರು ಯಾವುದೇ ಒಂದು ಅಧಿಸೂಚಿತ ಸಂಸ್ಥೆಯ/ದೇವಾಲಯ ವ್ಯವಸ್ಥಾಪನಾ ಸಮಿತಿಗೆ ಮಾತ್ರ ಸದಸ್ಯತ್ವ ಕೋರಿ ಅರ್ಜಿಯನ್ನು ನಿಗದಿತ ನಮೂನೆ-1(ಬಿ) (22 ನೇ ನಿಯಮ) ರಲ್ಲಿ ಭರ್ತಿ ಮಾಡಿ ಅರ್ಜಿಯನ್ನು ಅಕ್ಟೋಬರ್ 10 ರೊಳಗಾಗಿ ನೇರವಾಗಿ ಪದನಿಮಿತ್ತ ಕಾರ್ಯದರ್ಶಿ ಜಿಲ್ಲಾ ಧಾರ್ಮಿಕ ಪರಿಷತ್ ಮತ್ತು ಸಹಾಯಕ ಆಯುಕ್ತರು ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಇಲಾಖೆ,ಜಿಲ್ಲಾಧಿಕಾರಿಗಳ ಕಾರ್ಯಾಲಯ ಉತ್ತರ ಕನ್ನಡ ಕಾರವಾರ ರವರ ಕಚೇರಿಗೆ ನಿಗಧಿತ ಸಮಯದಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು. ತದನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ನಿಗಧಿತ ಅರ್ಜಿ ನಮೂನೆ ಹಾಗೂ ಸದಸ್ಯರಾಗಲು ಇರುವವ ಅರ್ಹತೆ, ಅನರ್ಹತೆಗಳ ವಿವರಗಳು ತಹಶೀಲ್ದಾರ ಕಾರವಾರ, ಅಂಕೋಲಾ, ಹಳಿಯಾಳ ಹಾಗೂ ಯಲ್ಲಾಪುರ ರವರ ಕಾರ್ಯಾಲಯ ಹಾಗೂ ಜಿಲ್ಲಾಧಿಕಾರಿಗಳ ಕಾರ್ಯಾಲಯ ಮುಜರಾಯಿ ಶಾಖೆಯಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದು ಪದನಿಮಿತ್ತ ಕಾರ್ಯದರ್ಶಿ ಜಿಲ್ಲಾ ಧಾರ್ಮಿಕ ಪರಿಷತ್ ಮತ್ತು ಸಹಾಯಕ ಆಯುಕ್ತರು ಮುಜರಾಯಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಧು-ವರರ ಸಮಾವೇಶ ಸಮಾಜಕ್ಕೆ ಅವಶ್ಯ



**ಘಟಪ್ರಭಾ:** ಇಂದಿನ ಕಾಲದಲ್ಲಿ ಸಮಾಜದಲ್ಲಿರುವ ಸರ್ವ ಸಮಾಜದ ನಾಗರೀಕರಿಗೆ ಅತೀ ಅವಶ್ಯವಾಗಿಎ?, ಮತ್ತು ವರದಕ್ಷಿಣೆ, ಹಾಗೂ ಮೂಢ ನಂಬಿಕೆಗಳಿಗೆ ಜೋತು ಬೀಳದೆ ತಮ್ಮ ಮಕ್ಕಳಿಗೆ ಸರಳ ವಿವಾಹ ಮಾಡಲು ಎಲ್ಲರೂ ಮುಂದಾಗಬೇಕು ಎಂದು ಘಟಪ್ರಭಾದ ಡಿ ಟಿ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಪ್ರೊ, ಕೆ ಡಿ ವಾಲಿಕಾರ ಹೇಳಿದರು.

ಅವರು ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಸಂದೀಪ್ ದೇಶಪಾಂಡೆ ಅವರ ಜನ್ಮದಿನದ ಪ್ರಯುಕ್ತ ಶ್ರೀ ಯಲ್ಲಮ್ಮ ದೇವಿ ವಧು-ವರರ ಸೂಚಕ ಕೇಂದ್ರ (ಕರ್ನಾಟಕ- ಮಹಾರಾಷ್ಟ್ರದ ವ್ಯಾಪ್ತಿಯ) ದವರು ಏರ್ಪಡಿಸಿದ್ದ ಸರ್ವ ಧರ್ಮ ವಧು-ವರರ ಸಮಾವೇಶದ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಕನ್ನಡ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಡಾ.ಕೆಂಪಣ್ಣ ಚೌಕಶಿ ಮಾತನಾಡಿ ಈಗಿನ ಕಾಲದಲ್ಲಿ ತಮ್ಮ ಮಕ್ಕಳ ವಿವಾಹ ಮಾಡಲು ಸೂಕ್ತ ಸಂಗಾತಿಗಳನ್ನು ಸಂಶೋಧನೆ ಮಾಡಲು ಇಂತಹ ಸಮಾವೇಶಗಳು ಸಹಾಯಕವಾಗುತ್ತದೆ ಅದನ್ನು ಘಟಪ್ರಭಾದಲ್ಲಿ ಏರ್ಪಡಿಸಿದ್ದಕ್ಕೆ ಸಂಘಟಕರಿಗೆ ಧನ್ಯವಾದ ಹೇಳಿದರು.

ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಅಧ್ಯಕ್ಷ ಶ್ರೀಕಾಂತ ಕುಲಕರ್ಣಿ ಮಾತನಾಡಿ ಘಟಪ್ರಭಾದಲ್ಲಿ ಯಾವುದೇ ಸಾಮಾಜಿಕ ಕಾರ್ಯಗಳಿಗೆ ರಾಘವೇಂದ್ರ ಸ್ವಾಮಿಗಳ ಮಠ ಮತ್ತು ಬ್ರಾಹ್ಮಣ ಸಮುದಾಯ ಸಂಪೂರ್ಣ ಸಹಕಾರ ನೀಡುತ್ತದೆ ಎಂದರು.ಸಂದರ್ಭದಲ್ಲಿ ಹಿರಿಯರಾದ ಡಿ. ಎಂ ದಳವಾಯಿ, ಸುರೇಶ್ ಪಾಟೀಲ, ಭೂಪಾಲ ಖೆಮಲಾಪುರೆ, ಜಗದೀಶ್ ಕಟ್ಟೀಮನಿ, ಎಂ ಜಿ ಬಡೋದೆ, ಸುಭಾಷ್ ದಡ್ಡೀಕರ, ಮಲ್ಲಪ್ಪ ಹುಕ್ಕೇರಿ, ಚಿರಾಕಲಿಶಾ ಮಕಾಂದಾರ್, ಹರೀಶ್ ಕಾಳೆ, ಉಮೇಶ್ ನಾಯಿಕ, ಕೃಷ್ಣಾ ಗಂಡವ್ವಗೋಳ, ಲವಕುಶ್ ಕುಡ್ಡೆಮ್ಮಿ, ಅರವಿಂದ ದೇಶಪಾಂಡೆ ,ರಾಘವೇಂದ್ರ ದೇಶಪಾಂಡೆ, ಪ್ರಹ್ಲಾದ ಕುಲಕರ್ಣಿ,

ಕನ್ನಡ ಸೇನೆ ಗೋಕಾಕ ತಾಲೂಕಿನ ಅಧ್ಯಕ್ಷ ಅಪ್ಪಾಸಾಬ ಮುಲ್ಲಾ, ಸಂಘಟಕರಾದ ರಾಜುಗೌಡ ಪಾಟೀಲ, ಶ್ರೀಮತಿ ಸಾರಿಕಾ ಪೇಟಕರ, ಶ್ರೀಮತಿ ಪೂಜಾ ಪ್ರಭು ಅಂತರಗಂಗಿ, ಸಂದೀಪ್ ಪೇಟಕರ. ಕೃಷ್ಣಾ ಗಂಡವ್ವಗೋಳ ,ಲವಕುಶ ಕುಡ್ಜೆಮ್ಮಿ, ಮುಂತಾದವರು ಉಪಸ್ಥಿತರಿದ್ದರು, ಕಾರ್ಯಕ್ರಮವನ್ನು ಸಾಮಾಜಿಕ ಕಾರ್ಯಕರ್ತ ಶ್ರೀಕಾಂತ ವಿ ಮಹಾಜನ ಪ್ರಾರಂಭದಲ್ಲಿ ಪ್ರಾರ್ಥನೆ, ನಡೆಸಿ ಎಲ್ಲರನ್ನೂ ಸ್ವಾಗತಿಸಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು ಸುಮಾರು ಎರಡು ನೂರಕ್ಕೂ ಹೆಚ್ಚು ವಧು-ವರರು ಕಾರ್ಯಕ್ರಮದ ಲಾಭವನ್ನು ಪಡೆದರು.

# ಪ್ರಜಾಪ್ರಭುತ್ವ ದಿನಾಚರಣೆ: ಸೈಕಲ್ ಜಾಥಾಗೆ ಚಾಲನೆ

**ಬಾಗಲಕೋಟೆ:** ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಸೈಕಲ್ ಜಾಥಾ ಹಾಗೂ ಮ್ಯಾರಥಾನ್‌ಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ್ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ಜಂಟಿಯಾಗಿ ಚಾಲನೆ ನೀಡಿದರು.

ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಕ್ರೀಡಾ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಸೈಕಲ್ ಜಾಥಾ ನವನಗರದ ಕಾಳಿದಾಸ ಶಿಕ್ಷಣ ಸಂಸ್ಥೆಯ ಮೈದಾನದಿಂದ ಪ್ರಾರಂಭವಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಜಿಲ್ಲಾಡಳಿತ ಭವನಕ್ಕೆ ಮುಕ್ತಾಯಗೊಂಡಿತು. ಮ್ಯಾರಥಾನ್ ಸಹ ಕಾಳಿದಾಸ ಶಿಕ್ಷಣ ಸಂಸ್ಥೆಯಿಂದ ಪ್ರಾರಂಭವಾಗಿ ವಿದ್ಯಾಗಿರಿ ಸರ್ಕಲ್ ಮಾರ್ಗವಾಗಿ ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರಕ್ಕೆ ಮುಕ್ತಾಯಗೊಂಡಿತು. ಸೈಕಲ್‌ಗಳಲ್ಲಿ ನನ್ನ ಮತ ನನ್ನ ಹಕ್ಕು ಎಂಬ ಘೋಷವಾಕ್ಯದ ಫಲಕಗಳನ್ನು ಪ್ರದರ್ಶಿಸಲಾಯಿತು. ಬಿಳಿ ಬಣ್ಣದ ಟೀಶರ್ಟ ಧರಿಸಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಸಮಾಜ ಕಲ್ಯಾಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ರಮೇಶ ಚವ್ಹಾಣ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಬಿಟಿಡಿಎ ಮುಖ್ಯ ಅಭಿಯಂತರ ಚಂದ್ರಹಾಸ ಬಂಡಿ, ಕೆಬಿಜೆಎನ್‌ಎಲ್ ಮುಖ್ಯ ಅಭಿಯಂತರ ಡಿ.ಬಸವರಾಜ, ಕೆಪಿಟಿಸಿಎಲ್ ಮುಖ್ಯ ಅಭಿಯಂತರ ಕಾಶಿನಾಥ ಹಿರೇಮಠ ಸೇರಿದಂತೆ ಇತರೆ ಗಣ್ಯಮಾನ್ಯರು ಪಾಲ್ಗೊಂಡಿದ್ದರು.



# ಜೀವನದಲ್ಲಿ ನಾಗರಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

**ಕಾರವಾರ:** ಶಿಕ್ಷಕರು ನಾಗರಿಕ ಮೌಲ್ಯಗಳನ್ನು ತಮ್ಮ ದಿನ ನಿತ್ಯದ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜವನ್ನು ನಿರ್ಮಾಣ ಮಾಡಿ, ಹೊಸ ಹೊಸ ವಿಷಯಗಳನ್ನು ಅರಿತುಕೊಂಡು ವಿದ್ಯಾರ್ಥಿಗಳಲ್ಲಿ ಧನಾತ್ಮಕ ಚಿಂತನೆಗಳನ್ನು ಮೂಡಿಸಬೇಕು. ಮುಂದಿನ ಆದರ್ಶ ಶಿಕ್ಷಕರಾಗುವ ಪ್ರಶಿಕ್ಷಣಾರ್ಥಿಗಳು ಧನಾತ್ಮಕ ಚಿಂತನೆಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸರಕಾರಿ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯ ಪ್ರಾಂಶುಪಾಲೆ ಗೀತಾ ವಾಲಿಕಾರ ಹೇಳಿದರು.

ಅವರು ಸೋಮವಾರ ಬಾಡದ ಶಿವಾಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ ಪೌರತ್ವ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಶಿವಾಜಿ ಶಿಕ್ಷಣ ಸಂಸ್ಥೆಯ ಖಜಾಂಚಿ ಕಿಶೋರ ರಾಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರಾದವರು ದಿನನಿತ್ಯ ವಿದ್ಯಾರ್ಥಿಗಳಾಗಿದ್ದು ಕಲಿಕೆ ನಿರಂತರವಾಗಿರುತ್ತದೆ. ನೀವು ಸಹ ನಿಮ್ಮ ನಿತ್ಯ ಜೀವನದಲ್ಲಿ ವಿದ್ಯಾರ್ಥಿಗಳಿಗೆ ಒಳ್ಳೆಯ ಮಾರ್ಗದರ್ಶಕರಾಗಿ ಉತ್ತಮ ಸಮಾಜವನ್ನು ನಿರ್ಮಿಸಿ ಎಂದರು.

ವಂದನಾ ನಾಯ್ಕ ಸಂಗಡಿಗರು ಪ್ರಾರ್ಥಿಸಿದರು, ಪ್ರಾಂಶುಪಾಲೆ ಡಾ.ಸುಮನ ಜಿ ಸಾವಂತ ಸ್ವಾಗತಿಸಿದರು. ವಂದನಾ ಮರಾಠಿ ಹಾಗೂ ಶೋಭಾ ನಾಗರಾಳ ಸ್ವಾಗತಿಸಿದರು ಶಿಬಿರದ ನಿರ್ದೇಶಕ ಡಾ.ನವೀನ ದೇವರಭಾವಿ ವಂದಿಸಿದರು. ಪ್ರಶಿಕ್ಷಣಾರ್ಥಿ ಪೂರ್ಣಿಮಾ ನಾಯ್ಕ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಸಿಬ್ಬಂದಿಗಳು ಹಾಗೂ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.

# ಸಿಸಿ ಟಿವಿ ಕ್ಯಾಮೆರಾ ಸೇವೆ ಉಚಿತ ತರಬೇತಿ

**ಕಾರವಾರ:** ಕೆನರಾ ಬ್ಯಾಂಕ್ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಸಿಸಿ ಟಿ.ವಿ. ಕ್ಯಾಮೆರಾ, ಸೆಕ್ಯೂರಿಟಿ ಅಲಾರಾಂ ಮತ್ತು ಸ್ಮೋಕ್ ಡಿಟೆಕ್ಟರ್‌ನ ಅಳವಡಿಕೆ ಮತ್ತು ಸೇವೆ ಕುರಿತ 13 ದಿನಗಳ ಉಚಿತ ತರಬೇತಿಯನ್ನು ಅಕ್ಟೋಬರ್ 6 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು. ಆಸಕ್ತರು ತಮ್ಮ ಹೆಸರನ್ನು ನೋಂದಾಯಿಸಲು ಸೆ. 30 ಕೊನೆಯ ದಿನವಾಗಿದೆ. ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9241482541, 9740982585, 9113880324 ಅನ್ನು ಸಂಪರ್ಕಿಸುವಂತೆ ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸರ್ ಎಂ ವಿಶ್ವೇಶ್ವರಯ್ಯ ಜನ್ಮದಿನದ ಅಂಗವಾಗಿ ಇಂಜಿನಿಯರಿಂಗ್ ದಿನಾಚರಣೆ

# ದೇಶದ ಅಭಿವೃದ್ಧಿಯಲ್ಲಿ ಇಂಜನಿಯರಗಳ ಪಾತ್ರ ಅತಿಮುಖ್ಯ

**ಮುದ್ದೇಬಿಹಾಳ:** ಒಂದು ದೇಶದ ಅಭಿವೃದ್ಧಿಯಲ್ಲಿ ಇಂಜನಿಯರಗಳ ಪಾತ್ರವೂ ಪ್ರಮುಖವಾಗಿರುತ್ತದೆ ಎಂದು ನಿವೃತ್ತ ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ, ಜೆಡಿಎಸ್ ಹಿರಿಯ ಮುಖಂಡ, ಕರ್ನಾಟಕ ರಾಜ್ಯ ರೈತ ಹಸಿರು ಸೇನೆಯ ಕಾರ್ಯಾಧ್ಯಕ್ಷ್ಯ ಬಸನಗೌಡ.ಬಿ ಪಾಟೀಲ್ (ಮುರಾಳ) ಹೇಳಿದರು. ಸೋಮುವಾರ ಮುದ್ದೇಬಿಹಾಳ ಪಟ್ಟಣದ ಇಂಜನಿಯರಿಂಗ್ ಸಂಘದ ಕಚೇರಿಯಲ್ಲಿ ಸಂಘದ ವತಿಯಿಂದ ಹಮ್ಮಿಕೊಂಡ ಸರ್ ಎಂ ವಿಶ್ವೇಶ್ವರಯ್ಯ ಜನ್ಮದಿನದ ಅಂಗವಾಗಿ ಇಂಜಿನಿಯರಿಂಗ್ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಎಂ ವಿಶ್ವೇಶ್ವರಯ್ಯನವರು 1885 ರಲ್ಲಿ ಮುಂಬಯಿ ಪ್ರಾಂತದ ಲೋಕೋಪಯೋಗಿ ಇಲಾಖೆಯ ಇಂಜಿನಿಯರ್ ರಾಗಿ ಈಗ ನಾವು ಯಾವುದನ್ನು ಇನೋವೇಶನ್ ಹೊಸತನದ ಆವಿಷ್ಕಾರ ಎನ್ನುತ್ತೇವೆಯೋ ಅದನ್ನು ಅವರು ಆಗಲೇ ಮಾಡಿದವರು ನೀರು ಸರಬರಾಜು ವಿನ್ಯಾಸ, ವ್ಯವಸಾಯ, ಒಳಚರಂಡಿ ನಗರಗಳ ಬಡಾವಣೆ ವಿನ್ಯಾಸ ಅದರೊಳಗೆ ನೀರು ಸರಬರಾಜು ಒಳಚರಂಡಿ ರಸ್ತೆ ವಿದ್ಯುತ್ ಮತ್ತು ಸ್ವಯಂಚಾಲಿತ ಆಣೆಕಟ್ಟು ದ್ವಾರ ನಿರ್ಮಾಣ ರೂಪಿಸಿ ಬೌದ್ಧಿಕ ಹಕ್ಕು ಪಡೆದುಕೊಂಡ ಹೆಗ್ಗಳಿಕೆ ಸರ್ ಎಂ.ವಿ ಅವರದ್ದು ಎಂದರು.

ಇದೇ ವೇಳೆ ನಿವೃತ್ತಿ ಲೋಕೋಪಯೋಗಿ ಇಲಾಖೆ ಅಧಿಕಾರಿ ಬಿ ಬಿ ಪಾಟೀಲ ಮುರಾಳ, ಕೆ ಬಿ ಕೆ ಎನ್ ಎಲ್ ನಿವೃತ್ತ ಇಂಜಿನಿಯರ್ ಎಸ್ ಎ ತೂಂಡಿಹಾಳ




ಅವರನ್ನು ಸನ್ಮಾನಿಸಿದರು.

ಈ ವೇಳೆ ಕೆ ಬಿ ಕೆ ಎನ್ ಎಲ್ ನಿವೃತ್ತ ಇಂಜಿನಿಯರ್ ಎಸ್ ಎ ತೂಂಡಿಹಾಳ, ಇಂಜಿನಿಯರ್ ಸಂಘದ ಉಪಾಧ್ಯಕ್ಷ ಅನಿಲ್ ಕುಲಕರ್ಣಿ, ಕಾರ್ಯದರ್ಶಿ ಗುರುರಾಜ ನಾಗೂರ ಮಾತನಾಡಿ ನಾಲ್ಕನೇ ಕೃಷ್ಣರಾಜ ಒಡೆಯರ್ ಆಳ್ವಿಕೆಯಲ್ಲಿ ದಿವಾನರಾಗಿದ್ದ ಎಂ ವಿಶ್ವೇಶ್ವರಯ್ಯ ಕೃಷ್ಣರಾಜ ಸಾಗರ ಆಣೆಕಟ್ಟು ಕಟ್ಟಿದ ದೂರದೃಷ್ಟಿಯುಳ್ಳವರು ಮೈಸೂರು ಸ್ಯಾಂಡಲ್ ಸೋಪ್,ಜೋಗದ ಶರಾವತಿ, ವಿದ್ಯುತ್ ಯೋಜನೆ, ಭದ್ರಾವತಿ ಉಕ್ಕಿನ ಕಾರ್ಖಾನೆ ಮಾಡಿದ್ದಾರೆ ಅವರ ಸಾಧನೆಗೆ ಭಾರತ ರತ್ನ ಸೇರಿದಂತೆ ಅನೇಕ ಶ್ರೇಷ್ಠ ಪ್ರಶಸ್ತಿಗಳನ್ನು ಅವರು ಪಡೆದಿದ್ದಾರೆ ಎಂದರು.

ತಾಲೂಕು ಇಂಜಿನಿಯರ್ ಸಂಘದಿಂದ ತಾಲೂಕ ಸರಕಾರಿ ಆಸ್ಪತ್ರೆಯಲ್ಲಿ ಬಡರೋಗಿ ರೋಗಿಗಳಿಗೆ ಹಣ್ಣುಹಂಪಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಎಸ್ ಎಂ ಚಳಗೇರಿ,ಕೆ ಎಂ ಧವಳಗಿ,ಆರ್ ಎಸ್ ಕಿತ್ತೂರ,ಎಸ್ ವೈ ಮಾಲಗತ್ತಿ, ಎಂ ಎಂ ಮುದ್ದೇಬಿಹಾಳ,ಎಂ ಎ ಮಕಾನದಾರ,ಪಿ ಎಂ ದೂಟಿಹಾಳ,ಎಂ ಎ ಗುಡ್ನಾಳ,ಎಸ್ ಬಿ ಹಿರೇಮಠ,ಎಂ ಎಂ ಮಿರ್ಜಾ ,ಸಿ ಎಸ್ ನಾಯ್ಕೋಡಿ,ಎಂ ಹೆಚ್ ಗುಬಚಿ,ಉದಯ ಭೋವಿ, ಪ್ರಶಾಂತ ಅಂಬಿಗೇರ, ಗಿರೀಶ ಅಂಬಿಗೇರ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಸ್ವಾಗತ ಉಮೇಶ ಬಡಿಗೇರ, ಅಶೋಕ ಸಾಲಿಮಠ, ಸುಪ್ರಿತ್ ಚಳಗೇರಿ ಪರಿಚಯಿಸಿದರು. ರಾಮಚಂದ್ರ ಗಜೇಂದ್ರಗಡ ನಿರೂಪಿಸಿ ವಂದಿಸಿದರು.

17ನೇ ಪುಣ್ಯಸ್ಮರಣೆ



ಜನನ: 11-04-1982
ಮರಣ: 16-09-2008
ಶ್ರೀಮತಿ ಸರೋಜಾ ದ್ಯಾವಪ್ಪಾ ಮೇಟಿ
ನೀನು ನಮ್ಮನ್ನಗಲಿ ಇಂದಿಗೆ 17 ವರ್ಷವಾಯಿತು. ನಿಮ್ಮ ನೆನಪು ನಮ್ಮ ಮನದಲ್ಲಿ ಸದಾ ಹಚ್ಚು ಹಸಿರಾಗಿದೆ. ಪರಮಾತ್ಮನು ನಿಮ್ಮ ಪವಿತ್ರ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಪ್ರಾರ್ಥಿಸುತ್ತೇವೆ.
ದು:ಖತಪ್ತ
ತಂದೆ : ವೀರಪ್ಪಾ ಭೀ. ಕಾತ್ರಾಳ ತಾಯಿ : ಪಾರ್ವತಿ ವೀ. ಕಾತ್ರಾಳ
ಅಣ್ಣಂದಿರು : ಬಸವರಾಜ, ನಾರಾಯಣ
ಮಕ್ಕಳು : ಚಿ|| ಅಶ್ವಥ, ಅಭಿಷೇಕ ಹಾಗೂ ಅಪಾರ ಬಂಧು ಬಳಗ

# ಸರಕಾರದ ಯೋಜನೆಗಳ ಸದುಪಯೋಗಕ್ಕೆ ರಾಜ್ಯಪಾಲರ ಕರೆ




**ಧಾರವಾಡ:** "ಭಾರತೀಯ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿ ಅಭಿವೃದ್ಧಿಗಾಗಿ, ಕೃಷಿಯನ್ನು ಲಾಭದಾಯಕ ವ್ಯವಹಾರವನ್ನಾಗಿ ಮಾಡಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು, ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರವು ಹಲವು ಯೋಜನೆಗಳನ್ನು ರೂಪಿಸಿವೆ. ರೈತರು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಕರೆ ನೀಡಿದರು.

ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ಧಾರವಾಡ ವತಿಯಿಂದ ಆಯೋಜಿಸಿದ್ದ ಕೃಷಿ ಮೇಳ-2025 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು. "ಕೃಷಿ ಕ್ಷೇತ್ರದಲ್ಲಿ ಯುವಕರು ಮತ್ತು ಮಹಿಳೆಯರು ಉದ್ಯಮಶೀಲತೆ ಮತ್ತು ನಾವೀನ್ಯತೆಯೊಂದಿಗೆ ಮುಂದೆ ಬರುವ ಅವಶ್ಯಕತೆಯಿದೆ. ಕೃಷಿ-ಸ್ಟಾರ್ಟ್‌ಅಪ್‌ಗಳು, ಸಂಸ್ಕರಣಾ ಘಟಕಗಳು, ಕೃಷಿ ಪ್ರವಾಸೋದ್ಯಮ ಮತ್ತು ಸಾವಯವ ಕೃಷಿಯಂತಹ ಕ್ಷೇತ್ರಗಳು ಯುವಕರನ್ನು ಆಕರ್ಷಿಸುತ್ತಿವೆ. ಮಹಿಳೆಯರು ಕೃಷಿಯಲ್ಲಿ ಸಕ್ರಿಯರಾಗಿದ್ದರೆ, ಕುಟುಂಬದ ಆದಾಯ ಮತ್ತು ಪೋಷಣೆ ಎರಡೂ ಸುಧಾರಿಸುತ್ತವೆ" ಎಂದರು.

ಭಾರತೀಯ ನಾಗರಿಕತೆ ಮತ್ತು ಸಂಸ್ಕೃತಿಯ ಅಡಿಪಾಯವು ಕೃಷಿಯ ಮೇಲೆ ನಿಂತಿದೆ. ನಮ್ಮ ಋಷಿಮುನಿಗಳು ಕೃಷಿಯನ್ನು "ಕೃಷಿ ಕರ್ಮಣಿ" ಎಂದು ಕರೆಯುವ ಮೂಲಕ ಅದಕ್ಕೆ ಧರ್ಮ ಮತ್ತು ಕರ್ತವ್ಯ ಎರಡರ ಸ್ಥಾನಮಾನವನ್ನು ನೀಡಿದ್ದಾರೆ ಮತ್ತು ರೈತನನ್ನು "ಅನ್ನದಾತ" ಎಂದು ಪರಿಗಣಿಸಿದ್ದಾರೆ. ಭಾರತೀಯ ಆರ್ಥಿಕತೆಯಲ್ಲಿ ಕೃಷಿ ವಲಯವು ಪ್ರಮುಖ ಕೊಡುಗೆಯನ್ನು ಹೊಂದಿದೆ. ನಾವು ಸಾಂಪ್ರದಾಯಿಕ ಕೃಷಿಯಿಂದ ಆಧುನಿಕ ಕೃಷಿಗೆ ಸ್ಥಳಾಂತರಗೊಂಡಿದ್ದೇವೆ. ಇದರ ಹೊರತಾಗಿಯೂ, ಕೆಲವು ಬೆಳೆಗಳಲ್ಲಿ ನಮ್ಮ ಕೃಷಿ ಉತ್ಪಾದಕತೆ ಇನ್ನೂ ಜಾಗತಿಕ ಸರಾಸರಿಗಿಂತ ಕಡಿಮೆಯಾಗಿದೆ" ಎಂದು ಹೇಳಿದರು.

ಭಾರತದಲ್ಲಿ ಬೀಜ ಉದ್ಯಮವು ಸಾರ್ವಜನಿಕ ಮತ್ತು ಖಾಸಗಿ ವಲಯಗಳೆರಡರಲ್ಲೂ ದೊಡ್ಡ, ಮಧ್ಯಮ ಮತ್ತು ಸಣ್ಣ ಬೀಜ ಕಂಪನಿಗಳ ಮಿಶ್ರಣವಾಗಿದೆ. ಭಾರತೀಯ ಬೀಜ ವಲಯವು ಗಖ$ 6.3 ಬಿಲಿಯನ್ ಮೌಲ್ಯದ್ದಾಗಿದೆ ಮತ್ತು ಜಾಗತಿಕ ಮಾರುಕಟ್ಟೆಯಲ್ಲಿ ಶೇಕಡಾ 6 ರಷ್ಟು ಪಾಲನ್ನು ಹೊಂದಿರುವ ವಿಶ್ವದ ಐದನೇ ಅತಿದೊಡ್ಡ ವಲಯವಾಗಿದೆ. ಗುಣಮಟ್ಟದ, ಪ್ರಮಾಣೀಕೃತ ಮತ್ತು ಸ್ಥಳೀಯವಾಗಿ ನಿಯಮಾಧೀನ ಬೀಜಗಳು ರೈತರನ್ನು ಹೇಗೆ ತಲುಪುತ್ತವೆ ಎಂಬುದು ಮುಖ್ಯ. "ಬೀಜ ಮೇಳ"ದ ಉದ್ದೇಶವೆಂದರೆ ರೈತ ಸಹೋದರರು ಮತ್ತು ಸಹೋದರಿಯರು ವಿಜ್ಞಾನಿಗಳು ಮತ್ತು ವಿಶ್ವಾಸಾರ್ಹ ಉತ್ಪಾದಕರೊಂದಿಗೆ ನೇರವಾಗಿ ಸಂಪರ್ಕ ಸಾಧಿಸಬಹುದು, ಹೊಸ ಪ್ರಭೇದಗಳ ಬಗ್ಗೆ ಕಲಿಯಬಹುದು ಮತ್ತು ಅವರ ಕೃಷಿಗೆ ಸೂಕ್ತವಾದ ಬೀಜಗಳನ್ನು ಆಯ್ಕೆ ಮಾಡಬಹುದು. ಪ್ರಧಾನ ಮಂತ್ರಿಗಳು ನೀಡಿದ ಸ್ವಾವಲಂಬಿ ಭಾರತದ ಕರೆಯ ಬಲವಾದ ಆಧಾರಸ್ತಂಭ ಕೃಷಿ. ನಮ್ಮ ರೈತರು ಸ್ವಾವಲಂಬಿಗಳಾದಾಗ, ನಮ್ಮ ದೇಶವೂ ಸ್ವಾವಲಂಬಿಯಾಗುತ್ತದೆ. ಈ ದಿಕ್ಕಿನಲ್ಲಿ, ಗುಣಮಟ್ಟದ ಬೀಜಗಳು, ಉತ್ತಮ ತಂತ್ರಜ್ಞಾನ, ನ್ಯಾಯಯುತ ಬೆಲೆ ಮತ್ತು ಮಾರುಕಟ್ಟೆಗೆ ನೇರ ಪ್ರವೇಶವು ಅತ್ಯಂತ ಮುಖ್ಯವಾಗಿದೆ" ಎಂದು ಹೇಳಿದರು.

ಹಣ್ಣುಗಳು ಮತ್ತು ಹೂವುಗಳು ನಮ್ಮ ತಟ್ಟೆ ಮತ್ತು ಜೀವನವನ್ನು ರುಚಿ, ಬಣ್ಣ ಮತ್ತು ಪರಿಮಳದಿಂದ ತುಂಬಿಸುವುದಲ್ಲದೆ, ರೈತರಿಗೆ ಆದಾಯವನ್ನು ಹೆಚ್ಚಿಸುವ ದೊಡ್ಡ ಸಾಧನವೂ ಆಗಿದೆ. "ಒಂದು ಜಿಲ್ಲೆ-ಒಂದು ಉತ್ಪನ್ನ" ದಂತಹ ಯೋಜನೆಗಳು ಜಾರಿಯಲ್ಲಿರುವಾಗ, ಹಣ್ಣಿನ ಉತ್ಪಾದನೆ ಮತ್ತು ಹೂವಿನ ಉತ್ಪಾದನೆಯು ರೈತರನ್ನು ಜಾಗತಿಕ ಮಾರುಕಟ್ಟೆಗೆ ಕೊಂಡೊಯ್ಯುವ ಸಾಮರ್ಥ್ಯವನ್ನು ಹೊಂದಿದೆ. ಈ ಮೇಳದಲ್ಲಿ ಪ್ರದರ್ಶಿಸಲಾದ ಹಣ್ಣುಗಳು ಮತ್ತು ಹೂವುಗಳು ನಮ್ಮ ಕೃಷಿ ವೈವಿಧ್ಯತೆಯ ಒಂದು ನೋಟವಾಗಿದೆ. ಈ ಪ್ರದರ್ಶನದ ಮೂಲಕ, ರೈತರು ಸಾಂಪ್ರದಾಯಿಕ ಬೆಳೆಗಳ ಜೊತೆಗೆ ಹಣ್ಣುಗಳು ಮತ್ತು ಹೂವುಗಳತ್ತ ಗಮನ ಹರಿಸುವ ಮೂಲಕ ತಮ್ಮ ಆದಾಯವನ್ನು ಹೆಚ್ಚಿಸಬಹುದು ಎಂಬ ಸ್ಫೂರ್ತಿಯನ್ನು ಪಡೆಯುತ್ತಾರೆ" ಎಂದು ಹೇಳಿದರು.

"ಧಾರವಾಡದ ಕೃಷಿ ವಿಜ್ಞಾನ ವಿಶ್ವವಿದ್ಯಾಲಯವು ಈ ಜವಾಬ್ದಾರಿಯನ್ನು ಚೆನ್ನಾಗಿ ಪೂರೈಸುತ್ತಿದೆ. ಬೀಜ ಮೇಳ ಮತ್ತು ಹಣ್ಣು-ಹೂವು ಪ್ರದರ್ಶನವು ರೈತರಿಗೆ ವಿಜ್ಞಾನಿಗಳೊಂದಿಗೆ ಸಂವಹನ ನಡೆಸಲು, ಪರಸ್ಪರ ಅನುಭವಗಳಿಂದ ಕಲಿಯಲು ಒಂದು ವೇದಿಕೆಯನ್ನು ಒದಗಿಸುತ್ತದೆ. ಬೀಜ ಸಂಶೋಧನೆ, ಕೀಟ ಮತ್ತು ರೋಗ ನಿಯಂತ್ರಣ ಮತ್ತು ಕೃಷಿ ಯಂತ್ರಶಾಸ್ತ್ರದಲ್ಲಿ ಧಾರವಾಡ ವಿಶ್ವವಿದ್ಯಾಲಯವು ಮಾಡಿರುವ ಸಂಶೋಧನಾ ಕಾರ್ಯವು ಕರ್ನಾಟಕಕ್ಕೆ ಮಾತ್ರವಲ್ಲದೆ ಇಡೀ ಭಾರತಕ್ಕೆ ಸ್ಫೂರ್ತಿದಾಯಕವಾಗಿದೆ. ವಿಶ್ವವಿದ್ಯಾಲಯವು ಅಭಿವೃದ್ಧಿಪಡಿಸಿದ ಗೋಧಿ ಪ್ರಭೇದಗಳು ಇಂಡೋನೇಷ್ಯಾದಲ್ಲಿ ಬೇಡಿಕೆಯಲ್ಲಿವೆ ಮತ್ತು ದ್ವಿದಳ ಧಾನ್ಯಗಳ ಪ್ರಭೇದಗಳು ಆಫ್ರಿಕನ್ ದೇಶಗಳಲ್ಲಿ ಬೇಡಿಕೆಯಲ್ಲಿವೆ. ಕೃಷಿಯಲ್ಲಿ ವಿಜ್ಞಾನ ಮತ್ತು ನಾವೀನ್ಯತೆ ಪ್ರಮುಖ ಪಾತ್ರ ವಹಿಸುತ್ತದೆ" ಎಂದು ತಿಳಿಸಿದರು.

ಪ್ರಸ್ತುತ ಕೃಷಿಯು ಕಠಿಣ ಪರಿಶ್ರಮದ ಜೊತೆಗೆ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಅವಲಂಬಿಸಿದೆ. ಡ್ರೋನ್ ತಂತ್ರಜ್ಞಾನ, ನಿಖರ ಕೃಷಿ, ಹವಾಮಾನ ಸ್ನೇಹಿ ಪ್ರಭೇದಗಳು, ಸಾವಯವ ಕೃಷಿ, ನೈಸರ್ಗಿಕ ಕೃಷಿ ಮತ್ತು ಕೃಷಿ-ಸ್ಟಾರ್ಟ್‌ಅಪ್‌ಗಳೊಂದಿಗೆ ಹೊಲಗಳ ಮೇಲ್ವಿಚಾರಣೆ ಹೊಸ ಅವಕಾಶಗಳನ್ನು ಒದಗಿಸುತ್ತಿದೆ. ಹೆಚ್ಚಿನ ಬೆಳೆ ಉತ್ಪಾದನೆಯನ್ನು ಪಡೆಯಲು, ಕೃಷಿಯಲ್ಲಿ ಇತ್ತೀಚಿನ ತಂತ್ರಜ್ಞಾನ, ನೈಸರ್ಗಿಕ ಕೃಷಿ, ಸ್ಥಳೀಯ ಬೀಜಗಳ ಸಂರಕ್ಷಣೆ ಇತ್ಯಾದಿ ವಿಷಯಗಳ ಕುರಿತು ಹೆಚ್ಚು ವಿವರವಾದ ಸಂಶೋಧನೆ ಮಾಡುವ ಅವಶ್ಯಕತೆಯಿದೆ. ಇತ್ತೀಚೆಗೆ ರೈತರು ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ - ಹವಾಮಾನ ಬದಲಾವಣೆಯಿಂದಾಗಿ ಅಕಾಲಿಕ ಮಳೆ ಅಥವಾ ಬರ, ಕೀಟ ಮತ್ತು ರೋಗಗಳ ಹರಡುವಿಕೆ, ಹೆಚ್ಚಿದ ಉತ್ಪಾದನಾ ವೆಚ್ಚಗಳು, ಮಾರುಕಟ್ಟೆಯಲ್ಲಿ ಬೆಲೆ ಅಸ್ಥಿರತೆಯಂತಹ ಸವಾಲುಗಳನ್ನು ಎದುರಿಸಲು, ನೀರಿನ ಸಂರಕ್ಷಣೆ, ಬೆಳೆ ವೈವಿಧ್ಯೀಕರಣ, ರೈತ ಉತ್ಪಾದಕ ಸಂಸ್ಥೆಗಳು, ಮೌಲ್ಯವರ್ಧನೆ ಮತ್ತು ರಫ್ತಿನ ಕಡೆಗೆ ಕೆಲಸ ಮಾಡುವ ಅವಶ್ಯಕತೆಯಿದೆ" ಎಂದು ಹೇಳಿದರು.

ಭಾರತೀಯ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿ ಅಭಿವೃದ್ಧಿಗಾಗಿ, ಕೃಷಿ ಕೃಷಿಯನ್ನು ಲಾಭದಾಯಕ ವ್ಯವಹಾರವನ್ನಾಗಿ ಮಾಡಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು, ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರವು ಹಲವು ಯೋಜನೆಗಳನ್ನು ರೂಪಿಸಿವೆ. ಅವುಗಳಲ್ಲಿ ಪ್ರಮುಖ ಯೋಜನೆಗಳೆಂದರೆ- ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಮಣ್ಣಿನ ಆರೋಗ್ಯ ಕಾರ್ಡ್ ಮತ್ತು ಸಾಂಪ್ರದಾಯಿಕ ಕೃಷಿ ಅಭಿವೃದ್ಧಿ ಯೋಜನೆ, ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ, ಪ್ರಧಾನ ಮಂತ್ರಿ ಕಿಸಾನ್ ಸಂಪದ ಯೋಜನೆ, ಕೃಷಿ ಉತ್ಪನ್ನಗಳ ಸಮಗ್ರ ರಾಷ್ಟ್ರೀಯ ಮಾರುಕಟ್ಟೆ, ಕೃಷಿ ಸಾಲ, ಹತ್ತಿ ತಂತ್ರಜ್ಞಾನ ಮಿಷನ್, ಸಕ್ಕರೆ ತಂತ್ರಜ್ಞಾನ ಮಿಷನ್, ಸುಸ್ಥಿರ ಕೃಷಿಗಾಗಿ ರಾಷ್ಟ್ರೀಯ ಮಿಷನ್, ಇತ್ಯಾದಿ. ಈ ಯೋಜನೆಗಳನ್ನು ರೈತರು ಸದುಪಯೋಗ 'ಪಡೆದುಕೊಳ್ಳಬೇಕು" ಎಂದು ಕರೆ ನೀಡಿದರು.

ಸಮಾರಂಭದಲ್ಲಿ ಕುಲಪತಿ ಡಾ.ಪಿ.ಎಲ್. ಪಾಟೀಲ್ ಮತ್ತು ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ಪ್ರಧಾನ ಮಂತ್ರಿ ಜನ್ಮದಿನ ಬೃಹತ್ ರಕ್ತದಾನ ಶಿಬಿರ

**ಮೂಡಲಗಿ:** ಸಾಮಾಜಿಕ, ಆರ್ಥಿಕ ಮತ್ತು ಕಲ್ಯಾಣ (ಸೇವಾ) ಸಂಸ್ಥೆ, ಮಾಜಿ ಸೈನಿಕರ ಸಂಘ, ಸತ್ಯಸಾಯಿ ಸಮಿತಿ, ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಎನ್.ಎಸ್.ಎಸ್ ಘಟಕ ಕಲ್ಲೋಳಿ ಹಾಗೂ ರೋಟರಿ ರಕ್ತ ಭಂಡಾರ ಕೇಂದ್ರ ಗೋಕಾಕ ಇವರುಗಳ ಸಂಯುಕ್ತ ಆಶ್ರಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಪ್ರಯುಕ್ತ ಕಲ್ಲೋಳಿ ಪಟ್ಟಣದ ಶ್ರೀ ಸತ್ಯಸಾಯಿ ಮಂದಿರದ ಆವರಣದಲ್ಲಿ ಸೆ.17 ರಂದು ಬೆಳಿಗ್ಗೆ 09.30 ಗಂಟೆಗೆ ಬೃಹತ್ ಐಚ್ಛಿಕ ರಕ್ತದಾನ ಶಿಬಿರ ನಡೆಯಲಿದೆ.

ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ರಕ್ತದಾನ ಶಿಬಿರಕ್ಕೆ ಚಾಲನೆ ನೀಡುವರು. ರೋಟರಿ ಸಂಸ್ಥೆ ಅಧ್ಯಕ್ಷ ಗಿರೀಶ ಜಂವರ, ಉಪಾಧ್ಯಕ್ಷ ವಿಜಯ ದುರಾಯಿ, ಕಾರ್ಯದರ್ಶಿ ಬಸವರಾಜ ಹುಳ್ಳೇರ. ರೋಟರಿ ರಕ್ತ ಭಂಡಾರ ಕೇಂದ್ರ ಅಧ್ಯಕ್ಷ ಮಲ್ಲಿಕಾರ್ಜುನ ಕಲ್ಲೋಳಿ, ವೈದ್ಯಾಧಿಕಾರಿ ಬಿ. ಆರ್. ಕಪ್ಪಲಗುದ್ದಿ, ಸಾಯಿ ಸಮಿತಿ ಸದಸ್ಯ ಸುರೇಶ ಕಬ್ಬೂರ, ಶ್ರೀಶೈಲ ತುಪ್ಪದ, ಬಿಡಿಸಿಸಿ ಬ್ಯಾಂಕ ನಿರ್ದೇಶಕ ಸತೀಶ ಕಡಾಡಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಹೆಚ್ಚಿನ ಸಂಖ್ಯೆಯಲ್ಲಿ ಕಲ್ಲೋಳಿ ಪಟ್ಟಣದ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಯುವಕರು, ಬಿಜೆಪಿ ಕಾರ್ಯಕರ್ತರು, ಮೋದಿ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸೇವಾ ಸಂಸ್ಥೆಯ ಅಧ್ಯಕ್ಷ ಪರಪ್ಪ ಗಿರೆಣ್ಣವರ ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಪ್ರಿಯಾಂಕಾ ಮೆಟಗುಡ್ಡಗೆ ಪಿಎಚ್‌ಡಿ ಪ್ರಧಾನ

**ಬೈಲಹೊಂಗಲ:** ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಸ್ನಾತಕೋತ್ತರ ಗಣಿತಶಾಸ್ತ್ರ ಅಧ್ಯಯನ ವಿಭಾಗದ ಸಂಶೋಧನಾ ವಿದ್ಯಾರ್ಥಿನಿ



ಪ್ರಿಯಾಂಕಾ ಮಂಜುನಾಥ ಮೆಟಗುಡ್ಡ ಇವರು ಗಣಿತಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು ಪ್ರೊ. ಎಸ್. ಸಿ. ಶಿರಾಳಶೆಟ್ಟಿ ಅವರ ಮಾರ್ಗದರ್ಶನದಲ್ಲಿ ಮಂಡಿಸಿದ "ಎ ಸ್ಟಡಿ ಆಫ್ ವೆವ್ಲೆಟ್ ಥಿಯರಿ & ಇಟ್ಸ್ ಆಪ್ಲಿಕೇಶನ್ಸ್ ಟು ಸಾಲ್ವ್ ಡಸ್ಟಿ ಫ್ಲೂಯಿಡ್ಸ್ & ಹೀಟ್ ಟ್ರಾನ್ಸರ್ ಥ್ರೂ ಫಿನ್ಸ್ ಫ್ಲೋ ಪ್ರಾಬ್ಲೆಮ್ಸ್ " ಎಂಬ ಮಹಾಪ್ರಬಂಧಕ್ಕೆ ಕರ್ನಾಟಕ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ಪ್ರಧಾನ ಮಾಡಿದೆ.

# ಉಚಿತ ಆರೋಗ್ಯ ತಪಾಸಣೆ ಶಿಬಿರ



ಪಟ್ಟಣದ ಪೃಥ್ವಿ ಸೇಂಟ್ರಲ್ ಸ್ಕೂಲ್ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಮಭಿವೃದ್ಧಿ ಆಶ್ರಯದಲ್ಲಿ ಜ್ಞಾನವಿಕಾಸ ಕಾರ್ಯಕ್ರದಡಿ ಎಸ್‌ಡಿಎಂ ನಾರಾಯಣ ಸೆಂಟರ ಆಸ್ಪತ್ರೆ ಧಾರವಾಡ ಇವರ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಜರುಗಿತು.

**ಯರಗಟ್ಟಿ:** ಆರೋಗ್ಯ ಸಮೃದ್ಧಿಯಿಂದ ಇದ್ದರೆ ಮಾತ್ರ ಕುಟುಂಬಗಳು ಆರ್ಥಿಕವಾಗಿ ಸದೃಢವಾಗಿರಲು ಸಾಧ್ಯ ಎಂದು ಹೊಟೆಲ ಉದ್ಯಮಿ ಜೆ.ರತ್ನಾಕರ ಶೆಟ್ಟಿ ಹೇಳಿದರು.

ಪಟ್ಟಣದ ಪೃಥ್ವಿ ಸೇಂಟ್ರಲ್ ಸ್ಕೂಲ ಆವರಣದಲ್ಲಿ ರವಿವಾರ ಹಮ್ಮಿಕೊಂಡಿದ್ದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಆಶ್ರಯದಲ್ಲಿ ಜ್ಞಾನವಿಕಾಸ ಕಾರ್ಯಕ್ರದಡಿ ಎಸ್‌ಡಿಎಂ ನಾರಾಯಣ ಸೆಂಟರ ಆಸ್ಪತ್ರೆ ಧಾರವಾಡ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ಆರೋಗ್ಯ ಇಲ್ಲದಿದ್ದರೆ ದುಡಿದ ದುಡ್ಡು ಚಿಕಿತ್ಸೆಗಾಗಿ ವೆಚ್ಚ ಮಾಡಬೇಕಾಗುತ್ತದೆ.ಕುಟುಂಬ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲಕುತ್ತದೆ. ಆರೋಗ್ಯದ ಕಡೆ ಗಮನಹರಿಸಬೇಕು ಎಂದರು.

ಶಿಬಿರದಲ್ಲಿ ಬಿಪಿ, ಶುಗರ್, ಇಸಿಜಿ, ರಕ್ತದೊತ್ತಡ, ಹೃದಯ ಸಂಬಂದಿ ಕಾಯಿಲೆಗಳ ಹಲವು ಪರೀಕ್ಷೆ ಹಾಗೂ ವೈದ್ಯರೊಂದಿಗೆ ಸಮಾಲೋಚನೆ ಸೇರಿದಂತೆ ಎರಡು ನೂರಕ್ಕು ಹೆಚ್ಚು ಜನರ ಆರೋಗ್ಯ ತಪಾಸಣೆ ಮಾಡಿದರು.

ಜಿಪಂ ಮಾಜಿ ಸದಸ್ಯ ಅಜಿತಕುಮಾರ ದೇಸಾಯಿ ಅಧ್ಯಕ್ಷತೆ ವಹಿಸಿದ್ದರು, ಹೃದಯ ರೋಗ ತಜ್ಞ ಡಾ.ಮುರಳಿದರ, ಡಾ.ತೇಜಸ, ಯೋಜನೆ ಜಿಲ್ಲಾ ನಿರ್ದೇಶಕ ಲವಕುಮಾರ, ತಾಲೂಕ ಯೋಜನಾಧಿಕಾರಿ ಶ್ರೀಕಾಂತ ಎಂ , ವಲಯ ಮೇಲ್ವಿಚಾರಕ ನಾಗರಾಜ ನಾಯ್ಕ, ಅಜಯ ಹುಲಮನಿ, ನಾಗರಾಜ ಬಡಿಗೇರ, ಶಿವಾನಂದ ಜಾಲಗಾರ, ರವಿಕುಮಾರ, ಕೃಷಿ ಅಧಿಕಾರಿ ನಾಗಪ್ಪ ನಾಯ್ಕ, ಆರ್.ಬಿ.ಅಣ್ಣಿಗೇರಿ, ಮುತ್ತುರಾಜ ಬಡಿಗೇರ ಇತರರಿದ್ದರು.



ಯರಗಟ್ಟಿ : ಸಮೀಪದ ಮುನವಳ್ಳಿ ಪಟ್ಟಣದಿಂದ ಸುಕ್ಷೇತ್ರ ಇಟಗಿ ಶ್ರೀ ಭೀಮಾಂಭಿಕಾ ಕ್ಷೇತ್ರಕ್ಕೆ ಪಾದಯಾತ್ರೆಯನ್ನು ಶ್ರೀ ಭೀಮಾಂಬಿಕಾ ಭಕ್ತ ಮಂಡಳಿಯವರಿಂದ ಶನಿವಾರ ಹೊರಟರು. ಈ ವೇಳೆ ಬಸವರಾಜ ಶಿವಪೇಟಿ, ಸುಪ್ರಿಯಾ ನಂಬೂದ್ರಿ, ರಾಧಾ ಕುಲಕರ್ಣಿ, ಸಂಬಾಳಿಮಠ, ಗೊಂದಿ, ಕಲ್ಲೋಳ್ಳಿ ಹಾಗೂ ಸುತ್ತಲಿನ ಗ್ರಾಮಗಳ ಸದ್ಭಕ್ತರು ಪಾಲ್ಗೊಂಡಿದ್ದರು.

# ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯ



**ಗೋಕಾಕ:** ಶಾಲಾ ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯವಾಗಿದೆ. ಇಂದಿನ ಯುಗದಲ್ಲಿ ಶಿಕ್ಷಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಪ್ರಯತ್ನಿಸಬೇಕು ಎಂದು ಬೆಟಗೇರಿ ಗ್ರಾಮದ ಶ್ರೀ ಈಶ್ವರ ಭಜನಾ ಮಂಡಳಿ ಸಂಚಾಲಕ ಬಸವರಾಜ ಪಣದಿ ಹೇಳಿದರು.

ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದ ವಿವಿಡಿ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕಿ ಭಾಗ್ಯಶ್ರೀ ನಾಯಕ ಅವರಿಗೆ ತಾಲೂಕಾ ಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಲಭಿಸಿದ ಪ್ರಯುಕ್ತ ಇತ್ತೀಚೆಗೆ ಶಾಲೆಯಲ್ಲಿ ಸ್ಥಳೀಯ ಶ್ರೀ ಈಶ್ವರ ಭಜನಾ ಮಂಡಳಿ ವತಿಯಿಂದ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿ, ಸ್ಥಳೀಯ ಪ್ರೌಢ ಶಾಲೆಯ ಸಮಗ್ರ ಪ್ರಗತಿಗೆ ಸಹಕರಿಸುತ್ತಿರುವ ಶಾಲೆಯ ಮುಖ್ಯೋಪಾಧ್ಯಯರು, ಎಲ್ಲಾ ಶಿಕ್ಷಕರು, ಸಿಬ್ಬಂದಿ ವರ್ಗದವರ ಸೇವಾ ಕಾರ್ಯ ಮೆಚ್ಚುವಂತದ್ದಾಗಿದೆ ಎಂದರು.

ಸ್ಥಳೀಯ ಶ್ರೀ ಈಶ್ವರ ಭಜನಾ ಮಂಡಳಿ ವತಿಯಿಂದ ಇಲ್ಲಿಯ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕಿ ಭಾಗ್ಯಶ್ರೀ ನಾಯಕ ಅವರನ್ನು ಸತ್ಕರಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ, ಇಲ್ಲಿಯ ಈಶ್ವರ ಭಜನಾ ಮಂಡಳಿ ಪದಾಧಿಕಾರಿಗಳಾದ ಸುರೇಶ ಸಿದ್ನಾಳ, ಈಶ್ವರ ಬಳಿಗಾರ, ನಿಂಗಪ್ಪ ಕಂಬಿ, ಈರಪ್ಪ ದೇಯಣ್ಣವರ, ಮಲ್ಲಿಕಾರ್ಜುನ ನೀಲಣ್ಣವರ, ರಾಮಣ್ಣ ನೀಲಣ್ಣವರ, ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ, ಇತರರು ಇದ್ದರು.

# ತಾಲೂಕಾ ಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ

**ಗೋಕಾಕ:** ತಾಲೂಕಿನ ಬೆಟಗೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯ ಮುಖ್ಯ ಶಿಕ್ಷಕ ವೈ.ಸಿ.ಶೀಗಿಹಳ್ಳಿ ಅವರಿಗೆ ತಾಲೂಕಾ ಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಲಭಿಸಿದ ಪ್ರಯುಕ್ತ ಇತ್ತೀಚೆಗೆ ಶಾಲೆಯಲ್ಲಿ ಸ್ಥಳೀಯ ಶ್ರೀ ಈಶ್ವರ ಭಜನಾ ಮಂಡಳಿ ವತಿಯಿಂದ ಸನ್ಮಾನಿಸಲಾಯಿತು.

ಸ್ಥಳೀಯ ಈಶ್ವರ ಭಜನಾ ಮಂಡಳಿ ಪದಾಧಿಕಾರಿಗಳಾದ ಬಸವರಾಜ ಪಣದಿ, ಸುರೇಶ ಸಿದ್ನಾಳ, ಈಶ್ವರ ಬಳಿಗಾರ, ನಿಂಗಪ್ಪ ಕಂಬಿ, ಮಲ್ಲಿಕಾರ್ಜುನ ನೀಲಣ್ಣವರ, ಭೀಮನಾಯ್ಕ ನಾಯ್ಕರ, ರಾಮಣ್ಣ ನೀಲಣ್ಣವರ, ಈರಪ್ಪ ದೇಯಣ್ಣವರ, ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ, ಇತರರು ಇದ್ದರು.



# ಪಶು ಆಸ್ಪತ್ರೆ ನೂತನ ಕಟ್ಟಡಕ್ಕೆ ಭೂಮಿಪೂಜೆ



**ತೇರದಾಳ:** ಸರಕಾರಗಳು ನೀಡುವ ಅಭಿವೃದ್ಧಿ ಅನುದಾನ ಸದ್ಬಳಿಕೆ ಆಗಬೇಕಾದರೆ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ಆ ದಿಸೆಯಲ್ಲಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಶಾಸಕ ಸಿದ್ದು ಸವದಿ ನಿರ್ದೇಶನ ನೀಡಿದರು.

ಪಟ್ಟಣದ ಪಶು ಆಸ್ಪತ್ರೆಯ ನೂತನ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.ಕಟ್ಟಡದ ನಿರ್ಮಾಣಕ್ಕೆ 50 ಲಕ್ಷ ಅನುದಾನ ಮೀಸಲಿದ್ದು, ನಿಗದಿತ ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಎಂದು ಹೇಳಿದರು. ಕಾಮಗಾರಿಗೆ ಏನೇ ಸಹಾಯ ಸಹಕಾರ ಬೇಕಾದರು ನೀಡುತ್ತೇವೆ. ಆದರೆ ಅನಾವಶ್ಯಕವಾಗಿ ಹಣ ಖರ್ಚು ಮಾಡಬೇಡಿ ಎಂದು ಪುರಸಭೆ ಅಧ್ಯಕ್ಷೆ ಶಿಲ್ಪಾ ರೋಡಕರ ಹೇಳಿದರು. ಪಶು ವ್ಯದ್ಯಾಧಿಕಾರಿ ಡಾ. ಬಸವರಾಜ ಗೌಡರ, ಬಿಜೆಪಿ ನಗರ ಘಟಕ ಅಧ್ಯಕ್ಷ ಮಹಾವೀರ ಕೊಕಟನೂರ, ಪುರಸಭೆ ಮಾಜಿ ಸದಸ್ಯ ಗೌತಮ ರೋಡಕರ, ಅಪ್ಪು ಮಂಗಸೂಳಿ, ಅಲ್ಲಪ್ಪ ಬಾಬಗೊಂಡ, ಪ್ರಕಾಶ ಹೊಸಮನಿ, ವರ್ಧಮಾನ ಕಡಹಟ್ಟಿ, ಸದಾಶಿವ ಹೊಸಮನಿ, ರಮೇಶ ಧರೆನ್ನವರ, ಡಾ. ರಾಜಶ್ರೀ ಕಾಂಬಳೆ, ಶಂಕರಯ್ಯ ವಸ್ತ್ರದ, ಕುಂತಿನಾಥ ಸಾವಂತನವರ, ಸಂತೋಷ ಅಕ್ಕೆನ್ನವರ, ಆನಂದ ಮಧುಮಲಿ, ಕಾಶಿನಾಥ ಕಾಲತಿಪ್ಪಿ ಇನ್ನಿತರರಿದ್ದರು.

# ರಾಷ್ಟ್ರೀಯ ಬೃಹತ್ ಲೋಕ ಅದಾಲತ

**ರಾಯಬಾಗ:** ಕಕ್ಷಿದಾರರು ತಮ್ಮ ವ್ಯಾಜ್ಯಗಳನ್ನು ಸಂಧಾನ ಮೂಲಕ ಬಗೆಹರಿಸಿಕೊಂಡು ನೆಮ್ಮದಿಯಿಂದ ಜೀವನ ನಡೆಸಬೇಕೆಂದು ಹಿರಿಯ ದಿವಾಣಿ ನ್ಯಾಯಾಧೀಶ ಜಗದೀಶ ಬಿಸೆರೋಟ್ಟಿ ಹೇಳಿದರು.

ಶನಿವಾರ ಪಟ್ಟಣದ ಹಿರಿಯ ದಿವಾಣಿ ನ್ಯಾಯಾಲಯದಲ್ಲಿ ನಡೆದ ರಾಷ್ಟ್ರೀಯ ಬೃಹತ್ತ ಲೋಕ ಅದಾಲತದಲ್ಲಿ ರಾಜಿ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿ ಮಾತನಾಡಿದ ಅವರು, ಈ ಬಾರಿಯ ಲೋಕ ಅದಾಲತದಲ್ಲಿ ಸಿವಿಲ್ ಮತ್ತು ಕ್ರಿಮಿನಲ್ ಸೇರಿದಂತೆ ಒಟ್ಟು 1962 ಪ್ರಕರಣಗಳನ್ನು ಸಂಧಾನ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ತಿಳಿಸಿದರು.

ವಕೀಲರಾದ ಜಿ.ಎಸ್.ಪವಾರ, ಎಮ್.ಎಮ್.ಚಿಂಚಲಿಕರ, ಬಿ.ಎಲ್. ಕೋಳಿಗುಡ್ಡ, ವಿ.ಪಿ.ಮೀರ್ಜೆ, ಎಸ್.ಆರ್.ಮಾಂಗ, ಎಸ್.ಪಿ.ಕಾಂಬಳೆ, ಎಸ್.ವಿ.ಪೂಜಾರಿ, ಎಮ್.ಬಿ.ಬಂತ್ತಿ, ಆನಂದ ಬೈಲಪತ್ತಾರ, ಪಿ.ಆರ್. ಕಡಟ್ಟಿ, ಶ್ರೀದೇವಿ ನಾಯಿಕ ಸೇರಿ ಅನೇಕರು ಇದ್ದರು.



# ವಿಕಲಚೇತನರ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆ




ಸಮೀಪದ ಮುನವಳ್ಳಿ ಪಟ್ಟಣದಲ್ಲಿ ಜರುಗಿದ ವಿಕಲಚೇತನರ ರಾಜ್ಯಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ವಿಜೇತರಾದವರು.

**ಯರಗಟ್ಟಿ :** ಬೆಳಗಾವಿ ಜಿಲ್ಲಾ ಯೋಗಾಸನ ಕ್ರೀಡಾ ಸಂಸ್ಥೆ, ಬೆಳಗಾವಿ ಯುವಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಯೋಗದಲ್ಲಿ ವಿಕಲಚೇತನರ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆ ಸಮೀಪದ ಮುನವಳ್ಳಿ ಪಟ್ಟಣದ ಜೆ.ಎಸ್.ಪಿ. ಸಂಘದ ಎಸ್.ಪಿ.ಜೆ.ಜಿ. ಹೈಸ್ಕೂಲ್‌ದಲ್ಲಿ ಜರುಗಿತು.

ಬೆಳಗಾವಿ ಜಿಲ್ಲಾ ಯೋಗಾಸನ ಕ್ರೀಡಾ ಸಂಸ್ಥೆಯ ಅಧ್ಯಕ್ಷ ಆರ್.ಎಚ್.ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಸಾಧನೆಗೆ ವಿಕಲಚೇತನತೆ ಯಾವಾಗಲೂ ಅಡ್ಡಿ ಮಾಡುವುದಿಲ್ಲ. ಪರಿಶ್ರಮ ಹಾಗೂ ಸತತ ಅಭ್ಯಾಸದಿಂದ ಯಶಸ್ಸು ಸಾಧಿಸಬಹುದು. ವಿಕಲಚೇತನರಿಗಾಗಿ ಸರಕಾರ ಹಲವಾರು ಕಾರ್ಯಕ್ರಮ ಹಾಗೂ ಯೋಜನೆಗಳನ್ನು ಹಮ್ಮಿಕೊಂಡಿದ್ದು ಅವುಗಳ ಸದುಪಯೋಗಪಡೆಯಬ ೇಕೆಂದರು.

ಆಡಳಿತಾಧಿಕಾರಿ ಅಮಿತ ಕರೀಕಟ್ಟಿ, ಮುಖ್ಯೋಪಾಧ್ಯಾಯ ಎಂ.ಎಚ್.ಕಾಮಣ್ಣವರ, ಶಿವು ಕಾಟಿ, ಅಶೋಕ ಸಂಕಣ್ಣವರ, ರಾಘವೇಂದ್ರ ಬಂಡಿವಡ್ಡರ, ಶ್ರೀಶೈಲ ಗೋಪಶೆಟ್ಟಿ, ಸಂಗಮೇಶ ಶಿಗ್ಗಾಂವಿ, ಗಂಗಾಧರ ಕುರುಬಗಟ್ಟಿ, ಹನಮಂತ ಬಿಟ್ಟಿ, ಗಣೇಶ ಹೊಸಟ್ಟಿ, ಲಕ್ಷ್ಮೀ ಚುಳಕಿ, ಅಶ್ವಿನಿ ಬಿಕ್ಕನಗೌಡ್ರ, ಅಂಜನಾ ಕಲ್ಯಾಣಿ, ರುಕ್ಸಾನಾ ಜಕಾತಿ, ಸಾಕೀರ ಅನ್ಸಾರಿ, ಕಾರ್ತಿಕ ಮೊರಬದ, ಸಂಜು ಬೆಳ್ಳಿಕುಪ್ಪಿ ಸೇರಿದಂತೆ ಇತರರು ಇದ್ದರು.

### ಜೆವಿ ಮಂಡಳದಲ್ಲಿ ಅಭಿಯಂತರ ದಿನಾಚರಣೆ

# ಜ್ಞಾನ ಹೊಂದಿದವರಿಗೆ ಅಹಂ ಇರಬಾರದು




**ತೇರದಾಳ;** ಜ್ಞಾನ ಹೊಂದಿದವರಲ್ಲಿ ಅಹಂ ಇರಬಾರದು. ಬದಲಾಗಿ ಅವರಲ್ಲಿನ ಜ್ಞಾನವನ್ನು ಸಮಾಜದ ಒಳಿತಿಗಾಗಿ ಏಳಿಗೆಗಾಗಿ ಬಳಸಿಕೊಂಡಾಗ ಮಾತ್ರ ಅವರನ್ನು ಜ್ಞಾನಿ ಎನ್ನಲು ಸಾಧ್ಯ. ಆ ದಿಸೆಯಲ್ಲಿ ಬದುಕು ಕಟ್ಟಿಕೊಂಡವರು ಸರ. ಎಂ. ವಿಶ್ವೇಶ್ವರಯ್ಯ ಎಂದು ಇಲ್ಲಿನ ಪೊಲೀಸ್ ಠಾಣಾಧಿಕಾರಿ ಎಸ್.ಕೆ. ಸಿಂಗನ್ನವರ ಹೇಳಿದರು.

ಪಟ್ಟಣದ ಜೆವಿ ಮಂಡಳ ಪಾಲಿಟೆಕ್ನಿಕ್ ಕಾಲೇಜ್ ಹಾಗೂ ಸಿವಿಎಲ್ ಇಂಜಿನಿಯರ್ಸ್ ಅಸೋಸಿಯೇಶನ್ ಅಡಿಯಲ್ಲಿ ಹಮ್ಮಿಕೊಂಡಿದ್ದ ಅಭಿಯಂತರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ನವ ಭಾರತ ಶಿಲ್ಪಿ ಎಂದೇ ಹೆಸರು ಮಾಡಿದ ವಿಶ್ವೇಶ್ವರಯ್ಯ ಅವರ ಕೊಡುಗೆಗಳು ಇಂದಿಗೂ ಅಜರಾಮರವಾಗಿವೆ ಎಂದು ಹೇಳಿಕೊಳ್ಳುವುದೆ ಒಂದು ಹೆಮ್ಮೆಯ ವಿಷಯ. ಅವರಂತ ಶ್ರೇಷ್ಠರನ್ನು ಕಂಡ ನಾಡು ನಮ್ಮದು ಎಂದು ಬಣ್ಣಿಸಿದರು. ಪುರಸಭೆ ಅಭಿಯಂತರೆ ಭಾಗ್ಯಶ್ರೀ ಪಾಟೀಲ ಮಾತನಾಡಿ, ತ್ಯಾಜ್ಯ ಎಂಬುದು ಇಂದು ದೇಶಕ್ಕೆ ಒಂದು ದೊಡ್ಡ ಸವಾಲ್ ಆಗಿ ಪರಿಣಮಿಸಿದೆ. ಅಭಿಯಂತರರಾದವರು ಈ ಬಗ್ಗೆ ಒಂದಿಷ್ಟು ಹೊಸ ಹೊಸ ಬಗೆಯ ವಿಚಾರಗಳನ್ನು ಅಳವಡಿಸಿಕೊಂಡು ಕಟ್ಟಡ ವಿಚಾರದಲ್ಲಿಯೂ ತ್ಯಾಜ್ಯವನ್ನು ಮರು ಬಳುಸವಂತ ವಿಧಾನ ಕಂಡುಕೊಳ್ಳಬೇಕಾದ ಅವಶ್ಯಕತೆ ಇದೆ ಎಂದು ಹೇಳಿದರು. ಸಂಸ್ಥೆ ಕಾರ್ಯದರ್ಶಿ ಡಾ. ಜೆ.ಬಿ. ಆಲಗೂರ, ಪ್ರತಿದಿನ ನಾವು ಮಾಡುವ ಪ್ರತಿಯೊಂದು ಚಟುವಟಿಕೆಯಲ್ಲಿ ಇಂಜಿನಿಯರ್‌ಗಳ ಕೊಡುಗೆ ಇರುತ್ತದೆ ಎಂಬುದು ಗಮನಿಸಬೇಕಾದ ಅಂಶವಾಗಿದೆ. ಈ ಭಾಗದ ವಿದ್ಯಾರ್ಥಿಗಳಿಗೆ ಸಮಾಜದಲ್ಲಿ ಉಜ್ವಲ ಬದುಕು ಕಟ್ಟಿಕೊಡುವ ಕೆಲಸ ಜೆವಿ ಮಂಡಳ ಮಾಡುತ್ತಿದೆ ಎಂದು ಹೇಳಿದರು. ಪುರಸಭೆ ಅಧ್ಯಕ್ಷೆ ಶಿಲ್ಪಾ ರೋಡಕರ ಮಾತನಾಡಿದರ. ಕಾಲೇಜಿನ ಪ್ರಾಚಾರ್ಯ ಮೌನೇಶ ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆ ಅಧ್ಯಕ್ಷ ಟಿ.ಸಿ. ಪಡಸಲಗಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಾಧ್ಯಕ್ಷ ಡಿ.ಆರ್. ಪಾಟೀಲ, ಪ್ರವೀಣ ನಾಡಗೌಡ, ಮಹಾಲಿಂಗಪುರ ಸಿವಿಲ್ ಇಂಜಿನಿಯರ್ಸ್ ಸಂಘದ ಅಧ್ಯಕ್ಷ ಶಿವಾನಂದ ಕನ್ನಾಳ, ರಬಕವಿ-ಬನಹಟ್ಟಿ ಸಂಘದ ಉಪಾಧ್ಯಕ್ಷ ಸುರೇಶ ಪಟ್ಟಣಶೆಟ್ಟಿ, ತೇರದಾಳ ಸಂಘದ ಅಧ್ಯಕ್ಷ ವಿಠ್ಠಲ ರೇಳೇಕರ, ಕಿರಣ ಕುಳ್ಳಿ, ಪದ್ಮರಾಜ ಹಟ್ಟಿ ಇನ್ನಿತರರಿದ್ದರು.

# ಪ್ರಜಾಪ್ರಭುತ್ವ ದಿನಾಚರಣೆ: ಸೈಕಲ್ ಜಾಥಾ ಚಾಲನೆ

**ಕಾರವಾರ:** ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ, ನಡೆದ ಸೈಕಲ್ ಜಾಥಾ ಗೆ ಕಾರವಾರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೋಮವಾರ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್, ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಉಮೇಶ್, ಮತ್ತಿತರರು ಇದ್ದರು. ಸಂವಿಧಾನ ಪೀಠಿಕೆಯ ಪ್ರತಿಜ್ಞಾ ವಿಧಿ ಸ್ವೀಕಾರ ಮಾಡಲಾಯಿತು.

# ಅಗ್ನಿ ದುರಂತ: ಬಿಗ್ ಬಜಾರ್ ಬೆಂಕಿಗೆ ಆಹುತಿ



**ತೆಲಸಂಗ:** ತಾಲ್ಲೂಕಿನ ತೆಲಸಂಗ ಗ್ರಾಮದಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಸಂಭವಿಸಿದ ಅಗ್ನಿ ಅವಘಡದಲ್ಲಿ ಗಿರೀಶ್ ಸಕ್ರಿ ಎಂಬುವರಿಗೆ ಸೇರಿದ ಬಿಗ್ ಬಜಾರ್ ಅಂಗಡಿ ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ. ಬೆಳಿಗ್ಗೆ 10 ಗಂಟೆ ಸುಮಾರಿಗೆ ಸಂಭವಿಸಿದ ಈ ದುರಂತದಲ್ಲಿ 20 ಲಕ್ಷ ರೂಪಾಯಿಗೂ ಹೆಚ್ಚು ಮೌಲ್ಯದ ವಸ್ತುಗಳು ಸುಟ್ಟು ಭಸ್ಮವಾಗಿವೆ ಎಂದು ಹೇಳಲಾಗುತ್ತಿದೆ.

ಅಂಗಡಿಯಲ್ಲಿ ಬೆಂಕಿ ಕಾಣಿಸಿಕೊಂಡ ತಕ್ಷಣ ಸ್ಥಳೀಯರು ನಂದಿಸಲು ಪ್ರಯತ್ನಿಸಿದರೂ ಸಾಧ್ಯವಾಗಲಿಲ್ಲ, ವಿಷಯ ತಿಳಿದು ಅಥಣಿಯಿಂದ ಅಗ್ನಿಶಾಮಕ ದಳದ ಸಿಬ್ಬಂದಿ ಬರುವಷ್ಟರಲ್ಲಿ ಅಂಗಡಿ ಸಂಪೂರ್ಣ ಬೆಂಕಿಗೆ ಆಹುತಿಯಾಗಿತ್ತು, ಈ ಘಟನೆಯಿಂದ ಅಕ್ಕಪಕ್ಕದ ಕೆಲವು ಮನೆಗಳಿಗೂ ಅಲ್ಪ ಪ್ರಮಾಣದ ಹಾನಿಯಾಗಿದೆ,ಹೊತ್ತಿ ಉರಿಯುತ್ತಿದ್ದ ಬೆಂಕಿಯನ್ನು ನಂದಿಸಿದ ಅಗ್ನಿಶಾಮಕ ಸಿಬ್ಬಂದಿ ಹೆಚ್ಚಿನ ಅನಾಹುತವನ್ನು ತಪ್ಪಿಸಿದರು.

ಈ ಅನಿರೀಕ್ಷಿತ ಘಟನೆಯಿಂದ ಗಿರೀಶ್ ಸಕ್ರಿ ಅವರ ಕುಟುಂಬ ತೀವ್ರ ಆಘಾತಕ್ಕೊಳಗಾಗಿದೆ, ಒಂದು ದಿನದ ಹಿಂದೆಯಷ್ಟೇ ತಮ್ಮ ತಾಯಿಯ ಅಂತ್ಯ ಸಂಸ್ಕಾರ ಮುಗಿಸಿದ್ದ ಗಿರೀಶ್ ಅವರಿಗೆ, ಅಂಗಡಿ ಸುಟ್ಟುಹೋದ ವಿಷಯ ಮತ್ತೊಂದು ಆಘಾತ ನೀಡಿದೆ,ಬಡತನದಿಂದ ಬಂದಿದ್ದ ಗಿರೀಶ್, ಅಡುಗೆ ಕೆಲಸ ಮಾಡಿ ಹಣ ಸಂಪಾದಿಸಿ, ಸಾಲ ಮಾಡಿ ಈ ಅಂಗಡಿಯನ್ನು ಪ್ರಾರಂಭಿಸಿದ್ದರು,ದುರಂತದ ಬಳಿಕ ತಮ್ಮ ಕಣ್ಣ ಮುಂದೆಯೇ ಸುಟ್ಟು ಬೂದಿಯಾದ ಅಂಗಡಿಯನ್ನು ನೋಡಿ ಗಿರೀಶ್ ಅವರ ಕುಟುಂಬಸ್ಥರು ಕಣ್ಣೀರು ಹಾಕಿದ್ದಾರೆ,ಈ ದೃಶ್ಯ ನೋಡುಗರ ಮನ ಕಲುಕುವಂತಿತ್ತು,ಗಿರೀಶ್ ಅವರ ದುಃಖಕ್ಕೆ ಇಡೀ ಗ್ರಾಮವೇ ಮರುಗಿದೆ.

ಘಟಣಾ ಸ್ಥಳಕ್ಕೆ ಶಾಸಕ ಲಕ್ಷ್ಮಣ ಸವದಿ ಭೇಟಿ ನೀಡಿ ಸಂತ್ರಸ್ತರಿಗೆ ಧೈರ್ಯ ತುಂಬಿದರು.



**ಬಸವನಬಾಗೇವಾಡಿ ಬಸವ ಭವನದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ತಾಲೂಕು ಘಟಕದ ಸಹಯೋಗದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪರಿಷತ್ತಿನ ಸರ್ವಸದಸ್ಯರ ಮೂವತ್ತೊಂದನೇ ವಾರ್ಷಿಕ ಸಭೆಯಲ್ಲಿ ಜಿಲ್ಲಾ ಘಟಕದಿಂದ ಪರಿಷತ್ತಿನಲ್ಲಿ ಉತ್ತಮ ಸಾಧನೆ ಮಾಡಿದ ಬಸವನಬಾಗೇವಾಡಿ ಘಟಕದ ಅಧ್ಯಕ್ಷ ವೀರಣ್ಣ ಮರ್ತುರ ಅವರಿಗೆ ಬಸವ ರಾಜೇಂದ್ರ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಡಾ. ತೋಂಟದ ಸಿದ್ದರಾಮ ಸ್ವಾಮೀಜಿ, ಸಿದ್ದಲಿಂಗಸ್ವಾಮೀಜಿ, ವೀರತೀಶಾನಂದ ಸ್ವಾಮೀಜಿ, ಸಚಿವ ಶಿವಾನಂದ ಪಾಟೀಲ, ಜಿಲ್ಲಾಧ್ಯಕ್ಷ ಜಂಬುನಾಥ ಕಂಚ್ಯಾಣಿ, ವಿ.ಸಿ.ನಾಗಠಾಣ ಇತರರು ಇದ್ದರು.**

# ಬೃಹತ್ ಲೋಕ ಅದಾಲತ್: 23ಸಾವಿರ ಪ್ರಕರಣ ಇತ್ಯರ್ಥ

**ಗೋಕಾಕ:** ಬೃಹತ್ ಲೋಕ ಅದಾಲತ್ ಆಯೋಜನೆ ಹಿನ್ನೆಲೆಯಲ್ಲಿ ಶನಿವಾರ ಇಲ್ಲಿನ ತಾಲ್ಲೂಕು ಕಾನೂನು ಸೇವೆಗಳ ಸಮಿತಿ ನ್ಯಾಯಾಲಯಗಳ ಸಂಕೀರ್ಣದಲ್ಲಿ ಕಕ್ಷೀಗಾರರ ಮಧ್ಯೆ ನಡೆಸಿದ ರಾಜಿ ಸಂಧಾನ ಯತ್ನಗಳ ಫಲವಾಗಿ ಗೋಕಾಕ ಮತ್ತು ಮೂಡಲಗಿ ನ್ಯಾಯಾಲಯಗಳ ಒಟ್ಟು23,273 ಪ್ರಕರಣಗಳು ಇತ್ಯರ್ಥಗೊಂಡಿವೆ.



ಇವುಗಳಲ್ಲಿ ವಿಚಾರಣಾಪೂರ್ವ ಹಂತದ 19,738 ಪ್ರಕರಣಗಳು, 12ನೇ ಹೆಚ್ಚುವರಿ ಜಿಲ್ಲಾ ನ್ಯಾಯಲಯ ವ್ಯಾಪ್ತಿಯ15, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯದ12, 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯದ 19 ಹಾಗೂ 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯದ 15, ಪ್ರಧಾನ ಜೆ.ಎಂ.ಎಫ್.ಸಿ. ನ್ಯಾಯಾಲಯದ 450, 1ನೇ ಹೆಚ್ಚುವರಿ ಜೆ.ಎಂ.ಎಫ್.ಸಿ. ನ್ಯಾಯಾಲಯದ 842, 2ನೇ ಹೆಚ್ಚುವರಿ ಜೆ.ಎಂ.ಎಫ್.ಸಿ. ನ್ಯಾಯಾಲಯದ 582 ಮತ್ತು ಮೂಡಲಗಿ ಜೆ.ಎಂ.ಎಫ್.ಸಿ. ನ್ಯಾಯಾಲಯದ 1,592 ಪ್ರಕರಣಗಳು ಇತ್ಯರ್ಥಗೊಂಡಿವೆ.

ಇವುಗಳಲ್ಲಿ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣಾ ಹಂತದಲ್ಲಿದ್ದ ಪ್ರಕರಣಗಳಲ್ಲದೇ, ಬ್ಯಾಂಕ್, ಇತರೆ ಹಣಕಾಸು ಸಂಸ್ಥೆಗಳು, ಬೌನ್ಸ ಚೇಕ್ ಪ್ರಕರಣಗಳು, ಜನನ-ಮರಣಗಳ ನೋಂದಣಿ, ವೈವಾಹಿಕ ಜೀವನಕ್ಕೆ ಸಂಬಂಧಿಸಿದ, ವಿವಾಹ ವಿಚ್ಛೇದನ, ಸ್ತಿರಾಸ್ಥಿಗಳಲ್ಲಿ ವಾಟ್ನಿ ಹೀಗೆ ಇನ್ನೂ ಅನೇಕ ನಮೂನೆಯ ಬೇಡಿಕೆಗಳನ್ನು ಇಟ್ಟುಕೊಂಡು ನ್ಯಾಯಾಲಯಗಳ ಕದತಟ್ಟುತ್ತಿದ್ದ ಕಕ್ಷೀಗಾರರು ಪರಸ್ಪರ ಸಹೋದರತ್ವಭಾವನೆಯೊಂದಿಗೆ ಇನ್ನು ನಿರಂಬಳದಿಂದ ವಿಶ್ರಮಿಸುವ ಸ್ಥಿತಿ ಮೂಡಿದೆ. ವಕೀಲರ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಆದಿಯಾಗಿ ನೀಡಿದ ಸಹಕಾರ ಹಾಗೂ ನ್ಯಾಯಾಧೀಶರವೃಂದ ತೋರಿದ ಚಕ್ಯತೆಯಿಂದಾಗಿ ತಾಲ್ಲೂಕು ಕಾನೂನು ಸೇವೆಗಳ ಸಮಿತಿ ಇಷ್ಟೊಂದು ಬೃಹತ್ ಸಂಖ್ಯೆಯ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲು ಸಾಧ್ಯವಾಯಿತು ಎಂದು ತಾಲ್ಲೂಕು ಕಾನೂನು ಸಮಿತಿ ಅಧ್ಯಕ್ಷರೂ ಆಗಿರುವ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಉಮೇಶ ಆತ್ನುರೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಾರತ ಶರಣ ಸಾಹಿತ್ಯ ಪರಿಷತ್ತು ತಾಲೂಕು ಘಟಕದ 31ನೇ ವಾರ್ಷಿಕ ಸಭೆ

# ಧರ್ಮ ಉಳಿಯಬೇಕಾದರೆ ಒಗ್ಗೂಡುವದು ತುಂಬಾ ಅಗತ್ಯ




**ಬಸವನಬಾಗೇವಾಡಿ:** ಸಮಾಜದಲ್ಲಿ ಬಸವಾದಿ ಶರಣರ ಆಚಾರ-ವಿಚಾರಗಳು, ಧರ್ಮ ಉಳಿಯಬೇಕಾದರೆ ವೀರಶೈವ-ಲಿಂಗಾಯತ ಸಮಾಜ ಬಾಂಧವರು ಒಗ್ಗೂಡುವದು ತುಂಬಾ ಅಗತ್ಯವಿದೆ ಎಂದು ಸಕ್ಕೆ, ಜವಳಿ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಪಟ್ಟಣದ ಬಸವ ಭವನದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ತಾಲೂಕು ಘಟಕದ ಸಹಯೋಗದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪರಿಷತ್ತಿನ ಸರ್ವಸದಸ್ಯರ ಮೂವತ್ತೊಂದನೇ ವಾರ್ಷಿಕ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಉಪೇಕ್ಷೆ ಮಾಡದೇ ಬದುಕು ಕಟ್ಟಿಕೊಳ್ಳವುದು ಅನಿವಾರ್ಯ. ಮಾನವೀಯತೆ ಎತ್ತಿಹಿಡಿಯುವದೇ ಧರ್ಮವಾಗಿದೆ. ವೀರಶೈವ-ಲಿಂಗಾಯತ ಧರ್ಮವು ಮಾನವೀಯತೆ ಎತ್ತಿ ಹಿಡಿದ ಧರ್ಮವಾಗಿದೆ.ಇದು ಜಾತ್ಯಾತೀತವಾಗಿ ನಡೆದ ಧರ್ಮವಾಗಿದೆ. ನಮ್ಮಂತಹವರು ರಾಜಕೀಯವಾಗಿ ಬೆಳೆ ಬೇಯಿಸಿಕೊಳ್ಳಲು ಧರ್ಮವನ್ನು ಬಳಸಿಕೊಳ್ಳುತ್ತಾರೆ. ಸಂತರು-ಶರಣರು ಸಮಾಜವನ್ನು ಎಂದಿಗೂ ಒಡೆಯದೇ ಒಗ್ಗೂಡಿಸುವ ಕಾರ್ಯ ಮಾಡಿದ್ದಾರೆ ಎಂದರು.

ದೇಶದಲ್ಲಿ ಪ್ರಜಾಪ್ರಭುತ್ವದ ಕಲ್ಪನೆ ಇರದ ಸಂದರ್ಭದಲ್ಲಿ ಬಸವಣ್ಣನವರು ಅನುಭವ ಮಂಟಪ ಸ್ಥಾಪನೆ ಮಾಡುವ ಮೂಲಕ ಪ್ರಜಾಪ್ರಭುತ್ವದ ಕಲ್ಪನೆ ಇಡಿ ಜಗತ್ತಿಗೆ ನೀಡಿದ್ದಾರೆ. 900 ವರ್ಷ ಗತಿಸಿದರೂ ಅವರು ಎಲ್ಲರಿಗೂ ಪ್ರೇರಣೆಯಾಗಿದ್ದಾರೆ. ಜಗತ್ತಿನಲ್ಲಿ ಇಂದು ನಾನಾ ಬದಲಾವಣೆ ನೋಡುತ್ತೇವೆ. ಧರ್ಮದಲ್ಲಿ ಮಾನವೀಯ ಮೌಲ್ಯ ನೀಡಿದ ಏಕೈಕ ಶರಣರೆಂದರೆ ಬಸವಣ್ಣ. ಶರಣರು ಜಗತ್ತಿಗೆ ಅನೇಕ ಮಾನವೀಯ ವಿಚಾರಗಳನ್ನು ನೀಡಿದ್ದಾರೆ. ಬಸವಾದಿ ಶರಣರ ತತ್ವ ಸಂದೇಶಗಳನ್ನು ನಾಡಿನಲ್ಲಿ ಜನಮಾನಸಕ್ಕೆ ಮುಟ್ಟಿಸುವಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯ ಶ್ಲಾಘನೀಯ. ಇಂತಹ ಪರಿಷತ್ತಿಗೆ ಸದಸ್ಯರ ಸಂಖ್ಯೆ ಕಡಿಮೆ ಇರುವದು ವಿಷಾದನೀಯ. ಜನರು ಇದರ ಸದಸ್ಯತ್ವ ಪಡೆದುಕೊಳ್ಳುವ ಮೂಲಕ ನಾಡಿನಲ್ಲಿ ಶರಣರ ಪ್ರಸಾರಕ್ಕೆ ಕೈಜೋಡಿಸಬೇಕಿದೆ ಎಂದರು.

ರಾಜ್ಯದಲ್ಲಿ ಈ ಪರಿಷತ್ತು ಸರ್ಕಾರದಿಂದ ಅನುದಾನ ನಿರೀಕ್ಷೆ ಮಾಡದೇ ಲಿಂಗಾಯತ-ವೀರಶೈವ ಧರ್ಮದ ಮೇಲೆ ಅನೇಕ ಸೌಲಭ್ಯ ಪಡೆದುಕೊಂಡು ಆಯ್ಕೆಯಾದ ಸಂಸದರಿಗೆ, ವಿದಾನ ಪರಿಷತ್ತಿನ ಸದಸ್ಯರಿಗೆ, ವಿದಾನಸೌಧದ ಸದಸ್ಯರಿಗೆ, ಉನ್ನತ ಹುದ್ದೆಯಲ್ಲಿರುವ ಅಧಿಕಾರಿಗಳಿಗೆ ಶರಣ ಸಾಹಿತ್ಯ ಪರಿಷತ್ತಿನ ಅರ್ಥಿಕ ಸಬಲೀಕರಣಕ್ಕೆ ತಲಾ ರೂ.5 ಲಕ್ಷ ದತ್ತಿನಿಧಿ ಇಡುವಂತೆ ಪರಿಷತ್ತಿನ ಅಧ್ಯಕ್ಷರು ಮನವಿ ಪತ್ರ ಕಳುಹಿಸಿಕೊಡಬೇಕು. ಯಾವದೇ ಕಾರಣಕ್ಕೂ ಪರಿಷತ್ತು ಸರ್ಕಾರದ ಮುಂದೆ ಕೈಒಡ್ಡುವ ಪ್ರಮೇಯ ಬರಬಾರದು. ನಾನು ಪರಿಷತ್ತಿಗೆ ಇಂದೇ ರೂ.5 ಲಕ್ಷ ದತ್ತಿ ನಿಧಿ ಕಾಣಿಕೆ ನೀಡುವದಾಗಿ ಹೇಳಿ ಹಣವನ್ನು ಪರಿಷತ್ತಿನ ಗೌರವಾಧ್ಯಕ್ಷರಾದ ಡಾ.ತೋಂಟದ ಸಿದ್ದರಾಮ ಸ್ವಾಮೀಜಿ, ರಾಜ್ಯಾಧ್ಯಕ್ಷ ಡಾ.ಸಿ.ಸೋಮಶೇಖರ ಅವರಿಗೆ ನೀಡಿದರು.

ಪರಿಷತ್ತಿನ ಗೌರವ ಸಲಹೆಗಾರ, ಹಿರಿಯ ವಿದ್ವಾಂಸ ಗೊರುಚ ಮಾತನಾಡಿ, ನಾಡಿನಲ್ಲಿ ಶರಣ ಸಾಹಿತ್ಯ ಪರಷತ್ತು ನಿರ್ದಿಷ್ಟ ಉದ್ದೇಶ ಹೊಂದಿ ಕಾರ್ಯನಿರ್ವಹಿಸುತ್ತಿದೆ. ನಾಡಿನಲ್ಲಿ ಶರಣ ಸಂಸ್ಕೃತಿ ಬಗ್ಗೆ ಜನರು ಬದ್ದತೆಯಿರಬೇಕು. ಯಾರೂ ತೋರಿಕೆ ಉಪದೇಶ ಹೊಂದಬಾರದು. ನಮ್ಮ ಜೀವನದ ಅನೇಕ ಸಮಸ್ಯೆಗಳಿಗೆ ಶರಣರ ವಿಚಾರಗಳು ಪರಿಹಾರ ನೀಡುತ್ತವೆ. ಇಂತಹ ಶರಣರ ವಿಚಾರಗಳನ್ನು ಜನರಿಗೆ ಮುಟ್ಟಿಸುವ ಕಾರ್ಯ ಮಾಡುತ್ತಿರುವ ಪರಷತ್ತಿಗೆ ಸರ್ಕಾರದಿಂದ ಅನುದಾನದ ನೆರವು ಸಿಗುತ್ತಿಲ್ಲ ಎಂಬ ನೋವಿದೆ. ಅದೇ ಕನ್ನಡ ಸಾಹಿತ್ಯ ಪರಿಷತ್ತಿಗೆ ರೂ.5 ಕೋಟಿ ಸರ್ಕಾರ ಅನುದಾನ ನೀಡುತ್ತದೆ. ಸಾಂಸ್ಕೃತಿಕ ನಾಯಕ ಬಸವಣ್ಣ ಎಂದು ಘೋಷಣೆಯಾದರೆ ಸಾಲದು. ಅವರ ತತ್ವಗಳು ಅನುಷ್ಠಾನಕ್ಕೆ ಬರುವಂತಾಗಬೇಕಿದೆ. ಈ ನಿಟ್ಟಿನಲ್ಲಿ ನಾನು 25 ಅಂಶಗಳನ್ನು ಒಳಗೊಂಡಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆಯಲಾಗಿದೆ. ಇದರ ಬಗ್ಗೆ ಅವರು ಗಮನ ಹರಿಸುವ ವಿಶ್ವಾಸವಿದೆ. ಕಲ್ಯಾಣದಲ್ಲಿ ರೂ.750 ಕೋಟಿ ವೆಚ್ಚದಲ್ಲಿ ಸರ್ಕಾರವು ಅನುಭವ ಮಂಟಪ ನಿರ್ಮಾಣ ಮಾಡುತ್ತಿದೆ. ಇದು ಬೇಗ ಪೂರ್ಣಗೊಂಡರೆ ನಾನು ನೋಡಬಹುದು ಎಂದರು.

ಮಾಜಿ ಸಚಿವೆ ಲೀಲಾವತಿ ಆರ್. ಪ್ರಸಾದ ಮಾತನಾಡಿ, ವಿಶ್ವದಲ್ಲಿಯೇ ಬಸವಾದಿ ಶರಣರ ಸಂದೇಶಗಳು ಶ್ರೇಷ್ಠವಾಗಿವೆ. ಶರಣರ ಸಂದೇಶಗಳನ್ನು ಇಡೀ ವಿಶ್ವಕ್ಕೆ ಮುಟ್ಟಿಸುವ ನಿಟ್ಟಿನಲ್ಲಿ ವಿಶ್ವ ಶರಣ ಸಾಹಿತ್ಯ ಸಮ್ಮೇಳನ ಆಯೋಜನೆ ಮಾಡುವದು ಅಗತ್ಯವಿದೆ. ರಾಜ್ಯದ ಸಾಂಸ್ಕೃತಿಕ ನಾಯಕ ಬಸವಣ್ಣ ಎಂದು ಘೋಷಣೆ ಮಾಡಿದರೆ ಸಾಲದು ಅವರ ತತ್ವ-ಸಂದೇಶ ಇಂದಿನ ಯುವಜನಾಂಗಕ್ಕೆ, ಮುಂದಿನ ಪೀಳಿಗೆಗೆ ಮುಟ್ಟಿಸುವ ಕಾರ್ಯವಾಗಬೇಕಿದೆ ಎಂದರು.

ಸಾನಿಧ್ಯ ವಹಿಸಿದ್ದ ಪರಿಷತ್ತಿನ ಗೌರವಾಧ್ಯಕ್ಷ ಡಾ. ತೋಂಟದ ಸಿದ್ದರಾಮ ಸ್ವಾಮೀಜಿ ಮಾತನಾಡಿ, ಪರಿಷತ್ತಿನ ಸಂಸ್ಥಾಪಕರಾದ ಲಿಂ.ಸುತ್ತೂರಿನ ರಾಜದೇಶಿಕೇಂದ್ರ ಸ್ವಾಮೀಜಿಯವರು ನಾಡಿನಲ್ಲಿ ಬಸವಾದಿ ಶರಣರ ಸಂದೇಶ ಜನ-ಮನಕ್ಕೆ ಮುಟ್ಟಿಸಿ ಜನರು ಸಂತೃಪ್ತಿಯಿಂದ, ನೆಮ್ಮದಿಯಿಂದ ಬದುಕು ಸಾಗಿಸಬೇಕೆಂಬ ಸದಾಶಯದೊಂದಿಗೆ ಶರಣ ಸಾಹಿತ್ಯ ಪರಿಷತ್ತು ಸ್ಥಾಪನೆ ಮಾಡಿದರು. ನಾಡಿನಲ್ಲಿ ಅಂಧಶ್ರದ್ದೆ,ಮೂಢನಂಬಿಕೆ ಹೋಗಲಾಡಿಸಿ ವೈಚಾರಿಕ, ವೈಜ್ಞಾನಿಕ ಮನೋಭಾವ ಜನರಲ್ಲಿ ಬೆಳೆಸುವಲ್ಲಿ ಪರಿಷತ್ತು ಕಾರ್ಯನಿರ್ವಹಿಸುತ್ತಿದೆ. ಪರಿಷತ್ತಿಗೆ ಹೆಚ್ಚು ಸದಸ್ಯರಾದರೆ ಪರಿಷತ್ತು ಸಬಲರಾಗಾಲು ಸಾಧ್ಯ ಎಂದರು.

ವೇದಿಕೆಯಲ್ಲಿ ಸಿದ್ದಲಿಂಗಸ್ವಾಮೀಜಿ, ವೀರತೀಶಾನಂದ ಸ್ವಾಮೀಜಿ, ಪರಿಷತ್ತಿನ ರಾಜ್ಯ ಪದಾಧಿಕಾರಿಗಳಾದ ಅಪ್ಪಾರಾವ ಅಕ್ಕೋಣೆ, ಡಾ.ಸಿಂ.ರಾ.ಹೊನ್ನಲಿಂಗಯ್ಯ, ಕೆ.ಎಂ.ವೀರೇಶ, ಶ್ರೀಶೈಲ ಪಟ್ಟಣಶೆಟ್ಟಿ, ಸುಶೀಲಾ ಸೋಮಶೇಖರ, ಪ್ರಕಾಶ ಅಂಗಡಿ, ಜಿಲ್ಲಾಧ್ಯಕ್ಷ ಜಂಬುನಾಥ ಕಂಚ್ಯಾಣಿ, ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜ, ಎಲ್ಲಾ ಜಿಲ್ಲೆಯ ಅಧ್ಯಕ್ಷರು, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಜಿಲ್ಲೆಯ ಎಲ್ಲ ತಾಲೂಕು ಘಟಕದ ಅಧ್ಯಕ್ಷರು ಇತರರು ಇದ್ದರು.

### ಅಥಣಿ ಪುರಸಭಾ ಸದಸ್ಯರ ತಂಡ ಆಂಧ್ರದ ರಾಜಮುಂಡ್ರಿಗೆ ಭೇಟಿ

# ನಗರವನ್ನು ಹಸಿರುಕರಣ ಮಾಡುವ ಸಂಕಲ್ಪ

**ಮೋಳೆ:** ಅಥಣಿ ಪಟ್ಟಣ ವ್ಯಾಪ್ತಿಯ ರಸ್ತೆ ಮಧ್ಯದಲ್ಲಿರುವ ಡಿವೈಡರ್‌ಗಳಲ್ಲಿ ಹಸಿರುಕರಣಕ್ಕಾಗಿ ಸಸಿ ನೆಟ್ಟು ಸೌಂದರ್ಯಕರಣ ಹೆಚ್ಚಿಸುವ ಈ ಕಾರ್ಯ ಅನುಷ್ಠಾನಕ್ಕಾಗಿ ಅಥಣಿ ಪುರಸಭಾ ಸದಸ್ಯರ ತಂಡ ಆಂಧ್ರ ಪ್ರದೇಶದ ರಾಜಮುಂಡ್ರಿಗೆ ನಗರಕ್ಕೆ ಮಾಜಿ ಉಪಮುಖ್ಯಮಂತ್ರಿ, ಅಥಣಿ ಶಾಸಕ ಲಕ್ಷ್ಮಣ ಸವದಿಯವರ ಮಾರ್ಗದರ್ಶನದಲ್ಲಿ ಸ್ಥಾಯಿ ಸಮೀತಿಯ ಅಧ್ಯಕ್ಷ ದತ್ತಾ ವಾಸ್ಟರ್ ಅವರ ನೇತೃತ್ವದಲ್ಲಿ ಈ ತಂಡ ತೆರಳಿ ಅಧ್ಯಯನ ನಡೆಸಿತು.

ಅಥಣಿ ಪಟ್ಟಣದ ಎಲ್ಲ ಪ್ರಮುಖ ರಸ್ತೆಗಳ ಡಿವೈಡರಗಳ ಮಧ್ಯೆ ವಿವಿಧ ಹಸಿರು ಹೂವಿನ ಸಸಿಗಳನ್ನು ನೆಟ್ಟು ಹಸಿರುಕರಣಕ್ಕೆ ಆದ್ಯತೆ ನೀಡಿದ್ದು, ಇದರಿಂದ ನಗರದ ಸೌಂದರ್ಯಕರಣವೂ ಹೆಚ್ಚಿಸಿದೆ. ಕೆಲ ತಿಂಗಳ ಹಿಂದೆ ಅಥಣಿ ಶಾಸಕ ಲಕ್ಷ್ಮಣ ಸವದಿ ಅವರು ರಾಜಮುಂಡ್ರಿಗೆ ಭೇಟಿ ನೀಡಿ ಸ್ಥಳೀಯ ಸಂಸ್ಥೆಯ ಈ ಕಾರ್ಯದಿಂದ ಪ್ರಭಾವಿತರಾಗಿ ಈ ಕಾರ್ಯವನ್ನು ಅಥಣಿಯಲ್ಲಿಯೂ ಅನುಷ್ಠಾನಗೊಳಿಸಬೇಕು ಎನ್ನುವ ತಮ್ಮ ಅಭಿಪ್ರಾಯವನ್ನು ಪುರಸಭಾ ಸದಸ್ಯರ ಮುಂದೆ ವ್ಯಕ್ತಪಡಿಸಿದಾಗ ಸದಸ್ಯರೆಲ್ಲರು ಶಾಸಕರ ಅಭಿಪ್ರಾಯಕ್ಕೆ ಮನ್ನಣೆ ಕೊಟ್ಟು ರಾಜಮುಂಡ್ರಿಗೆ ತೆರಳಿದ್ದರು. ಆಂಧ್ರ ಪ್ರದೇಶದ ರಾಜಮುಂಡ್ರಿ ನರ್ಸರಿಗೆ ಮತ್ತು ಡಿವೈಡರ್ ಮಧ್ಯೆ ಹಸಿರುಕರಣಕ್ಕೆ ಪ್ರಸಿದ್ಧಿಯಾದ ಈ ನಗರಕ್ಕೆ ತೆರಳಿದ್ದ ಮುಖ್ಯಾಧಿಕಾರಿ ಅಶೋಕ ಗುಡಿಮನಿ ಸಹಿತ 17 ಜನ ಸದಸ್ಯರ ನಿಯೋಗ ಅನೇಕ ನರ್ಸರಿಗಳಿಗೆ ಭೇಟಿ ನೀಡಿ ಮತ್ತು ಡಿವೈಡರ್‌ಗಳ ಮಧ್ಯೆ ಹಚ್ಚಿರುವ ಸಸಿಗಳ ಅಧ್ಯಯನ ನಡೆಸಿತು. ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್ ನೇತ್ರತ್ವದಲ್ಲಿ ಪುರಸಭೆ ಸದಸ್ಯರಾದ ಮಲ್ಲಿಕಾರ್ಜುನ ಬುಟಾಳಿ, ರಾಜಶೇಖರ ಗುಡೋಡಗಿ,ಮಲ್ಲೇಶ ಹುದ್ದಾರ, ವಿನಾಯಕ ದೇಸಾಯಿ, ರಾಮನಗೌಡ ಪಾಟೀಲ, ರಿಯಾಜ ಸನದಿ, ಕಲ್ಲೇಶ ಮಡ್ಡಿ, ರಮೇಶ ಪವಾರ, ವಿಲೀನರಾಜ ಯಳಮೇಲಿ, ಪ್ರಮೋದ ಬಿಳ್ಳೂರ, ಉದಯ ಸೋಳಸಿ, ರವಿ ಭಡಕಂಬಿ, ಬಸವರಾಜ ಹಳ್ಳದಮಳ, ತಿಪ್ಪಣ್ಣ ಭಜಂತ್ರಿ, ವೆಂಕಟೇಶ ದೇಶಪಾಂಡೆ, ಬೀರಪ್ಪ ಯಕ್ಕಂಚಿ, ಬಾಬು ಖೆಮಲಾಪುರ, ಮುಖ್ಯಾಧಿಕಾರಿ ಅಶೋಕ ಗುಡಿಮನಿ ತಂಡದಲ್ಲಿದ್ದರು.





## ರಾಜ್ಯಮಟ್ಟಕ್ಕೆ ಆಯ್ಕೆ

**ಬೈಲಹೊಂಗಲ:** ಪಟ್ಟಣದ ಶಾಸಕರ ಮತಕ್ಷೇತ್ರ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ನಂ 4 ರಲ್ಲಿನ 7 ನೇ ತರಗತಿ ವಿದ್ಯಾರ್ಥಿಯಾದ ಸೃಜನ್ ಭಾರತಿ ಬದಾಮಿ ಇವನು ಶಾಲಾ ಶಿಕ್ಷಣ ಇಲಾಖೆ ಬೆಳಗಾವಿ ಇವರ ಆಶ್ರಯದಲ್ಲಿ ಈಚೆಗೆ ನಡೆದ ಶೈಕ್ಷಣಿಕ ಜಿಲ್ಲಾ ಮಟ್ಟದ ಕರಾಟೆ ಕ್ರೀಡಾ ಕೂಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಈತನ ಸಾಧನೆಗೆ ಶಾಲಾ ಪ್ರಭಾರಿ ಮುಖ್ಯೋಪಾಧ್ಯಾಯ ಡಿ.ಎನ್.ಹಲಕಿ, ಎಸ್‌ಡಿಎಂಸಿ ಅಧ್ಯಕ್ಷ ಅರ್ಜುನ ಕಲಕುಟಕರ ಹಾಗೂ ಸದಸ್ಯರು, ಶಿಕ್ಷಕರು ಅಭಿನಂದಿಸಿದ್ದಾರೆ.

## ಸೌಕರ್ಯ ಸೋಸಾಯಿಟಿಗೆ 55ಲಕ್ಷ ನಿವ್ವಳ ಲಾಭ

**ಗೋಕಾಕ:** ಸೌಕರ್ಯ ಮಲ್ಟಿಪರಪಜ್ ಸೌಹಾರ್ದ ಕೋ-ಆಪ್ ಸೋಸಾಯಿಟಿ ಲಿ, ಮಲ್ಲಾಪೂರ ಪಿಜಿ ಇದರ 25ನೇ ಸರ್ವ ಸಾಧಾರಣಾ ಸಭೆಯುವ ದಿ.12ರಂದು ಸಂಘದ ಕಾರ್ಯಾಲಯದಲ್ಲಿ ಸಂಘದ ಅಧ್ಯಕ್ಷ ಸುರೇಶ ಕಾಡದವರ ಇವರ ಅಧ್ಯಕ್ಷತೆಯಲ್ಲಿ ಜರುಗಿತು.



ಸಂಘವು ದಿ.31-03-2025ಕ್ಕೆ ರೂ 18.40.600 ಶೇರ ಹೊಂದಿದ್ದು ಹಾಗೂ ಠೇವಣಿ ರೂ 18.24.82.244 ಹೊಂದಿರುತ್ತದೆ. ವರದಿ ವರ್ಷದಲ್ಲಿ ರೂ 16.44.36.211 ಸಾಲವನ್ನು ವಿತರಿಸಿದೆ. ರೂ 2.21.38.088 ನಿಧಿಗಳು ಒಟ್ಟು ದುಡಿಯುವ ಬಂಡವಾಳ ರೂ 21.68.08.508 ಗಳಷ್ಟಿದ್ದು, ರೂ 55.43.073ಗಳ ನಿವ್ವಳ ಲಾಭವನ್ನು ಗಳಿಸಿರುತ್ತದೆ. ಹಾಗೂ ಸದಸ್ಯರುಇಗೆ ಶೇ20ರಷ್ಟು ಡಿವ್ಹಿಡೆಂಡ್ ನೀಡಲು ನಿರ್ಧರಿಸಲಾಗಿದೆ ಎಂದು ವರದಿ ವಾಚನದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಭೂಪಾಲ ಖೆಮಲಾಪೂರೆ, ಹಾಗೂ ಲಕ್ಷ್ಮಣ ಗಣಪ್ಪಗೋಳ, ಗಂಗಾಧರ ಬಡಕುಂದ್ರಿ, ಲಕ್ಷ್ಮಣ ಶೀಮಕ್ಕನವರ ಸೇರಿದಂತೆ ಆಡಳಿತ ಮಂಡಳಿ ಸದಸ್ಯರು ಇದ್ದರು.

## ಶಿವಲಿಂಗೇಶ್ವರ ಶ್ರೀಗಳ 23ನೇ ಸ್ಮರಣೋತ್ಸವ



**ತೇರದಾಳ:** ಪರಕೀಯರು ಬಿಟ್ಟು ನಡೆಸುತ್ತಿದ್ದ ಒಡೆದಾಳುವ ನೀತಿ ಇಂದಿಗೂ ನಮ್ಮ ನಡುವೆ ಬೆಳೆಯುತ್ತಿದೆ. ಅದಕ್ಕೆ ಅವಕಾಶ ನೀಡದೆ ನಾವೆಲ್ಲರೂ ಒಂದಾಗಿ ಇದ್ದಾಗ ಮಾತ್ರ ಧರ್ಮ ಮತ್ತು ದೇಶ ಉಳಿಯುತ್ತದೆ ಎಂದು ಕೊಣ್ಣೂರ ಹೊರಗಿನಮಠದ ಡಾ. ವಿಶ್ವಪ್ರಭು ಶ್ರೀ ಹೇಳಿದರು. ಇಲ್ಲಿನ ವಿರಕ್ತಮಠದ ಶಿವಲಿಂಗೇಶ್ವರ ಶ್ರೀಗಳ 23ನೇ ಪುಣ್ಯಸ್ಮರೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬದುಕಿನಲ್ಲಿ ನೆಮ್ಮದಿಗಾಗಿ ಮಹಾತ್ಮರ ಶಿವ-ಶರಣರ ಸತ್ಸಂಗ, ಆಧ್ಯಾತ್ಮದಂತಹ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು. ಅದರ ಜತೆಗೆ ಬದುಕಿನಲ್ಲಿ ಅಳವಡಿಸಿಕೊಳ್ಳುವ ಕಾಯಕ ಮಾಡಬೇಕೆಂದು ಹೇಳಿದರು. ಹಿರೇಮಠದ ಗಂಗಾಧರ ದೇವರು ಮಾತನಾಡಿ, ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿದಾಗ ಮಾತ್ರ ಇಳಿವಯಸ್ಸಿಯಲ್ಲಿ ತಂದೆ-ತಾಯಿಗಳು ನೆಮ್ಮದಿಯ ಜೀವನ ನಡೆಸಲು ಸಾಧ್ಯ ಆಗುತ್ತದೆ. ಆದ್ದರಿಂದ ಮಕ್ಕಳಿಗೆ ಮೊದಲು ನೀವು ಆದರ್ಶರಾಗಿ ಎಂದು ಸಲಹೆ ನೀಡಿದರು. ಸಾನ್ನಿಧ್ಯ ವಹಿಸಿದ್ದ ಚಿಮ್ಮಡ ವಿರಕ್ತಮಠದ ಪ್ರಭು ಶ್ರೀ ಮಾತನಾಡಿದರು. ಶ್ರೀಮಠ ಟ್ರಸ್ಟ್ ಅಧ್ಯಕ್ಷ ನಿಂಗಪ್ಪಣ್ಣ ಮಾಲಗಾಂವಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯರಾದ ಪ್ರವೀಣ ನಾಡಗೌಡ, ಮಲ್ಲಪ್ಪಣ್ಣ ಜಮಖಂಡಿ, ಸತ್ಯಪ್ಪ ಸುನಗಾರ ವಚನಗೀತೆ ಹಾಡಿದರು. ಮಹಾಂತಯ್ಯ ಮಠಪತಿ, ಬಸವಪ್ರಭು ತೆಳಗಿನಮನಿ ಶ್ರೀಗಳ ಗದ್ದುಗೆಗೆ ರುದ್ರಾಭಿಷೇಕ ನೆರವೇರಿಸಿದರು. ಎಂ.ಬಿ. ಮಾಳೇದ ಈಶ್ವರ ಯಲ್ಲಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

# ಅಜ್ಞಾನದ ಕತ್ತಲಿನಿಂದ ಜ್ಞಾನದ ಬೆಳಕು ನೀಡುವವರೇ ಗುರುಗಳು

**ಕೊಪ್ಪಳ:** 'ಅಜ್ಞಾನದ ಕತ್ತಲಿನಿಂದ ಜ್ಞಾನದ ಬೆಳಕು ನೀಡುವವರೇ ಗುರುಗಳು. ನಮ್ಮ ಭವಿಷ್ಯವನು ರೂಪಿಸಿದ ಗುರುಗಳಿಗೆ ಒಂದು ಕಡೆಸೇರಿಸಬೇಕು ಗೌರವ ಸಮರ್ಪಿಸಬೇಕು ವಂದನೆಗಳನ್ನು ಸಲ್ಲಿಸಬೇಕು ಎನ್ನುವ ಭಾವ ಅತ್ಯಂತ ಸರಳ ಸಜ್ಜನಿಕೆಯ ಸಾತ್ವಿಕ ಜನರಲ್ಲಿ ಮಾತ್ರ ಬರಲು ಸಾಧ್ಯ ಎಂದು ಶ್ರೀ ಪ.ಪೂ ಶಿವರಾಮಕೃಷ್ಣನಂದ ಭಾರತಿ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.




ಅವರು ಸಮೀಪದ ಭಾಗ್ಯನಗರ ಪಟ್ಟಣದ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವ್ಯಾಸಂಗ ಮಾಡಿದ 1987-88 ರಿಂದ 1997-98 ನೇ ಸಾಲಿನ 1 ರಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

'ನಾವು ಇಂದು ಏನಾದರೂ ಗಳಿಸಿದ್ದರೆ ಅದೆಲ್ಲವೂ ಈ ಸಮಾಜದಿಂದ ಗಳಿಸಿದ್ದೇವೆ. ಹಾಗಾಗಿ ಈ ಸಮಾಜದಿಂದ ಪಡೆದದ್ದನ್ನು ನಾವು ಮತ್ತೆ ಸಮಾಜಕ್ಕೆ ವಾಪಸ್ ನೀಡಬೇಕಾಗುತ್ತದೆ. ಆ ಮೂಲಕ ಅಕ್ಷರ ಕಲಿಸಿದ ಗುರುಗಳು, ಜನ್ಮ ಕೊಟ್ಟ ಹೆತ್ತವರು, ಆಡಿ ಬೆಳೆದ ಭೂಮಿಯ ಋಣವನ್ನು ತೀರಿಸಲೇಬೇಕು. ಸುಮಾರು 30 ವರ್ಷ ನಂತರವೂ ವಿದ್ಯೆ ಕಲಿಸಿದ ಗುರುವಿನ ಮಹತ್ವ ಅರಿತು, ಅವರಿಗೆ ವಂದಿಸುವ ಕಾರ್ಯ ಮಾದರಿಯಾಗಿದೆ. ಉಜ್ವಲ ಜೀವನ ನಿರ್ಮಿಸಬೇಕಾದರೆ ಗುರುವಿನ ಉತ್ತಮ ಮಾರ್ಗದರ್ಶನ ಅತ್ಯವಶ್ಯಕವಾಗಿದೆ' ಎಂದರು.

ನಿವೃತ್ತ ಹಿರಿಯ ಶಿಕ್ಷಕ ನಿಂಗಪ್ಪ ಮಾತನಾಡಿ ಉದ್ಯೋಗ ಇನ್ನಿತರೆ ಕಾರಣಗಳಿಗಾಗಿ ಹುಟ್ಟಿದ ಊರು ಬಿಟ್ಟು ಬೇರೆಲ್ಲೋ ನೆಲೆಸಿದವರು ತಮ್ಮ ದಿನನಿತ್ಯದ ಒತ್ತಡ ಜೀವನದಲ್ಲಿ ಹುಟ್ಟಿದ ಊರು, ಹೆತ್ತವರು, ಅಕ್ಷರ ಕಲಿಸಿದ ಗುರುಗಳನ್ನು ನೆನೆಸಿಕೊಳ್ಳಲಾಗದ ಸ್ಥಿತಿಗೆ ತಲುಪಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಿರಿಯ ವಿದ್ಯಾರ್ಥಿಗಳೆಲ್ಲರನ್ನೂ ಒಟ್ಟುಗೂಡಿಸುವ, ತಮ್ಮ ಹಳೆಯ ದಿನಗಳನ್ನು ಮೆಲುಕು ಹಾಕುವಂತಹ ಸುಂದರ ಕ್ಷಣಗಳಿಗೆ ಈ ಕಾರ್ಯಕ್ರಮ ಸಾಕ್ಷಿಯಾಗಿದೆ' ಎಂದರು.

ಹಳೇ ವಿದ್ಯಾರ್ಥಿಗಳ ಶಿಕ್ಷಕಿ ಶಾರದಾ ಮಾತನಾಡಿ, ನಮ್ಮ ವೃತ್ತಿ ಜೀವನದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವುದೊಂದೇ ನಮಗೆ ಗುರಿಯಾಗಿತ್ತು. ಯಾವ ಮಕ್ಕಳು ಕಲಿಕೆಯಲ್ಲಿ ಮುಂದಿದ್ದಾರೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಹೇಗೆ ಪ್ರಗತಿ ಹೊಂದಿಸಬೇಕು. ಅವರಲ್ಲಿರುವ ಕೌಶಲ್ಯಗಳನ್ನು ಮುಖ್ಯವಾಹಿನಿಗೆ ಹೇಗೆ ತರಬೇಕು. ಶಾಲೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸಬೇಕು ಎನ್ನುವುದೊಂದೆ ಆಸೆಯಾಗಿರುತ್ತದೆ. ಭವಿಷ್ಯ ರೂಪಿಸಿಕೊಂಡು ಕೆಲವರು ಉತ್ತಮ ಸತ್ಪ್ರಜೆಗಳಾಗುತ್ತಾರೆ. ಕೆಲವರು ಕೃಷಿಕರು, ವಕೀಲರು, ವ್ಯವಹಾರಿಕರು, ಉಪಾಧ್ಯಾಯರು, ಸರಕಾರಿ ಇಲಾಖೆಯಲ್ಲಿ ನೌಕರರು ಹೀಗೆ ಹಲವಾರು ಕ್ಷೇತ್ರದಲ್ಲಿ ಸೇರಿಹೋಗಿರುತ್ತಾರೆ. ಅವರನ್ನೆಲ್ಲರನ್ನು ಒಗ್ಗೂಡಿಸಿಕೊಂಡು ನಿಮ್ಮ ಶಾಲಾ ದಿನಗಳನ್ನು ಮೆಲುಕು ಹಾಕುವಂತಹ ಸುಂದರ ವೇದಿಕೆಯನ್ನು ಸೃಜಿಸಿ ಗುರುಗಳಿಗೆ ಗೌರವಿಸುತ್ತಿರುವುದು ನಿಜಕ್ಕೂ ಪೂರ್ವಜನ್ಮದ ಪುಣ್ಯವೆಂದು ಭಾವಿಸುತ್ತೇವೆ. ಶಿಷ್ಯರು ಎಷ್ಟೇ ದೊಡ್ಡವರಾದರೂ ನಮಗೆ ಅವರು ಮಕ್ಕಳಂತೆಯೇ ಭಾಸವಾಗುತ್ತದೆ.

ಅದೇ ಗುರುಶಿಷ್ಯರ ಸಂಬಂಧ ಈ ಸಂಬಂಧ ಹೀಗೆ ಇರಲಿ, ಪ್ರತಿಯೊಬ್ಬರು ಸಮಾಜದಲ್ಲಿ ಉತ್ತಮ ಕೆಲಸಗಳನ್ನು ಮಾಡಬೇಕು. ಭವಿಷ್ಯದಲ್ಲಿ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವಂತಾಗಬೇಕು ಎಂದು ಹೇಳಿದರು.

ಹಳೆಯ ವಿದ್ಯಾರ್ಥಿಗಳು 30 ವರ್ಷಗಳ ಹಿಂದಿನ ನೆನಪನ್ನು ಮೆಲುಕು ಹಾಕಿದರು. ಇದೇ ವೇಳೆ ನಿವೃತ್ತ ಶಿಕ್ಷಕರನ್ನು ಸತ್ಕರಿಸಿ ಗೌರವಿಸಲಾಯಿತು. ನಿವೃತ್ತ ಶಿಕ್ಷಕರು, ಹಳೆಯ ವಿದ್ಯಾರ್ಥಿಗಳು ಇದ್ದರು.

# ಎಲ್‌ಐಸಿಯ ವಾರ್ಷಿಕ ಸರ್ವ ಸಾಧಾರಣ ಸಭೆ



**ಗೋಕಾಕ:** ನಗರದ ಜ್ಞಾನ ಮಂದಿರದಲ್ಲಿ ಗೋಕಾಕ ಭಾರತೀಯ ಜೀವ ನಿಗಮದ (ಎಲ್‌ಐಸಿ) ಶಾಖೆಯ ಪ್ರತಿನಿಧಿಗಳ ಸಂಘದ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ನಡೆಯಿತು. ಹಿರಿಯರಾದ ರಾಜಶೇಖರ ಮುನ್ನೋಳಿಮಠ ಅವರು ಸಭೆಯ ಅಧ್ಯಕ್ಷತೆ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ರಾಜಕೀಯ ಮುಖಂಡರು ಅಶೋಕ ಪೂಜಾರಿ, ಭರತೇಶ ಕಲಗೌಡ, ಪುಂಡಲೀಕ ಪಾವಸೆ ಹಾಗೂ ಉಪ ಶಾಖಾಧಿಕಾರಿ ಉಮೇಶ ಬಡಿಗೇರ ಅವರು ಆಗಮಿಸಿದ್ದರು.

ಈ ಸಭೆಯಲ್ಲಿ ಮುಂದಿನ 2 ವರ್ಷದ ಅವಧಿಗೆ ಹೊಸ ಆಡಳಿತ ಮಂಡಳಿಯಲ್ಲಿ ಅಧ್ಯಕ್ಷರಾಗಿ ವಾಸು ಬಂಡಿನ್ನವರ, ಸತತ ಮೂರು ಬಾರಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಕಾರ್ಯದರ್ಶಿಯಾಗಿ ಪ್ರಕಾಶ ಚಂದರಗಿ, ಖಜಾಂಚಿಯಾಗಿ ಎಮ್ ಡಿ ಹಲಕರ್ಣಿ ಹಾಗೂ ಇಅ ಮೆಂಬರಾಗಿ ರಾಜಶೇಖರ ಮುನ್ನೋಳಿಮಠ, ರುದ್ರಪ್ಪಾ ಗೋಕಾಕ, ರಾಜು ಹುಲಕುಂದ, ಆಲಮ್ ಚಪ್ಪು ಮತ್ತು 15 ಜನ ನಿರ್ದೇಶಕರನ್ನು ಆಯ್ಕೆ ಮಾಡಲಾಯಿತು.

ಅಭಿವೃದ್ಧಿ ಅಧಿಕಾರಿ ಸೈಯದ ಅಲಿ ಸರ್ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು ಶ್ರೀಕಾಂತ ಮಹಾಜನ ವಂದನಾರ್ಪಣೆ ಮಾಡಿದರು. ಕೊನೆಯಲ್ಲಿ ರಾಷ್ಟ್ರಗೀತೆ ಯೊಂದಿಗೆ ಮುಕ್ತಾಯವಾಯಿತು.

### ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಸಂತೋಷ ಲಾಡ್ ಅಭಿಪ್ರಾಯ

# ಯುವ ಸಮುದಾಯ ಜಾಗೃತವಾದರೆ ಮಾತ್ರ ಪ್ರಜಾಪ್ರಭುತ್ವ ಉಳಿಯುತ್ತದೆ

**ಧಾರವಾಡ:** ಸಮಾಜದ ಎಲ್ಲರಿಗೂ ಎಲ್ಲ ಕ್ಷೇತ್ರಗಳಲ್ಲೂ ಸಮಾನತೆ ತರುವುದು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಆಶಯವಾಗಿದೆ. ಪ್ರಜೆಗಳೆ ಪ್ರಜಾಪ್ರಭುತ್ವದ ಜೀವಾಳ ಎಂದು ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಹೇಳಿದರು.

ಅವರು ಇಂದು (ಸೆ.15) ಬೆಳಿಗ್ಗೆ ಕರ್ನಾಟಕ ಕಾಲೇಜು ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಆಯೋಜಿಸಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಮೀಸಲಾತಿ ಪರಿಕಲ್ಪನೆ ಬಂದಿದ್ದು, ಎಲ್ಲರಲ್ಲೂ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮಾನತೆ ಮತ್ತು ಸಮಾನ ಅವಕಾಶ ತರುವುದಾಗಿದೆ. ಯುವ ಸಮುದಾಯ ಜಾಗೃತವಾದರೆ ಮಾತ್ರ ಪ್ರಜಾಪ್ರಭುತ್ವ ಸದೃಡವಾಗಿ ಉಳಿಯಲು ಸಾಧ್ಯವಾಗುತ್ತದೆ ಎಂದು ಸಚಿವ ಸಂತೋಷ ಲಾಡ್ ಅವರು ತಿಳಿಸಿದರು.

ಪ್ರಜಾಪ್ರಭುತ್ವದಲ್ಲಿ ನಂಬಿಗೆ ಉಳ್ಳವರು, ಪ್ರಜಾಪ್ರಭುತ್ವ ಗಟ್ಟಿಗೊಳಿಸಿದ್ದಾರೆ. ಶಿಕ್ಷಣದಿಂದ ಮಾತ್ರ ಇಂದು ಪ್ರಜಾಪ್ರಭುತ್ವ ಉಳಿಯಲು ಸಾಧ್ಯ. ಸಮಾಜವನ್ನು ಉಳಿಸುವ, ಪ್ರಜಾಪ್ರಭುತ್ವ ಕಾಪಾಡುವ ಕಾರ್ಯ ಯುವಜನರ ಕೈಯಲ್ಲಿದೆ. ಇಂದಿನ ಯುವಕರು ಜಾಗೃತರಾಗಬೇಕು ಎಂದರು. ಮೀಸಲಾತಿ ಪರಿಕಲ್ಪನೆ ಬಂದಿದ್ದು ಸರ್ವರ ಅಭಿವೃದ್ಧಿಯನ್ನು ಸಮಾನವಾಗಿ ಸಾಧಿಸುವದಾಗಿದೆ. ಮಹಿಳೆಯರಿಗೆ ಆಸ್ತಿ ಹಕ್ಕು ಬಂದಿದ್ದು,




ಇತರ ಹಕ್ಕುಗಳನ್ನು ನೀಡಿದ್ದು ಲಿಂಗ ಸಮಾನತೆಯಾಗಿದೆ ಎಂದು ಸಚಿವರು ಹೇಳಿದರು.

ಸರ್ವರು, ಸರ್ವ ಜನಾಂಗದವರು ಸಮಾನರಾಗಿ ಬದುಕುವ ಅವಕಾಶ, ಹಕ್ಕು, ಎಲ್ಲವನ್ನು ನಮ್ಮ ಸಂವಿಧಾನ ನೀಡಿದೆ. ಸಂವಿಧಾನದ ಕಲಂ 19, ಕಲಂ 32 ರಂತ ಮಹತ್ವದ ಹಕ್ಕುಗಳನ್ನು ನಮಗೆ ನೀಡಲಾಗಿದೆ. ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಒಂದು ಸಮುದಾಯ, ವ್ಯವಸ್ಥೆಗೆ ಸೀಮಿತಗೊಳಿಸದೆ ಅವರ ಅಪಾರ ಕೊಡುಗೆಯನ್ನು ಸ್ಮರಿಸಿ, ಅವರ ಉದಾರತೆಯನ್ನು ಅಳವಡಿಸಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು. ಇವತ್ತು ಡ್ರಗ್ಸ್ ಒಂದು ಶಾಪವಾಗಿ, ಅಭಿವೃದ್ಧಿ ವಿರೋಧಿಯಾಗಿ ಬೆಳೆಯುತ್ತಿದೆ. ಇದನ್ನು ತಡೆಗಟ್ಟುವ ಜವಾಬ್ದಾರಿ ಎಲ್ಲರ ಮೇಲಿದೆ. ಸಂಪೂರ್ಣವಾಗಿ ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಗುರಿಯಾಗಬೇಕು ಎಂದು ಸಚಿವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಕಳೆದ 2008 ರಿಂದ ದೇಶದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲಾಗುತ್ತಿದೆ. ಪ್ರಜೆಗಳೇ ಪ್ರಜಾಪ್ರಭುತ್ವದ ಜೀವಾಳ. ಇಂದಿನ ಲಿಂಗ ಸಮಾನತೆ, ಅವಕಾಶಗಳ ಸಮಾನತೆ, ಎಲ್ಲರಿಗೂ ಆಸ್ತಿ ಹಕ್ಕು ಲಭಿಸಿದ್ದು ಸಂವಿಧಾನ ನೀಡಿರುವ ಅವಕಾಶವಾಗಿದೆ. ಮಹಿಳೆಯರು ಸಂವಿಧಾನ ನೀಡಿರುವ ಅವಕಾಶಗಳನ್ನು ಬಳಸಿಕೊಂಡು, ಅಭಿವೃದ್ಧಿ ಹೊಂದಬೇಕು ಎಂದರು. ವೇದಿಕೆಯಲ್ಲಿ ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ ಸನದಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಹಾಗೂ ವಿವಿಧ



ಸಂಘಟನೆಗಳ ಪ್ರಮುಖರು, ಇತರರು ಇದ್ದರು.

**ಸ್ಪರ್ಧೆ ವಿಜೇತರು:**

**ಭಾಷಣ:** ಕುಂದಗೋಳ ಸರಕಾರಿ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿನಿ ಗಾಯತ್ರಿ ವಡ್ಡರ ಪ್ರಥಮ, ಧಾರವಾಡ ಸರಕಾರಿ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿನಿ ಉದ್ದಮ್ಮ ಅಜ್ಜನಕಟ್ಟಿ ದ್ವಿತೀಯ ಮತ್ತು ಕಲಘಟಗಿ ಸರಕಾರಿ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿನಿ ನೀಲಾ ಹುಚ್ಚನೂರ ಹಾಗೂ ಸರಕಾರಿ ಮಹಿಳಾ ಕಾಲೇಜಿನ ವಿದ್ಯಾರ್ಥಿನಿ ಶ್ವೇತಾ. ಬಿ. ಅವರು ತೃತೀಯ ಸ್ಥಾನ ಪಡೆದಿದ್ದಾರೆ.

**ಚಿತ್ರಕಲಾ ಸ್ಪರ್ಧೆ:** ಜೆಎಸ್‌ಎಸ್ ಹಾಲಭಾವಿ ಸ್ಕೂಲ್ ಆಫ್ ಆರ್ಟ್‌ದ ವಿದ್ಯಾರ್ಥಿ ಕಾರ್ತಿಕ ಕುಂಬಾರ ಪ್ರಥಮ, ಸರಕಾರಿ ಚಿತ್ರಕಲಾ ಮಹಾವಿದ್ಯಾಲಯದ ವಿದ್ಯಾರ್ಥಿ ಸಂಜು ಪರಮೇಶ್ವರ ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದಿದ್ದಾರೆ.

**ಛಾಯಾಚಿತ್ರ ಸ್ಪರ್ಧೆ:** ಛಾಯಾಚಿತ್ರ ಮುಕ್ತ ಸ್ಪರ್ಧೆಯಲ್ಲಿ ಅಳಗವಾಡಿ ಗ್ರಾಮದ ಪೋಟೊಗ್ರಾಫರ್ ರಾಘವೇಂದ್ರ ರಾಯಬಾಗಿ ಅವರು ಪ್ರಥಮ, ವಾರ್ತಾ ಇಲಾಖೆ ಪೋಟೊಗ್ರಾಫರ್ ಬಸವರಾಜ ಪಟಾತ್ ಅವರು ದ್ವಿತೀಯ ಮತ್ತು ಹುಬ್ಬಳ್ಳಿಯ ವಿನಾಯಕ ಬಾಕಳೆ ತೃತೀಯ ಸ್ಥಾನವನ್ನು ಹಾಗೂ ಧಾರವಾಡದ ಉಮೇಶ ಚಿಕ್ಕೊಡಿ ಅವರು ಸಮಾಧನಕರ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿ ವಿಭಾಗದಲ್ಲಿ ವಿದ್ಯಾರ್ಥಿನಿ ಸಂಗಮಿತ್ರ ಜನ್ನಾ ಅವರು ಪ್ರಥಮ ಸ್ಥಾನ ಪಡೆದಿದ್ದಾರೆ.ಕಾರ್ಯಕ್ರಮದ ನಂತರ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಕೆಸಿಡಿ ಕಾಲೇಜು ಮೈದಾನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಸಿಬ್ಬಂದಿಗಳು ಸಾರ್ವಜನಿಕರು ಭಾಗವಹಿಸಿದ್ದರು.

ಜಾಗೃತಿ ಮೂಡಿಸಿದ ಸೈಕಲ್ ಜಾಥಾ: ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಿಮಿತ್ತ ಆಯೋಜಿಸಿದ್ದ ಸೈಕಲ್ ಜಾಥಾ ಕಾರ್ಯಕ್ರಮದಲ್ಲಿ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಿತ್ತಿ ಪತ್ರ, ಘೋಷಣೆಗಳ ಮೂಲಕ ಭಾಗವಹಿಸಿ ಜನರಲ್ಲಿ ಜಾಗೃತಿ ಮೂಡಿಸಿದರು.

ಸೈಕಲ್ ಜಾಥಾವು ಕೆ ಸಿ ಡಿ ಕಾಲೇಜಿನಿಂದ ಪ್ರಾರಂಭವಾಗಿ ಸಪ್ತಾಪುರ್ ಬಾವಿ, ದಾಸನಕೊಪ್ಪ ಸರ್ಕಲ್, ಜಂಬಿಗಿ ಹಾಸ್ಪಿಟಲ್, ಎಲ್.ಇ.ಎ ಕ್ಯಾಂಟೀನ್, ಜ್ಯೂಬಲಿ ಸರ್ಕಲ್ ಮಾರ್ಗವಾಗಿ ಸಂಚರಿಸಿ ಆರ್.ಎನ್. ಶೆಟ್ಟಿ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡಿತು.

# ನೀಟ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ

**ಮೋಳೆ:** ಅತೀ ಹಿಂದೂಳಿದ ವಿಶ್ವಕರ್ಮ ಸಮಾಜದ ಅತ್ಯಂತ ಬಡ ಕುಟುಂಬದಲ್ಲಿ ಜನಿಸಿ, ಸೌಲಭ್ಯಗಳಿಲ್ಲದ ಕುಗ್ರಾಮದಲ್ಲಿ ಸರ್ಕಾರದ ಯಾವುದೇ ಸೌಲಭ್ಯ ಪಡೆದುಕೊಳ್ಳದೇ ಸರ್ಕಾರಿ ಶಾಲೆಯಲ್ಲಿ ಶಿಕ್ಷಣ ಪಡೆದು, ಇಂದು ದೇಶ ಮಟ್ಟದ ಎಂಬಿಬಿಎಸ್ ಪ್ರವೇಶ ಪರೀಕ್ಷೆಯಲ್ಲಿ ದೇಶಕ್ಕೆ 19050 ಮತ್ತು ರಾಜ್ಯಕ್ಕೆ 1030 ರ್‍ಯಾಂಕ್ ಪಡೆದು, ಆಯ್ಕೆಯಾಗಿದ್ದಕ್ಕೆ ನಮ್ಮ ಸಮಾಜದ ಕೀರ್ತಿಯನ್ನು ಹೆಚ್ಚಿಸಿದ್ದಾನೆಂದು ವಿಶ್ವಕರ್ಮ ಸಮಾಜದ ಮುಖಂಡ ಶ್ರೀಶೈಲ ಬಡಿಗೇರ ಹೇಳಿದರು.

ಅವರು, ರವಿವಾರ ದಿ. 14 ರಂದು ಕಾಗವಾಡ ತಾಲೂಕಿನ ಮೋಳೆ ಗ್ರಾಮದಲ್ಲಿ ವಿಶ್ವಕರ್ಮ ಸಮಾಜದಿಂದ ಎಂಬಿಬಿಎಸ್ ಪದವಿಗೆ ಆಯ್ಕೆಗೊಂಡಿರುವ ಶಿವಾನಂದ ಮಹಾದೇವ ಬಡಿಗೇರ ಅವರಿಗೆ ಏರ್ಪಸಿದಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡುತ್ತಿದ್ದರು. ವಿಶ್ವಕರ್ಮ ಸಮಾಜ ಅತ್ಯಂತ ಬಡತನದಿಂದ ಕೂಡಿದ್ದು, ತಮ್ಮ ಕಲೆಯ ಮೂಲಕ ಜೀವನ ಸಾಗಿಸುತ್ತಿದ್ದು, ಇಂತಹ ಕುಟುಂಬದಲ್ಲಿ ಪಿಯುಸಿ ದ್ವಿತೀಯ ಪರೀಕ್ಷೆಯಲ್ಲಿ ಶೇ. 93 ರಷ್ಟು ಅಂಕಗಳನ್ನು ಪಡೆಯುವ ಮೂಲಕ ಇತ್ತಿಚಿಗೆ ನಡೆದ ನಿಟ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಮೈಸೂರಿನ ಮೆಡಿಕಲ್



ಕಾಲೇಜಿಗೆ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದರು.

ಶಿಕ್ಷಕ ಮಹಾದೇವ ಬಡಿಗೇರ ಮಾತನಾಡಿ, ಕರ್ನಾಟಕ ಹಾಗೂ ಮಹಾರಾಷ್ಟ್ರದ ಗಡಿ ಭಾಗ, ಮೂಲಸೌಲಭ್ಯ ವಂಚಿತ ಮೋಳೆ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಓದಿ, ನಂತರ ಜಮಖಂಡಿಯ ಕಾಲೇಜಿನಲ್ಲಿ ಕಷ್ಟಪಟ್ಟು ಪಿಯುಸಿ ಓದಿ, ಶೇ. 93 ರಷ್ಟು ಅಂಕ ಪಡೆದು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯಾವುದೇ ತರಬೇತಿಯನ್ನು ಪಡೆಯದೇ ನಿಟ್ ಪರೀಕ್ಷೆಯಲ್ಲಿ ಎಂಬಿಬಿಎಸ್‌ಗೆ ಅರ್ಹತೆ ಪಡೆದಿರುವುದು ನಮ್ಮ ಗ್ರಾಮದ ಹಾಗೂ ನಮ್ಮ ಸಮಾಜದ ಹಿರಿಮೆಯನ್ನು ಹೆಚ್ಚಿಸಿದ್ದಾನೆ ಎಂದರು.

ಸನ್ಮಾನ ಸ್ವೀಕರಿಸಿ, ಮಾತನಾಡಿದ ಶಿವಾನಂದ ಬಡಿಗೇರ, ಸತತ ಪರಿಶ್ರಮ, ಓದು, ತಂದೆ-ತಾಯಿ, ಶಿಕ್ಷಕರ ಮಾರ್ಗದರ್ಶನ ಪಡೆದು, ಈ ಪರೀಕ್ಷೆಯಲ್ಲಿ ಸಾಧನೆ ಮಾಡಲು ಸಾಧ್ಯವಾಗಿದೆ. ಯಾವುದೇ ಪರೀಕ್ಷೆ ಎದುರಿಸಲು ಕಠಿಣ ಪರಿಶ್ರಮ ಅಗತ್ಯವಾಗಿದ್ದು, ಓದುವ ಛಲವೊಂದಿದ್ದರೇ ಎಂತಹ ಸಾಧನೆಯನ್ನು ಮಾಡಬಹುದಾಗಿದೆ ಎಂದರು.

ಈ ವೇಳೆ ವಿಶ್ವಕರ್ಮ ಸಮಾಜದ ಮುಖಂಡರಾದ ಶ್ರೀಶೈಲ ಬಡಿಗೇರ, ಮಹಾದೇವ ಬಡಿಗೇರ, ಭಾಗೀರಥಿ ಬಡಿಗೇರ ಸುಧಾಕರ ಬಡಿಗೇರ, ಹಣಮಂತ ಕಡಕೋಳ,ಅಣ್ಣಪ್ಪಾ ಬಡಿಗೇರ, ರವೀಂದ್ರ ಬಡಿಗೇರ, ವಿನೋದ ಮಹೇಶ್ಕರ, ತಾತ್ಯಾಸಾಬ ಬಡಿಗೇರ, ಕುಮಾರ ಬಡಿಗೇರ, ಆನಂದ ಕಂಬಾರ, ಸಂಜಯ ತೇಜುಮಾಳಿ ಸೇರಿದಂತೆ ಸಮಾಜದ ಅನೇಕ ಮುಖಂಡರು ಉಪಸ್ಥಿತರಿದ್ದರು.

### ರಾಷ್ಟ್ರೀಯ ಲೋಕ ಅದಾಲತ್ | ಒಂದೇ ದಿನದಲ್ಲಿ 32570 ಪ್ರಕರಣ ಇತ್ಯರ್ಥ

# ಆಸ್ತಿ ವಿವಾದ ಲೋಕ ಅದಾಲತ್‌ನಲ್ಲಿ ಇತ್ಯರ್ಥ

**ಬಾಗಲಕೋಟೆ:** ಕಳೆದ 2017 ರಿಂದ ಕುಟುಂಬದ ಮಧ್ಯ ನಡೆದ ಆಸ್ತಿವಿವಾದಕ್ಕೆ ಸಂಬಂಧಿಸಿದ ಪ್ರಕರಣವನ್ನು ಶನಿವಾರ ನಡೆದ ಲೋಕ ಅದಾಲತ್‌ನಲ್ಲಿ ರಾಜೀ ಸಂಧಾನ ಮಾಡುವ ಮೂಲಕ ಇತ್ಯರ್ಥಪಡಿಸಲಾಯಿತು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಬಾಗಲಕೋಟೆ ಜಿಲ್ಲಾ ನ್ಯಾಯಾಲಯದಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ಕುಟುಂಬದ ಮಧ್ಯ ಆಸ್ತಿಗೆ ಸಂಬಂಧಿಸಿದಂತೆ, ಬಾಲಕೋಟೆ ಜಿಲ್ಲೆಯ ಕೆಳ ಹಂತದ ನ್ಯಾಯಾಲಯದಿಂದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಪ್ರಕರಣ ಬಂದಿತ್ತು. ಕುಟುಂಬಸ್ಥರ ಮಧ್ಯ ರಾಜೀ ಸಂಧಾನದ ಮೂಲಕ ಪ್ರಕರಣವನ್ನು ಇತ್ಯರ್ಥಪಡಿಸಲಾಯಿತು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ್ ಅವರ ನೇತೃತ್ವದಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ಬಾಕಿ ಇರುವ 8533 ಪೈಕಿ 5085 ಹಾಗೂ ವಾಜ್ಯ ಪೂರ್ವ ಪ್ರಕರಣಗಳಲ್ಲಿ 29014 ಪೈಕಿ 27485 ಪ್ರಕರಣ ಸೇರಿ ಒಟ್ಟು 32570 ಪ್ರಕರಣಗಳನ್ನು ರಾಜಿ ಸಂದಾನ ಮೂಲಕ ಇತ್ಯರ್ಥಪಡಿಸಲಾಯಿತು. ಅದಾಲತ್‌ನಲ್ಲಿ ಒಟ್ಟು 137.93 ಕೋಟಿ ರೂ.ಗಳ ಪ್ರಕರಣದ ಮೊತ್ತವಾಗಿತ್ತು.

ಜಿಲ್ಲಾ ನ್ಯಾಯಾಲಯದಲ್ಲಿ ಬಾಕಿ ಇರುವ 2551 ಪ್ರಕರಣಗಳ ಪೈಕಿ 1490, ಬೀಳಗಿ ನ್ಯಾಯಾಲಯದಲ್ಲಿ 190 ಪೈಕಿ 112, ಮುಧೋಳ ನ್ಯಾಯಾಲಯದಲ್ಲಿ 465 ಪೈಕಿ 450, ಬನಹಟ್ಟಿ ನ್ಯಾಯಾಲಯದಲ್ಲಿ 1648 ಪೈಕಿ 532, ಹುನಗುಂದ ನ್ಯಾಯಾಲಯದಲ್ಲಿ 1301 ಪೈಕಿ 1037, ಇಲಕಲ್ಲ ನ್ಯಾಯಾಲಯದಲ್ಲಿ 438 ಪೈಕಿ 355, ಬಾದಾಮಿ ನ್ಯಾಯಾಲಯದಲ್ಲಿ 662 ಪೈಕಿ 564, ಜಮಖಂಡಿ ನ್ಯಾಯಾಲಯದಲ್ಲಿ 1248 ಪೈಕಿ 534 ಹಾಗೂ ಎಫ್.ಟಿ.ಎಸ್.ಸಿ ಕೋರ್ಟನಲ್ಲಿ 30 ಪೈಕಿ 1 ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು.

ವಾಜ್ಯಪೂರ್ವ ಪ್ರಕರಣಗಳಲ್ಲಿ ಬ್ಯಾಂಕಿಗೆ ಸಂಬಂಧಿಸಿದ 1591 ಪೈಕಿ 62 ಪ್ರಕರಣಗಳಿಗೆ ಒಟ್ಟು 1.03 ಕೋಟಿ ರೂ. ಗಳಿಗೆ ಇತ್ಯರ್ಥಗೊಂಡರೆ, ವಿದ್ಯುತ ಬಿಲ್‌ಗೆ ಸಂಬಂಧಿಸಿದ 165 ಪೈಕಿ 165 ಇತ್ಯರ್ಥಗೊಂಡು 3.23 ಲಕ್ಷ ರೂ, ನೀರಿನ ಕರಕ್ಕೆ ಸಂಬಂಧಿಸಿದ 2418 ಪೈಕಿ 2418ಕ್ಕೆ 1 ಕೋಟಿ ರೂ, ಸಂಚಾರಿ ಉಲ್ಲಂಘನೆಗೆ ಸಂಬಂಧಿಸಿದ 9250 ಪೈಕಿ 9250ಕ್ಕೆ 30.94 ಲಕ್ಷ ರೂ, ಆಸ್ತಿ ತೆರಿಗೆ ಸಂಬಂಧಿಸಿದಂತೆ 15519 ಪೈಕಿ 15519 ಪ್ರಕರಣಗಳನ್ನು 7.99 ಕೋಟಿ ರೂ.ಗಳಿಗೆ ಇತ್ಯರ್ಥಪಡಿಸಲಾಯಿತು.

ಲೋಕ ಅದಾಲತ್ ಶಿಬಿರದಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ಹಾಗೂ ಎಫ್‌ಟಿಎಸ್‌ಸಿ-1 ನ್ಯಾಯಾಧೀಶ ಪಿ.ಎಸ್.ಸದರ ಜೋಶಿ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧಿಶ ಜಿ.ಎ.ಮೂಲಿಮನಿ, 4ನೇ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಧೀಶ ರಾಜೇಶ ಕರಣಮ್ ಕೆ, 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಮೇಶ ಎಕಬೋಟೆ, ಜಿಲ್ಲಾ ನ್ಯಾಯಾಧೀಶರು ಮತ್ತು ಕುಟುಂಬ ನ್ಯಾಯಾಧೀಶ ಕೃಷ್ಣಮೂರ್ತಿ ಪಡಸಲಗಿ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ ಮಹೇಶ ಪಾಟೀಲ, 1ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧಿಶ ಸುದೀಪ ನಾಯಕ, 2ನೇ ಹೆಚ್ಚುವರು ಹಿರಿಯ ದಿವಾಣಿ ನ್ಯಾಯಾಧೀಶ ರಾಜಶೇಖರ ತಿಳಗಂಜಿ, ಪ್ರಧಾನ ದಿವಾಣಿ ನ್ಯಾಯಾಧೀಶ ಮುರಗೇಂದ್ರ ತುಬಾಕೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಇದ್ದರು.

# ಯುವಕರು ಕೃಷಿಯತ್ತ ಒಲವು ತೋರಲಿ



**ಬೈಲಹೊಂಗಲ:** ಸಮಾಜದಲ್ಲಿ ವಿದ್ಯಾವಂತ ಯುವಕರು ಸಹ ಕೃಷಿಯತ್ತ ಒಲವು ತೋರಿದರೆ ಆಹಾರದ ಕೊರತೆ ನೀಗಲಿದ್ದು, ಸಾವಯವ ಕೃಷಿ ಕೈಗೊಂಡು ಆರೋಗ್ಯ ಸದೃಡವಾಗಿಸಿಕೊಳ್ಳಬೇಕೆಂದು ಕೃಷಿ ಇಲಾಖೆಯ ಜಿಲ್ಲಾ ಜಂಟಿ ನಿರ್ದೇಶಕ ಎಸ್.ಡಿ.ಕೊಳೇಕರ ಹೇಳಿದರು.

ಅವರು ತಾಲೂಕಿನ ದೇವಲಾಪೂರ ಗ್ರಾಮದ ಜಯಲಕ್ಷ್ಮೀ ದೇಶನೂರ ಅವರ ಜಮೀನಿನಲ್ಲಿ ಹಮ್ಮಿಕೊಂಡ ಕೃಷಿ ರೈತ ಕಲ್ಯಾಣ ಇಲಾಖೆ ಭಾರತ ಸರಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕೃಷಿ ಇಲಾಖೆ, ರಾಷ್ಟ್ರೀಯ ಬೀಜ ನಿಗಮ ನಿಯಮಿತ ಧಾರವಾಡ ಹಾಗೂ ರಾಷ್ಟ್ರೀಯ ಖಾಧ್ಯತೈಲ್ ಅಭಿಯಾನ- ಎಣ್ಣೆಕಾಳು ಯೋಜನೆಯಡಿ ಎಣ್ಣೆಕಾಳು ಬೆಳೆಗಳ ಸಮಗ್ರ ನಿರ್ವಹಣೆ ಕುರಿತು ರೈತರಿಗೆ ತರಬೇತಿ ಹಾಗೂ ಸೋಯಾ ಬೆಳೆಯಲ್ಲಿ ಕ್ಷೇತ್ರೋತ್ಸವ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ, ಕೃಷಿ ಆಧಾರಿತ ಗೃಹ ಉದ್ಯೋಗಗಳನ್ನು ಸೃಷ್ಟಿಸಿಕೊಂಡರೆ ಸರಕಾರ ಸಹಾಯ ಧನ ನೀಡಲಿದ್ದು ಯೋಜನೆಗಳ ಉಪಯೋಗ ಪಡೆದು ನೆಮ್ಮದಿ ಜೀವನ ನಡೆಸಲು ಕರೆ ನೀಡಿದರು.

ಜಿಲ್ಲಾ ಉಪ ಕೃಷಿ ನಿರ್ದೇಶಕ ಸಲೀಮ್ ಸಂಘತ್ರಾಸ್ ಮಾತನಾಡಿ, ರೈತರು ಕೃಷಿಯಲ್ಲಿ ಅಭಿವೃದ್ಧಿ ಹೊಂದಲು ರಾಜ್ಯ ಸರಕಾರದ ಕೃಷಿ ಇಲಾಖೆಯು ಹಲವಾರು ತಂತ್ರಜ್ಞಾನಗಳನ್ನು ಅವಿಸ್ಕಾರ ಮಾಡಿದೆ. ಜೊತೆಗೆ ಕೃಷಿಭಾಗ್ಯ ಯೋಜನೆಯಡಿ ಕೃಷಿ ಹೊಂಡ, ಡ್ರೀಪ್, ಸ್ಪಿಂಕ್ಲರ್, ಸಮಗ್ರ ಕೃಷಿ ಮಾಹಿತಿಗಾಗಿ ಕೃಷಿ ಸಂಜೀವಿನಿ ಎನ್ನುವ ಹಲವಾರು ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದೆ. ರೈತರು ಖಾಧ್ಯ ತೈಲ ಬೆಳೆಗಳಿಗೂ ಹೆಚ್ಚಿನ ಮಹತ್ವ ಕೊಟ್ಟು ರಾಷ್ಟ್ರವನ್ನು ಅಭಿವೃದ್ಧಿಯತ್ತ ನಡೆಸಬೇಕೆಂದರು.

ಸಹಾಯಕ ಕೃಷಿ ನಿರ್ದೇಶಕ ಬಸವರಾಜ ದಳವಾಯಿ, ನಿವೃತ ಕೃಷಿ ಅಧಿಕಾರಿ ವಿ.ಎಂ.ಹೊಸೂರ, ಕೆವಿಕೆ ವಿಜ್ಞಾನಿ ಜಿ.ಬಿ.ವಿಶ್ವನಾಥ, ಸಂಪನ್ಮೂಲ ವ್ಯಕ್ತಿ ಸಿ.ಐ.ಹೂಗಾರ, ಗ್ರಾ.ಪಂ.ಅಧ್ಯಕ್ಷೆ ಜೈರಾಭಿ ನಧಾಪ್, ಕೃಷಿ ಅಧಿಕಾರಿ ಎಸ್.ಎಫ್.ಪೂಜೇರ, ನಿವೃತ ಕೃಷಿ ಅಧಿಕಾರಿ ಚನ್ನಪ್ಪ ಬಂದಕ್ಕನವರ, ಪ್ರಗತಿಪರ ರೈತರಾದ ಜಯಲಕ್ಷ್ಮೀ ದೇಶನೂರ, ವೀರಣ್ಣ ದೇಶನೂರ, ಬಸವರಾಜ ಬಂದಕ್ಕನವರ, ಕೃಷಿ ಸಖಿ ದೀಪಾ ಸಾಧುನ್ನವರ ಮುಂತಾದವರು ಉಪಸ್ಥಿತರಿದ್ದರು. ರೈತರಿಗೆ ಮನವರಿಕೆ ಆಗಲು ಬೆಳೆಗಳ ಬಿತ್ತನೆ, ರಕ್ಷಣೆ, ಕೊಯ್ಲು, ರಾಶಿ ಮಾಡುವ ಕುರಿತಾಗಿ ಇದೇ ಸಂದರ್ಭದಲ್ಲಿ ಬಿತ್ತಿ ಪತ್ರಗಳ ಮೂಲಕ ಮಾಹಿತಿ ಒದಗಿಸಿದರು. ಆತ್ಮ ತಾಲೂಕಾ ತಾಂತ್ರಿಕ ವ್ಯವಸ್ಥಾಪಕ ಚಂದ್ರಕಾಂತ ಮರಡಿ ಸ್ವಾಗತಿಸಿ, ನಿರೂಪಿಸಿದರು. ಕೃಷಿ ಅಧಿಕಾರಿ ಯಮನಪ್ಪ ಮಾದಿಗರ ವಂದಿಸಿದರು.

## ಮತ್ತೆ ಗದ್ದುಗೆ ಏರಿದ ಯಾದವಾಡ ಬಣ

**ರಾಮದುರ್ಗ:** ಭಾರಿ ಕುತುಹಲ ಕೆರಳಿಸಿದ್ದ ತಾಲೂಕಿನ ಖಾನಪೇಠ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಮಹಾದೇವಪ್ಪ ಯಾದವಾಡ ಬಣ ಬಹುತಮತದೊಂದಿಗೆ ನಾಲ್ಕನೆ ಭಾರಿಯೂ ಅಧಿಕಾರ ಗದ್ದುಗೆ ಗಟ್ಟಿಗೊಳಿಕೊಂಡಿದೆ.

ಒಟ್ಟು 18 ಸದಸ್ಯರ ಪೈಕಿ ಮಾಜಿ ಶಾಸಕ ಮಹಾದೇವಪ್ಪ ಯಾದವಾಡ ಬಣದ 11 ಸದಸ್ಯರು ಚುನಾಯಿತರಾಗಿದ್ದರೆ, ಈ ಬಾರಿ ಭಾರಿ ಪೈಪೋಟಿ ಒಡ್ಡಿದ್ದ ಕಾರ್ಖಾನೆಯ ಸಂಸ್ಥಾಪಕ ಅಧ್ಯಕ್ಷ, ಮಾಜಿ ಶಾಸಕ ದಿ. ಬಿ.ಬಿ.ಹಿರೇರಡ್ಡಿ ಬಣದ 7 ಸದಸ್ಯರು ಚುನಾಯಿತರಾಗಿದ್ದಾರೆ.

**ವಿಜಯಿಶಾಲಿಗಳು:** ಮಾಜಿ ಶಾಸಕ ಮಹಾದೇವಪ್ಪ ಯಾದವಾಡ ಬಣದ ಸಾಮಾನ್ಯ ಮೀಸಲು ಕ್ಷೇತ್ರ ಅ ವರ್ಗದಿಂದ ಈರಪ್ಪ ಹರನಟ್ಟಿ (4272), ಬಸವರಾಜ ತುಪ್ಪದ (4160), ಭೀಮಪ್ಪ ಬೆಳವಣಕಿ (4141), ಮಲ್ಲಪ್ಪ ಯಾದವಾಡ (4874), ಮಹಾದೇವಪ್ಪ ಯಾದವಾಡ (5003), ಮಹಾದೇವಪ್ಪ ಆತಾರ (4061), ಅ ವರ್ಗ ಮಹಿಳಾ ಮೀಸಲು ಕ್ಷೇತ್ರದಿಂದ ಅನ್ನಪೂರ್ಣಾ ಪಾಟೀಲ (3953), ಶಶಿಕಲಾ ಸೋಮಗೊಂಡ (4177), ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಬಂದ್ರ ರಜಪೂತ (3917), ಹಿಂದುಳಿದ ಬ ವರ್ಗದಿಂದ ಶಿವಾನಂದ ಮುಷ್ಠಿಗೇರಿ (4863), ಬ ವರ್ಗ ಸಹಕಾರ ಸಂಸ್ಥೆಗಳ ಮತಕ್ಷೇತ್ರ ಬಸವಗೌಡ್ರ ದ್ಯಾಮನಗೌಡ್ರ (40) ಮತಗಳನ್ನು ಪಡೆದು ವಿಜೇತರಾಗಿದ್ದಾರೆ.

ಮಾಜಿ ಶಾಸಕ ದಿ. ಬಿ.ಬಿ.ಹಿರೇರಡ್ಡಿ ಬಣದ ಸಾಮಾನ್ಯ ಮೀಸಲು ಕ್ಷೇತ್ರ ಅ ವರ್ಗದಿಂದ ಗೋಪಾಲರಡ್ಡಿ ಚಿಕ್ಕರಡ್ಡಿ(ಸಂಶಿ) (4132), ಪರತಗೌಡ ಪಾಟೀಲ (4129), ಪರಪ್ಪಗೌಡ ಪಾಟೀಲ (4087), ಬಸವರಾಜ ಹಿರೇರಡ್ಡಿ (4377), ಪರಿಶಿಷ್ಟ ಪಂಗಡ ಅ ವರ್ಗದಿಂದ ಭೀಮಪ್ಪ ಬಸಿಡೋಣಿ (4137), ಹಿಂದುಳಿದ ಅ ವರ್ಗದಿಂದ ಈರಣ್ಣ ಕಾಮನ್ನವರ(4157), ಡ ವರ್ಗದಿಂದ ಬಸಪ್ಪ ಸಿದರಡ್ಡಿ (73) ಮತಗಳನ್ನು ಪಡೆದು ಚುನಾಯಿತರಾಗಿದ್ದಾರೆ.

# ರಕ್ತದಾನ ಎಲ್ಲಕ್ಕಿಂತ ಶ್ರೇಷ್ಠ ದಾನ



ಹಜಾರೆ ಫೌಂಡೇಶನ್ ಬಳಗದವರು ಹಮ್ಮಿಕೊಂಡ ರಕ್ತದಾನ ಶಿಭಿರದಲ್ಲಿ ಪಾಲ್ಗೊಂಡು ಮಾತನಾಡಿದ ಶಾಸಕ ಸಿದ್ದು ಸವದಿ

**ರಬಕವಿ-ಬನಹಟ್ಟಿ:** ರಕ್ತದಾನ ಎಲ್ಲ ದಾನಗಳಿಗಿಂತ ಅತೀ ಶ್ರೇಷ್ಠವಾದುದು ಹೀಗಾಗಿ ಪ್ರತಿಯೊಬ್ಬರು ರಕ್ತದಾನ ಮಾಡುವ ಮೂಲಕ ಮತ್ತೊಂದು ಜೀವಕ್ಕೆ ಆಸರೆಯಾಗಬೇಕು ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಅವರು ಭಾನುವಾರ ಹಜಾರೆ ಫೌಂಡೇಶನ್ ಬಳಗದವರು ಹಮ್ಮಿಕೊಂಡ ರಕ್ತದಾನ ಶಿಭಿರದಲ್ಲಿ ಪಾಲ್ಗೊಂಡು ಮಾತನಾಡಿದರು. ಮಾರಣಾಂತಿಕ ಪರಸ್ಥಿತಿಗಳಿಂದ ಬಳಲುತ್ತಿರುವ ರೋಗಿಗಳಿಗೆ ದೀರ್ಘಕಾಲ ಬದುಕಲು ರಕ್ತದಾನ ಅತ್ಯುಪಯುಕ್ತವಾಗಿದೆ. ಜಗತ್ತಿನಲ್ಲೇ ಅತಿ ಶ್ರೇಷ್ಠವಾದ ದಾನ ಎಂದರೆ ಅದು ರಕ್ತದಾನ. ನೀವು ರಕ್ತದಾನ ಮಾಡಿದರೆ ಒಬ್ಬರಿಗೆ ಜೀವ ಕೊಟ್ಟಂತೆಯೇ ಸರಿ ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಈ ಸಂದರ್ಭದಲ್ಲಿ ಹಜಾರೆ ಫೌಂಡೇಶನದ ಕಾರ್ಯಾಧ್ಯಕ್ಷ ಸತೀಶ ಹಜಾರೆ ಮಾತನಾಡಿ, ಸ್ವಯಂಪ್ರೇರಿತರಾಗಿ ರಕ್ತದಾನವನ್ನು ಮಾಡುವುದರಿಂದ ಆರೋಗ್ಯ ಸಮತೋಲನ ಸ್ಥಿತಿಯಲ್ಲಿರುತ್ತದೆ. ರಕ್ತಕ್ಕೆ ಯಾವುದೇ ಜಾತಿ ಬೇಧ ಭಾವವಿಲ್ಲ ಅದು ಎಲ್ಲರಿಗೂ ಎಲ್ಲ ಕಾಲಕ್ಕೂ ಸಲ್ಲುವಂತದ್ದಾಗಿದೆ. ಇಂದಿನ ಯುವ ಸಮುದಾಯ ದುಶ್ಚಟಕ್ಕೆ ಬಲಿಯಾಗಿ ರಕ್ತವಿಲ್ಲದೆ ಸಾವಿನ ದವಡೆಯಲ್ಲಿ ಸಿಲುಕುತ್ತಿದ್ದಾರೆ, ರಕ್ತವೆಂದರೆ ಅದು ಜೀವದ್ರವ್ಯ ಹೀಗಾಗಿ ಸತ್ವಯುತ ಆಹಾರವನ್ನು ಸೇವಿಸಿ ಆರೋಗ್ಯವಂತರಾಗಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಪ. ಪೂ. ನಿರಂಜನ ಮಹಾಸ್ವಾಮಿಗಳು, ವಿ. ಟಿ. ನಿಂಗಸಾನಿ, ಶ್ರೀಶೈಲ ಕುಂಬಾರ, ಸತೀಶ ಬೆಳಗಲಿ, ಬಿ. ಡಿ. ನೇಮಗೌಡ, ಬಸವರಾಜ ಕಲಾದಗಿ, ಸಂಜಯ ತೆಗ್ಗಿ, ಲಕ್ಕಪ್ಪ ಪಾಟೀಲ, ಸುರೇಶ ಅಕ್ಕಿವಾಟ ಸೇರಿದಂತೆ ಅನೇಕರು ಇದ್ದರು.

## ಇಂದು ಪೋಷಣ ಮಾಸಾಚರಣೆ

**ಬೆಳಗಾವಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಪೋಷಣ ಮಾಸಾಚರಣೆ-2025 ಮತ್ತು ಗ್ರಾಮೀಣ ವಿಧಾನಸಭಾ ಕ್ಷೇತ್ರದ ವಿಕಲಚೇತನ ಫಲಾನುಭವಿಗಳಿಗೆ ಸಾಧನ-ಸಲಕರಣೆಗಳ ವಿತರಣಾ ಕಾರ್ಯಕ್ರಮ ಮಂಗಳವಾರ (ಸೆ.16) ಬೆಳಿಗ್ಗೆ 10 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ.ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಜಾಥಾ ಉದ್ಘಾಟಿಸಲಿದ್ದಾರೆ.ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.ಕಾರ್ಯಕ್ರಮದ ವಿಶೇಷ ಆಮಂತ್ರಿತರಾಗಿ ಸರ್ಕಾರದ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ-2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ರಸ್ತೆ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷ ಭರಮಗೌಡ ಕಾಗೆ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷ ಮಹಾಂತೇಶ ಕೌಜಲಗಿ ಆಗಮಿಸಲಿದ್ದಾರೆ.

# ವಿದ್ಯಾರ್ಥಿಗಳು ಸಾಧನೆಗೈದಾಗ ಶಿಕ್ಷಕರ ಶ್ರಮ ಸಾರ್ಥಕ

**ಬೈಲಹೊಂಗಲ:** ವಿದ್ಯಾರ್ಥಿಗಳು ಸಮಾಜದಲ್ಲಿ ವಿವಿಧ ತೆರನಾಗಿ ಸಾಧನೆಗೈದಾಗ ಮಾತ್ರ ಶಿಕ್ಷಕರ ಶ್ರಮ-ಸೇವೆ ಸಾರ್ಥಕವಾಗುತ್ತದೆ. ಮಕ್ಕಳ ಮನೋವಿಕಾಸದೊಂದಿಗೆ ಉಜ್ವಲ ಭವಿಷ್ಯಕ್ಕಾಗಿ ದುಡಿಯಬೇಕೆಂದು ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ಹೇಳಿದರು.

ಅವರು ಪಟ್ಟಣದ ಇಂಚಲ ರಸ್ತೆಯಲ್ಲಿನ ಬೃಂದಾವನ ಕನ್ವೆನ್ಸನ್ ಹಾಲ್‌ದಲ್ಲಿ ರವಿವಾರ ನಡೆದ ಪಟ್ಟಿಹಾಳ (ಕೆ.ಬಿ.) ಗ್ರಾಮದ ಶ್ರೀ ಬಸವೇಶ್ವರ ಪ್ರೌಢಶಾಲೆಯ ನಿವೃತ ಮುಖ್ಯೋಪಾಧ್ಯಾಯ ಎಸ್.ಎಂ.ಪಾಟೀಲ ಅವರು 35 ವರ್ಷಗಳ ಕಾಲ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ವಯೋ ನಿವೃತ್ತಿ ನಿಮಿತ್ಯ ಗೆಳೆಯರ ಬಳಗ, ಶಿಷ್ಯ ಬಳಗದಿಂದ ಹಮ್ಮಿಕೊಂಡ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರು ವಿದ್ಯಾರ್ಥಿಗಳ ಶಿಕ್ಷಣ ದಾಹ ನೀಗಿಸಲು ಸದಾ ಪ್ರಯತ್ನ ಮಾಡಬೇಕು. ಬದುಕಿಗೆ ಯಾವದೇ ಸಂಸ್ಥೆಯು ಭದ್ರತೆ ಒದಗಿಸಿದ್ದರೆ ಅದಕ್ಕೆ ಬದ್ಧರಾಗಿ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿ ಯಶಸ್ವಿಯಾಗಲು ಕರೆ ನೀಡಿದರು.

ಹುಬ್ಬಳ್ಳಿ-ಬೈಲಹೊಂಗಲದ ರುದ್ರಾಕ್ಷಿಮಠದ ಪೂಜ್ಯ ಬಸವಲಿಂಗ ಶ್ರೀಗಳು ಸಾನಿಧ್ಯ ವಹಿಸಿ ಮಾತನಾಡಿ, ಜಗತ್ತಿನಲ್ಲಿಯೇ ಗುರುವಿಗೆ ಅತೀ ಶ್ರೇಷ್ಠ ಸ್ಥಾನವಿದ್ದು ರಾಷ್ಟ್ರ ಅಭಿವೃದ್ದಿಯಾಗಬೇಕಾದರೆ ಶಾಲೆಗಳಲ್ಲಿ ಗುಣಮಟ್ಟದ



ಶಿಕ್ಷಣ ದೊರೆಯಬೇಕು. ಶಿಕ್ಷಕರು ಸ್ವಾರ್ಥತೆ ಮೆರೆಯದೇ ಮಕ್ಕಳ ಶಿಕ್ಷಣಕ್ಕಾಗಿ ನಿಸ್ವಾರ್ಥತೆಯಿಂದಲೂ ಸೇವೆಗೈಯುವದು ಅತೀ ಅವಶ್ಯವಾಗಿದೆ. ಶಿಕ್ಷಕ ಸೇವೆಯ ಅವಕಾಶ ಇತಿಹಾಸ ಸೃಷ್ಟಿಸಬೇಕು. ಇತರರಿಗೆ ಮಾದರಿಯಾಗಿ ಭಗವಂತ ಕರುಣಿಸಿದ ವೃತ್ತಿಯನ್ನು ಸಾರ್ಥಕಪಡಿಸಿಕೊಳ್ಳಬೇಕು. ಶಿಕ್ಷಕ ಎಸ್. ಎಂ.ಪಾಟೀಲ ಅವರು ಸುಮಾರು 35 ವರ್ಷಗಳ ಕಾಲ ಸೇವೆ ಸಲ್ಲಿಸಿ ವಿದ್ಯಾರ್ಥಿಗಳ ಪಾಲಿಗೆ ಬೆಳಕ್ಕಾಗಿದ್ದಾರೆ ಎಂದರು.

ಅಥಿತಿಗಳಾಗಿ ನಿವೃತ ಸಹ ನಿರ್ದೇಶಕ ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆಯ ಗಜಾನನ ಮಣ್ಣಿಕೇರಿ, ಎಪಿಎಂಸಿ ನಿವೃತ ಅಧಿಕಾರಿ ಐ.ಎಲ್.ಪಾಟೀಲ, ವ್ಹಿ.ಎಸ್.ಕೋರಿಮಠ, ಮುಖ್ಯೋಪಾಧ್ಯಾಯ ಎಂ.ಸಿ.ಹಂಗರಕಿ, ಶ್ರೀಶೈಲ ಶರಣಪ್ಪನವರ, ಡಾ.ಷಣ್ಮುಖ ಗಣಾಚಾರಿ, ಗಝಲ್ ಕವಿ ಚಂದ್ರಶೇಖರ ಪೂಜೇರಿ, ಶಿಕ್ಷಕ ಗಜಾನಂದ ಸೊಗಲನ್ನವರ, ಚಿತ್ರಕಲಾ ನಿವೃತ ಶಿಕ್ಷಕ ವ್ಹಿ.ಕೆ.ಬಡಿಗೇರ, ಭಾರತಿದೇವಿ ಪಾಟೀಲ, ಜಾನಕಿದೇವಿ ಭದ್ರಣ್ಣವರ, ಅಮಿತ ಪಾಟೀಲ, ಮಂಜುನಾಥ ಕಾಜಗಾರ, ಎಸ್.ಎಸ್.ಬಳಿಗಾರ, ಕಸಾಪ ಮಾಜಿ ಜಿಲ್ಲಾಧ್ಯಕ್ಷ ಮೋಹನ ಪಾಟೀಲ, ಡಿ.ಎನ್.ಸಾಲಿಮಠ, ಎಂ.ಐ.ಪಾಟೀಲ, ಚಂದ್ರಶೇಖರ ಕೊಪ್ಪದ, ಮಹೇಶ ಕೋಟಗಿ, ಬಿ.ಡಿ.ಬಣಶೆಟ್ಟಿ, ಸಂತೋಷ ಕೊಳವಿ, ಶಿವಯೋಗಿ ಸಣ್ಣಮನಿ, ಬಸವರಾಜ ಬಡಿಗೇರ, ಬಸನಗೌಡಾ ಪಾಟೀಲ, ಪ್ರದೀಪ ಹಂಜಿ, ಎ.ಎಸ್. ಹುಳ್ಳೇರ, ಅಣ್ಣಪ್ಪ ಅರಳಿಕಟ್ಟಿ ಮುಂತಾದವರು ಆಗಮಿಸಿದ್ದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ನಾಗನೂರಿನ ಸಾಹಿತಿ ಜಾನಕಿದೇವಿ ಭದ್ರಣ್ಣವರ ರಚಿಸಿದ ಗುರುವಿನ ಮಹಿಮೆ ಕವನ ಸಂಕಲನವನ್ನು ಗಣ್ಯರು ಬಿಡುಗಡೆಗೊಳಿಸಿದರು.

ಶಿವಪ್ರಸಾದ ಪಾಟೀಲ ಸ್ವಾಗತಿಸಿದರು. ಶಿಕ್ಷಕ ಉಮಾರೂಢ ತಲ್ಲೂರ ನಿರೂಪಿಸಿದರು. ಅಕ್ಷತಾ ಪಾಟೀಲ ವಂದಿಸಿದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :189, Postal Reg No. PMG/KA/NK/BM/135/25-27 / POST AT Vantamury Colony Post Office